20 February 2026 Friday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

info.varthaman@gmail.com

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು ಗ್ರಾಮಾಂತರ | ಕೊಡಗು | ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 103 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

**ಭಾವನಾಂತರಂಗ**

ವರ್ಷವೆಲ್ಲ ಖಾಲಿ ಇದ್ದ ಭೂಮಿಗೆ ಒಂದು ಮಳೆ ಸಾಕು ಹಸಿರಾಗಲು! ಹಾಗೆಯೇ ನಮ್ಮ ಒಂದು ಒಳ್ಳೆಯ ನಿರ್ಧಾರ ಸಾಕು ಜೀವನವನ್ನು ಸುಂದರಮಯವಾಗಿಸಿಕೊಳ್ಳಲು!

-ಸ್ನೇಹಾ ಆನಂದ್


ಶಿವಾಜಿ ನೀಡಿರುವ ಕೊಡುಗೆ ಅಪಾರ: ಶಾಸಕ ಸಿಎನ್ ಮಂಜೇಗೌಡ ಹೇಳಿಕೆ — ಪುಟ ಸಂ. 2


ಹೊಣೆಗಾರಿಕೆಯಿಂದ ಕಾರ್ಯನಿರ್ವಹಿಸಲು ಜಿಲ್ಲಾಧಿಕಾರಿ ಸೂಚನೆ — ಪುಟ ಸಂ. 3


ಬಂಡೀಪುರ, ನಾಗರಹೊಳೆ ಸಫಾರಿ ಪುನರಾರಂಭ ಪ್ರತಿಭಟನೆ ಎಚ್ಚರಿಕೆ — ಪುಟ ಸಂ. 4

## ಸಾರಿಗೆ ನೌಕರರ ಮುಷ್ಕರಕ್ಕೆ ಬ್ರೇಕ್

### ಜಂಟಿ ಕ್ರಿಯಾ ಸಮಿತಿ ಸಭೆ ನಿರ್ಧಾರ । ಸರ್ಕಾರದಿಂದ ಬೇಡಿಕೆ ಈಡೇರಿಕೆ ಭರವಸೆ

**ಬೆಂಗಳೂರು:** ಸಾರಿಗೆ ನೌಕರರ ಬೇಡಿಕೆಗಳನ್ನು ಈಡೇರಿಸುವುದಾಗಿ ಸರ್ಕಾರದಿಂದ ಭರವಸೆ ಸಿಕ್ಕಿದ ಹಿನ್ನೆಲೆಯಲ್ಲಿ ನಾಳೆಯಿಂದ ನಡೆಸಲು ಉದ್ದೇಶಿಸಿದ್ದ ಸಾರಿಗೆ ಮುಷ್ಕರವನ್ನು ನೌಕರರು ಕೈಬಿಟ್ಟಿದ್ದಾರೆ. ಮುಷ್ಕರ ಕೈಬಿಟ್ಟಿದ್ದರಿಂದ ಬಿಎಂಟಿಸಿ ಮತ್ತು ಕೆಎಸ್‌ಆರ್‌ಟಿಸಿ ಸೇರಿದಂತೆ ಎಲ್ಲಾ ನಿಗಮಗಳ ಬಸ್‌ಗಳು ಎಂದಿನಂತೆ ರಸ್ತೆಗೆ ಇಳಿಯಲಿವೆ.

ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಗುರುವಾರ ನಡೆದ ಸಾರಿಗೆ ನೌಕರರ ಜಂಟಿ ಕ್ರಿಯಾ ಸಮಿತಿ ಸಭೆಯಲ್ಲಿ ಈ ಮಹತ್ವದ ತೀರ್ಮಾನ ತೆಗೆದುಕೊಳ್ಳಲಾಗಿದೆ. ಸಾರಿಗೆ ನೌಕರರ ಬೇಡಿಕೆ ಮತ್ತು ಸರ್ಕಾರದ ಭರವಸೆ ಕುರಿತು ಚರ್ಚೆ ನಡೆಸಿದ ಬಳಿಕ ಮುಷ್ಕರ ಕೈಬಿಡುವ ತೀರ್ಮಾನ ಕೈಗೊಳ್ಳಲಾಯಿತು. ಈಗ ವಿದ್ಯಾರ್ಥಿಗಳಿಗೆ ಪರೀಕ್ಷೆ ಇರುವುದರಿಂದ ಮುಷ್ಕರವನ್ನು ಕೈಬಿಟ್ಟು ಭರವಸೆ ಈಡೇರಿಕೆಗೆ ಮಾರ್ಚ್ 2ರ ಹೊಸ ಡೆಡ್‌ಲೈನ್ ನೀಡಲಾಯಿತು.

ಮುಷ್ಕರ ಕೈಬಿಟ್ಟರೂ ಸತ್ಯಾಗ್ರಹ ಹೋರಾಟವನ್ನು ಕೈಬಿಡದಿರಲು ನೌಕರರು ನಿರ್ಧರಿಸಿದ್ದಾರೆ. ತಮ್ಮ ಬೇಡಿಕೆಗಳ ಈಡೇರಿಕೆಗಾಗಿ ಮಾರ್ಚ್ 2ರಂದು ರಾಜ್ಯಾದ್ಯಂತ ಉಪವಾಸ ಸತ್ಯಾಗ್ರಹ ನಡೆಸಲು ತೀರ್ಮಾನ ತೆಗೆದುಕೊಂಡಿದ್ದಾರೆ. ಬೆಂಗಳೂರು, ಹಾಸನ, ಚಿಕ್ಕಮಗಳೂರು ಸೇರಿದಂತೆ ರಾಜ್ಯದ ವಿವಿಧ ಜಿಲ್ಲಾ ಕೇಂದ್ರಗಳಲ್ಲಿ ನೌಕರರು ಉಪವಾಸ ಸತ್ಯಾಗ್ರಹ ನಡೆಸಲಿದ್ದಾರೆ. ಸರ್ಕಾರದ ಭರವಸೆಗಳ ಬಗ್ಗೆ ಮತ್ತೊಮ್ಮೆ ಚರ್ಚಿಸಿ ಮುಂದಿನ ದಿನಗಳಲ್ಲಿ ಅಂತಿಮ ಹಂತದ ಹೋರಾಟದ ನಿರ್ಧಾರ ಕೈಗೊಳ್ಳಲಾಗುವುದು ಎಂದು ಒಕ್ಕೂಟದ ಪದಾಧಿಕಾರಿಗಳು ತಿಳಿಸಿದ್ದಾರೆ.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ ಕಾರ್ಯದರ್ಶಿ ವಿಜಯ್ ಭಾಸ್ಕರ್ ಮಾತನಾಡಿ, ಏಕಾಏಕಿ ನಾವು ಜನರಿಗೆ ತೊಂದರೆ ನೀಡುವುದಿಲ್ಲ. ನಾಳೆಯಿಂದಲೇ ಬಸ್ ಬಂದ್ ಮಾಡುತ್ತೇವೆ ಎಂದು ಹೇಳುವುದಿಲ್ಲ. ಸರ್ಕಾರ ನಮ್ಮ ಬೇಡಿಕೆ ಈಡೇರಿಸದೇ ಇದ್ದರೆ ಮುಷ್ಕರ ಅನಿವಾರ್ಯ. ಇನ್ನೊಂದು 550 ಕೋಟಿ ರೂ. ನೀಡಿದರೆ ಮುಷ್ಕರದ ಅಗತ್ಯವೇ ಇಲ್ಲ ಎಂದು ಹೇಳಿದರು.




**ಪ್ರಮುಖ ಬೇಡಿಕೆಗಳು ಏನು?**

38 ತಿಂಗಳ ಹಿಂಬಾಕಿ ಹಣವನ್ನು ಪೂರ್ತಿಯಾಗಿ ನೀಡಬೇಕು. ಸರ್ಕಾರಿ ನೌಕರರಿಗೆ ನೀಡುವ ವೇತನಕ್ಕೆ ಸರಿಸಮಾನ ವೇತನ ನೀಡಬೇಕು. ಕಾರ್ಮಿಕರಿಗೆ ಮೇಲಧಿಕಾರಿಗಳ ಕಿರುಕುಳ ನಿಲ್ಲಬೇಕು ಹಾಗೂ 1-1-2024 ರಿಂದ ವೇತನ ಜಾರಿಗೊಳಿಸಬೇಕು ಎನ್ನುವುದು ನೌಕರರ ಪ್ರಮುಖ ಬೇಡಿಕೆಯಾಗಿದೆ. ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಕೆಎಸ್‌ಆರ್‌ಟಿಸಿ ಎಂಡಿ ಅಕ್ರಂ ಪಾಷಾ ಮಾತನಾಡಿ, ನೌಕರರ ಬೇಡಿಕೆಗಳನ್ನು ಕುರಿತು ಸಭೆ ಮಾಡಿ ನಿರ್ಧಾರ ತೆಗೆದುಕೊಳ್ಳುತ್ತೇವೆ. ಸಾರಿಗೆ ಸಚಿವರ ಜೊತೆ ಚರ್ಚೆ ಮಾಡುತ್ತೇನೆ. ನೌಕರರು ಬಸ್ ಬಂದ್ ಮಾಡುವುದಿಲ್ಲ ಎಂಬ ನಂಬಿಕೆಯಿದೆ. ಮತ್ತೆ ಸಾರಿಗೆ ಮುಖಂಡರ ಜೊತೆ ಸಭೆಗೆ ಶೀಘ್ರ ದಿನಾಂಕ ನಿಗದಿ ಮಾಡುತ್ತೇವೆ ಎಂದು ಭರವಸೆ ನೀಡಿದರು.

**ವಾಪಸ್‌ಗೆ ನೌಕರರ ವಿರೋಧ**

ಸಾರಿಗೆ ನೌಕರರ ಜಂಟಿ ಕ್ರಿಯಾ ಸಮಿತಿ ಮುಷ್ಕರ ವಾಪಸ್ ಪಡೆದಿದ್ದಕ್ಕೆ ನೌಕರರು ಸ್ಥಳದಲ್ಲೇ ಆಕ್ಷೇಪ ವ್ಯಕ್ತಪಡಿಸಿದರು. ನಮ್ಮ ಒಪ್ಪಿಗೆ ಇಲ್ಲದೇ ಸಂಘಟನೆ ಮುಷ್ಕರ ಕೈಬಿಟ್ಟ ನಿರ್ಧಾರವನ್ನು ವಿರೋಧಿಸಿದರು. ಸಂಘಟನೆ ನಿರ್ಧಾರವನ್ನು ನಾವು ಒಪ್ಪುವುದಿಲ್ಲ ಎಂದು ಘೋಷಣೆ ಕೂಗಿದರು. ಬೇಡಿಕೆ ಈಡೇರಿಸುವರಗೆ ನಾವು ಹೋರಾಟ ಮಾಡುತ್ತೇವೆ ಎಂದು ಪ್ರತಿಭಟಿಸಿದರು. ಕೊನೆಗೆ ಜಂಟಿ ಸಮಿತಿ ಸದಸ್ಯರು ಮಾತಿಗೆ ಬೆಲೆ ನೀಡಿ ಒಲ್ಲದ ಮನಸ್ಸಿನಿಂದ ಸಾರಿಗೆ ನೌಕರರು ಮುಷ್ಕರ ಕೈಬಿಡಲು ಒಪ್ಪಿಗೆ ನೀಡಿದರು.




## ಸಫಾರಿ ಅನುಮತಿಗೆ ಆಕ್ರೋಶ

### ಅರಣ್ಯ ಭವನಕ್ಕೆ ಮುತ್ತಿಗೆ ಹಾಕಿ ಪ್ರತಿಭಟನೆ

**ಮೈಸೂರು:** ಬಂಡೀಪುರ ಮತ್ತು ನಾಗರಹೊಳೆಯಲ್ಲಿ ಸಫಾರಿ ಆರಂಭಿಸಲು ಅನುಮತಿ ನೀಡಿರುವುದನ್ನು ಖಂಡಿಸಿ ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘದ ಮುಖಂಡರು ಅರಣ್ಯ ಭವನಕ್ಕೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.



ಬೇಡ ಬೇಡ ಸಫಾರಿ ಬೇಡ', 'ಬೇಕೆ ಬೇಕು ನ್ಯಾಯ ಬೇಕು' 'ಸಫಾರಿ ಆರಂಭಿಸಿರುವ ಸರ್ಕಾರಕ್ಕೆ ಧಿಕ್ಕಾರ' ಎಂದು ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಅರಣ್ಯ ಸಚಿವರು ಹಂತ- ಹಂತವಾಗಿ ಸಫಾರಿ ಆರಂಭಿಸುತ್ತೇವೆ ಎಂದು ಹೇಳಿಕೆ ನೀಡಿದ್ದಾರೆ. ರಾಜಕಾರಣಿಗಳ ಮಕ್ಕಳು ಬೆಳಿಗ್ಗೆ ಕಾಡು ನೋಡಿ ಮಜಾ ಮಾಡಿ ಮನೆಯಲ್ಲಿ ಆರಾಮವಾಗಿ ಮಲಗುತ್ತಾರೆ. ಆದರೆ ಅನ್ನ ನೀಡುವ ರೈತ ಕಾಡಂಚಿನಲ್ಲಿ ಬೆಳಿಗ್ಗೆ ವ್ಯವಸಾಯ ಮಾಡಿ, ರಾತ್ರಿ ಫಸಲು ಕಾದು ಕಾಡುಪ್ರಾಣಿಗಳಿಗೆ ಬಲಿಯಾಗುತ್ತಿದ್ದಾರೆ. ಸಫಾರಿಯಿಂದ ಯಾರಿಗೂ ಲಾಭ ವಿಲ್ಲ. ದೇವಸ್ಥಾನದ ಪೂಜೆಗೆ ಕಾಡಿಗೆ ಹೋಗಲು ಅವಕಾಶವಿಲ್ಲ. ಆದರೆ ಮದ್ಯ, ಡಿಜೆ ಹಾಕುವವರಿಗೆ ಅವಕಾಶ ನೀಡುತ್ತಿರುವುದು ಖಂಡನೀಯ ಎಂದು ಕಿಡಿಕಾರಿದರು.

ರೈತರು ಭಿಕ್ಷೆ ಬೇಡಿ ನೂರು ಕೋಟಿ ಕೊಡುತ್ತೇವೆ. ನೀವು ಕುಟುಂಬ ಸಮೇತರಾಗಿ ಬಂದು ಇಲ್ಲಿ ಬದುಕುತ್ತೀರಾ? ಮೈಸೂರು, ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವರು ಯಾಕೆ ಮಾತನಾಡುತ್ತಿಲ್ಲ. ಹೀಗಾಗಿ ತಕ್ಷಣವೇ ಸಫಾರಿ ನಿಲ್ಲಿಸಬೇಕು ಎಂದು ಒತ್ತಾಯಿಸಿದರು.

ಸಫಾರಿಯಿಂದ ಸಾಕಷ್ಟು ಅನ್ಯಾಯವಾಗುತ್ತಿದೆ. ಬಂಡವಾಳಶಾಹಿ ಒತ್ತಡಕ್ಕೆ ಬಲಿಯಾಗಿ ರೆಸಾರ್ಟ್ ಮಾಡುತ್ತಿರುವ ಗುಲಾಮಗಿರಿಗೆ ಒಲಗಾಗಿ ಸಫಾರಿ ಆರಂಭಿಸುತ್ತಿದ್ದಾರೆ. ಸಫಾರಿಯಿಂದ ಕಾಡು ಪ್ರಾಣಿಗಳು ನಾಡಿಗೆ ಬರುತ್ತಿದ್ದು, ರೈತರನ್ನು ಬಲಿ ಪಡೆಯುತ್ತಿದೆ.

ಪುಟ 2ಕ್ಕೆ

## ಇಬ್ಬರು ಕೊಲೆ ಅಪರಾಧಿಗಳಿಗೆ ಜೀವಾವಧಿ ಶಿಕ್ಷೆ, 1 ಲಕ್ಷ ದಂಡ

**ಮೈಸೂರು:** ವ್ಯಕ್ತಿಯೊಬ್ಬರನ್ನು ಕೊಲೆ ಮಾಡಿದ್ದ ಅಪರಾಧಿಗಳಿಗೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಜೀವಾವಧಿ ಶಿಕ್ಷೆ ವಿಧಿಸಿ ತೀರ್ಪು ನೀಡಿದೆ. ಪುನೀತ ಮತ್ತು ಪವನ್ ಶಿಕ್ಷೆಗೆ ಒಳಗಾದವರು.

ನಗರದ ಇಲವಾಲ ಪೊಲೀಸ್ ಠಾಣೆ ವ್ಯಾಪ್ತಿಯ ಆನಂದೂರು ಗ್ರಾಮದ ಪುನೀತ ಮತ್ತು ಪವನ್ ಅವರು ಅದೇ ಗ್ರಾಮದ ಮಂಜುನಾಥ ಎಂಬುವರ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿ ಕೊಲೆ ಮಾಡಿದ್ದರು. ಅಪರಾಧ ಸಾಬೀತಾದ ಹಿನ್ನೆಲೆಯಲ್ಲಿ ಮೈಸೂರಿನ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಉಷಾರಾಣಿ ಅವರು ಶಿಕ್ಷೆ ವಿಧಿಸಿ ತೀರ್ಪು ನೀಡಿದ್ದಾರೆ.

ಆನಂದೂರು ಗ್ರಾಮದ ಬೆಟ್ಟೇಗೌಡ ಎಂಬುವವರ ಅಂಗಡಿ ಮುಂಭಾಗ ಮಂಜುನಾಥ ಮೇಲೆ ಆರೋಪಿಗಳು ಅವಾಚ್ಯ

ಪುಟ 2ಕ್ಕೆ

## ಇಷ್ಟಾದರೂ ಕೊಟ್ಟಿದ್ದೇವಲ್ಲ! ನೌಕರರು ಖುಷಿ ಪಡಿ: ಡಿಕೆಶಿ

**ಬೆಂಗಳೂರು:** ಸರ್ಕಾರದ ಪರಿಸ್ಥಿತಿಯನ್ನೂ ಸಾರಿಗೆ ನೌಕರರು ಅರ್ಥ ಮಾಡಿಕೊಳ್ಳಬೇಕು. ಸರ್ಕಾರ ಸದ್ಯ ಅಷ್ಟಾದರೂ ಕೊಟ್ಟಿದ್ದಾರಲ್ಲ ಅದಕ್ಕೆ ನೌಕರರು ಖುಷಿ ಪಡಬೇಕು ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು.




ಅಸ್ಸಾಂ ವಿಧಾನಸಭಾ ಚುನಾವಣಾ ವೀಕ್ಷಕರಾಗಿ ಬೆಂಗಳೂರಿನಿಂದ ತೆರಳುವ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಾರಿಗೆ ನೌಕರರು ಸಹಕರಿಸಬೇಕು ಎಂದರು.

ಬೆಂಗಳೂರಲ್ಲಿ ಕಸದ ಸಮಸ್ಯೆ ವಿಚಾರವಾಗಿ ಮಾತನಾಡಿ, ಯಾರು ಕಸ ಹಾಕಲು ಬಿಡಲ್ಲ ಅವರ ಕ್ಷೇತ್ರದಲ್ಲಿ ಕಸ ಎತ್ತಿಸಲ್ಲ. ಆಗ ಜನರೇ ಅವರಿಗೆ ಉಗಿಯುತ್ತಾರೆ. ಕಸ ಡಂಪ್ ಮಾಡಿಸಲು ಕಾಲು ಮುಗಿಯುವುದಕ್ಕೆ ಆಗುತ್ತಾ? ಕಸ ಎಲ್ಲಾದರೂ ಹಾಕಬೇಕಾಲ್ವಾ, ಎಲ್ಲಿ ಹಾಕಬೇಕು. ಮೊದಲಿನಿಂದಲೂ ಎಲ್ಲಿ ಹಾಕ್ತಿವೋ ಅಲ್ಲಿ ಹಾಕ್ತಿವಿ. ಅವರು ಅರ್ಥ ಮಾಡಿಕೊಳ್ಳಬೇಕು ಎಂದು ವಾಗ್ದಾಳಿ ನಡೆಸಿದರು.

## ಕಾಂಗ್ರೆಸ್ 90ಕ್ಕೆ ಇಳಿಕೆ: ಎಂಎಲ್ಸಿ ರವಿ ತಿರುಗೇಟು

**ಬೆಂಗಳೂರು:** ಲೋಕೋಪಯೋಗಿ ಸಚಿವ ಎಚ್.ಸಿ.ಮಹಾದೇವಪ್ಪ ಅವರು, ಶಾಸಕರ ಕುರಿತು ನೀಡಿರುವ ಬೀದಿ ನಾಯಿಗಳು ಹೇಳಿಕೆಗೆ ಡಿ.ಕೆ.ಶಿವಕುಮಾರ್ ಸಂಬಂಧಿ ಹಾಗೂ ವಿಧಾನ ಪರಿಷತ್ ಸದಸ್ಯ ರವಿ ತಿರುಗೇಟು ನೀಡಿದ್ದಾರೆ.



ಸಚಿವ ಮಹಾದೇವಪ್ಪ ಅವರ ಹೇಳಿಕೆಗೆ ಪ್ರತಿಕ್ರಿಯೆ ನೀಡುವಷ್ಟು ನಾನು ದೊಡ್ಡವನಲ್ಲ. ಆದರೆ 2028ರ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ 90 ಸೀಟುಗಳಿಗೆ ಇಳಿಯಲು ಮಹಾದೇವಪ್ಪ ಅವರು ತಮ್ಮ ತನು, ಮನ

ಪುಟ 2ಕ್ಕೆ

## ವಿಜಯೇಂದ್ರ ನೇತೃತ್ವದಲ್ಲಿ ಬಹುಮತ

### ಬಿಜೆಪಿ ರಾಜ್ಯ ಉಸ್ತುವಾರಿ ರಾಧಾಮೋಹನ್ ದಾಸ್ ಅಗರವಾಲ್ ಅಭಿಪ್ರಾಯ




**ಬೆಂಗಳೂರು:** ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಬಿ.ವೈ.ವಿಜಯೇಂದ್ರ ನೇತೃತ್ವದ ತಂಡ ಬಹುಮತ ಸಾಧಿಸಲಿದೆ ಎಂದು ಬಿಜೆಪಿ ರಾಜ್ಯ ಉಸ್ತುವಾರಿ ರಾಧಾಮೋಹನ್ ದಾಸ್ ಅಗರವಾಲ್ ಅಭಿಪ್ರಾಯಪಟ್ಟರು.

ನಗರದಲ್ಲಿ ಗುರುವಾರ ಆಯೋಜಿಸಿದ್ದ ಬಿಜೆಪಿ ವಿಶೇಷ ಕಾರ್ಯಕಾರಿಣಿ ಸಭೆಯಲ್ಲಿ ಮಾತನಾಡಿದ ಅವರು, ವಿಧಾನ ಸಭೆ ಮತ್ತು ವಿಧಾನಪರಿಷತ್ತಿನಲ್ಲಿ ಆರ್.ಅಶೋಕ ಮತ್ತು ಛಲವಾದಿ ನಾರಾಯಣ ಸ್ವಾಮಿ ಅವರು ಭ್ರಷ್ಟ ಸರ್ಕಾರವನ್ನು ಕಟ್ಟಿಹಾಕುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸದನದ ಒಳಗೆ ಮತ್ತು ಹೊರಗೆ ಈ ಮೂವರ ತಂಡ ಸರ್ಕಾರ ವಿರುದ್ಧ ಹೋರಾಟ ನಡೆಸುತ್ತಿದೆ. ಈ ಸಂಘರ್ಷ ನಿರಂತರವಾಗಿರಲಿ. ಮುಂಬರುವ ವಿಧಾನಸಭಾ ಉಪ ಚುನಾವಣೆಗಳು, ವಿಧಾನಪರಿಷತ್, ಸ್ಥಳೀಯ ಸಂಸ್ಥೆ ಚುನಾವಣೆಗಳನ್ನು ಗೆಲ್ಲಬೇಕು. ಇದಕ್ಕೆ ಸಂಘಟಿತ ಪ್ರಯತ್ನ

ಪುಟ 2ಕ್ಕೆ

## ಉಚಿತ ಕೊಡುಗೆ ಅಭಿವೃದ್ಧಿಗೆ ಮಾರಕ

### ರಾಜ್ಯ ಸರ್ಕಾರಗಳ ಗ್ಯಾರಂಟಿ ಯೋಜನೆಗಳಿಗೆ ಸುಪ್ರೀಂಕೋರ್ಟ್ ಆಕ್ಷೇಪ

**ನವದೆಹಲಿ:** ರಾಜ್ಯ ಸರ್ಕಾರಗಳು ಚುನಾವಣೆ ಸಂದರ್ಭದಲ್ಲಿ ಘೋಷಿಸುವ ಉಚಿತ ಯೋಜನೆಗಳು (ಫ್ರೀಬೀಸ್) ದೇಶದ ದೀರ್ಘಕಾಲೀನ ಅಭಿವೃದ್ಧಿಗೆ ಮಾರಕವಾಗಿವೆ ಎಂದು ಸುಪ್ರೀಂಕೋರ್ಟ್ ಆಕ್ಷೇಪ ವ್ಯಕ್ತಪಡಿಸಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ ಪೀಠ ತಮಿಳುನಾಡು ವಿದ್ಯುತ್ ವಿತರಣಾ ಕಂಪನಿಯ ಅರ್ಜಿಯ ವಿಚಾರಣೆಯ ಸಂದರ್ಭದಲ್ಲಿ ಈ ಅಭಿಪ್ರಾಯ ವ್ಯಕ್ತಪಡಿಸಿದೆ. ರಾಜ್ಯದ ಹಣವನ್ನು ಉಚಿತವಾಗಿ ಜನರಿಗೆ ವಿತರಿಸುತ್ತ ಹೋದರೆ ದೇಶದ ಅಭಿವೃದ್ಧಿಗೆ ತೊಡಕಾಗುತ್ತದೆ. ಚುನಾವಣೆಗೂ ಮುನ್ನ ಯಾವಾಗಲೂ ಯೋಜನೆಗಳು ಘೋಷಣೆಯಾಗುತ್ತವೆ. ಇದು ಎಷ್ಟು ಕಾಲ ಮುಂದುವರಿಯುತ್ತದೆ? ಎಂದು ಪ್ರಶ್ನಿಸಿದರು.

ಬಡವರು, ಅಗತ್ಯವಿರುವವರಿಗೆ ಸಹಾಯ ಮಾಡುವುದು ಸರಿ. ಆದರೆ ಎಲ್ಲರಿಗೂ ಉಚಿತವಾಗಿ ನೀಡುವುದು ಯಾವ ನ್ಯಾಯ? ಇದು ರಾಜಕೀಯ ಒಲೈಕೆ ಮಾಡುವ ನೀತಿಯಲ್ಲವೇ? ರಾಜ್ಯಗಳು ಆದಾಯದಲ್ಲಿ ಕೊರತೆ ಇದ್ದರೂ ಇಂತಹ ವಿತರಣೆ ಮಾಡುತ್ತಿವೆ. ಸರ್ಕಾರಕ್ಕೆ ಹಣ ಎಲ್ಲಿಂದ ಬರುತ್ತದೆ? ರಸ್ತೆಗಳು, ಆಸ್ಪತ್ರೆಗಳು, ಶಾಲೆಗಳ ಅಭಿವೃದ್ಧಿಗೆ ಖರ್ಚು ಮಾಡಬೇಕಲ್ಲವೇ? ಎಂದ ನಗದು ವರ್ಗಾವಣೆ ಬಗ್ಗೆಯೂ ಮುಖ್ಯ ನ್ಯಾಯಮೂರ್ತಿ ಟೀಕಿಸಿದರು.



ಉಚಿತವಾಗಿ ಆಹಾರ, ಗ್ಯಾಸ್, ವಿದ್ಯುತ್, ನಗದು ಹಣ ನೀಡಿದರೆ ಜನರು ಬೆಳಗ್ಗೆಯಿಂದ ಸಂಜೆಯವರೆಗೆ ಏಕೆ ಕೆಲಸ ಮಾಡಬೇಕು? ಗೌರವದಿಂದ ಜೀವಿಸಲು ಕೆಲಸ ಮಾಡಬೇಕು. ಇದು ರಾಷ್ಟ್ರ ನಿರ್ಮಾಣವೇ? ಉದ್ಯೋಗಾವಕಾಶಗಳನ್ನು ಸೃಷ್ಟಿಸಿ, ಜನರು ಸ್ವಾವಲಂಬಿಗಳಾಗುವಂತೆ ಮಾಡಬೇಕು. ಸರ್ಕಾರಗಳು ಮಾಡುತ್ತಿರುವುದು ಅಪ್ಪೀಸ್‌ಮೆಂಟ್ ಪಾಲಿಸಿ ಎಂದು ಕರೆದ

ಪುಟ 2ಕ್ಕೆ

## 23.8 ಕೋಟಿ ಬೆಲೆ ಕೊಕೇನ್ ವಶ

**ಬೆಂಗಳೂರು:** ನಗರದ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಎನ್‌ಸಿಬಿ ಅಧಿಕಾರಿಗಳು ದಾಳಿ ನಡೆಸಿ 23.8 ಕೋಟಿ ರೂ. ಮೌಲ್ಯದ ಕೊಕೇನ್ ಸೀಜ್ ಮಾಡಿದ್ದಾರೆ. 23.88 ಕೋಟಿ ರೂ. ಮೌಲ್ಯದ 4.776 ಕೆ.ಜಿ ಕೊಕೇನ್ ವಶಪಡಿಸಿಕೊಂಡಿದ್ದಾರೆ. ಬ್ರೆಜಿಲ್‌ನಿಂದ ಬಂದ ಪ್ರಯಾಣಿಕನನ್ನು ವಶಕ್ಕೆ ಪಡೆದು ಪರಿಶೀಲನೆಗೆ ಒಳಪಡಿಸಿದಾಗ ಕೊಕೇನ್ ಪತ್ತೆಯಾಗಿದೆ. ಖಚಿತ ಮಾಹಿತಿ ಮೇರೆಗೆ ಎನ್‌ಸಿಬಿ ಅಧಿಕಾರಿಗಳು ದಾಳಿ ಕಾರ್ಯಾಚರಣೆ ನಡೆಸಿದ್ದಾರೆ.

## ಕಾಮಾಕ್ಯ ದೇಗುಲಕ್ಕೆ ಡಿಕೆಶಿ ಭೇಟಿ



**ಗುವಾಹಟಿ:** ಅಸ್ಸಾಂನ ಗುವಾಹಟಿಯಲ್ಲಿರುವ ಕಾಮಾಕ್ಯ ದೇಗುಲಕ್ಕೆ ಡಿಸಿಎಂ ಡಿ.ಕೆ ಶಿವಕುಮಾರ್ ಅವರು ಗುರುವಾರ ಭೇಟಿ ನೀಡಿ ಪೂಜೆ ಸಲ್ಲಿಸಿದರು. ಸಂಸದೆ ಪ್ರಿಯಾಂಕಾ ಗಾಂಧಿ ಜೊತೆ ಕಾಮಾಕ್ಯ ದೇಗುಲಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದರು.

ಪುಟ 2ಕ್ಕೆ

## ಸ್ನೇಹಮಯಿ ಕೃಷ್ಣ ವಿರುದ್ಧ ಸೂಕ್ತ ಕ್ರಮ: ಮುಖ್ಯಕಾರ್ಯದರ್ಶಿ ಎಚ್ಚರಿಕೆ

**ಬೆಂಗಳೂರು:** ಮುಡಾ ಮಾಜಿ ಆಯುಕ್ತ ಡಿ.ಬಿ. ನಟೇಶ್ ಅವರಿಗೆ ಮುಂಬಡ್ತಿ ನೀಡಿರುವ ವಿಚಾರದಲ್ಲಿ ಸ್ನೇಹಮಯಿ ಕೃಷ್ಣ ಅವರ ಆರೋಪಗಳು ಆಧಾರವಿಲ್ಲದ ಸುಳ್ಳು ಮತ್ತು ಕ್ಷುಲ್ಲಕ ಆರೋಪಗಳಾಗಿವೆ ಎಂದು ಸರ್ಕಾರದ ಮುಖ್ಯಕಾಯ ದರ್ಶಿ ಸ್ಪಷ್ಟೀಕರಣ ನೀಡಿದ್ದಾರೆ. ಆಧಾರರಹಿತ ಆರೋಪ ಮಾಡಿರುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

ಪತ್ರದ ಮೂಲಕ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಎಚ್ಚರಿಕೆ ನೀಡಿದ್ದಾರೆ. ತಾವು ಸಲ್ಲಿಸಿರುವ ದೂರಿನಲ್ಲಿ ಮಾಡಿರುವ ಆರೋಪಗಳು ನಿರಾಧಾರವಾಗಿವೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಈ ಮೂಲಕ ಬಡ್ತಿಗೆ ಕೋಟ್ಯಂತರ ರೂ. ಹಣ ಪಡೆದಿರುವ ಆರೋಪ ಮಾಡಿದ್ದ ಸ್ನೇಹಮಯಿ ಕೃಷ್ಣ ಅವರಿಗೆ ಸಿಎಸ್ ಎಚ್ಚರಿಕೆ ನೀಡಿದ್ದಾರೆ.




ಪುಟ 2ಕ್ಕೆ

## ಸರ್ಕಾರಿ ಭೂಮಿಯಲ್ಲಿ ಪೌಲ್ಟ್ರಿ ಫಾರಂ ತೆರವಿಗೆ ಮೀನಾಮೇಷ

**ಮೈಸೂರು:** ಸರ್ಕಾರಿ ಖರಾಬು ಭೂಮಿಯಲ್ಲಿ ಪ್ರಭಾವಿ ವ್ಯಕ್ತಿಯೊಬ್ಬರು ಹೈಟೆಕ್ ಪೌಲ್ಟ್ರಿ ಫಾರಂ ನಿರ್ಮಿಸಿದ್ದಾರೆ. ಪ್ರಕರಣ ಬೆಳಕಿಗೆ ಬಂದು 2 ವರ್ಷ ಕಳೆದರೂ ಅಧಿಕಾರಿಗಳು ಜಾಗ ವಶಪಡಿಸಿಕೊಳ್ಳಲು ಮೀನಾಮೇಷ ಎಣಿಸುತ್ತಿರುವುದು ಅನುಮಾನಗಳಿಗೆ ಕಾರಣವಾಗಿದೆ.

ಒತ್ತುವರಿ ತೆರುವುಗೊಳಿಸಿ ಕ್ರಮಕೈಗೊಳ್ಳುವಂತೆ ಜಿಲ್ಲಾಧಿಕಾರಿ ಕಾರ್ಯಾಲಯ ಪತ್ರ ಬರೆದಿದ್ದರೂ ತಾಲೂಕು ಆಡಳಿತ ಮೌನವಾಗಿದೆ. ನಂಜನಗೂಡು ತಾಲೂಕಿನ ವಳಗೆರೆ ಗ್ರಾಮದ ಸರ್ವೆ ನಂ.193ರ ಎರಡು ಎಕರೆ ಜಮೀನು ಸರ್ಕಾರಿ ಖರಾಬು ಗೋಮಾಳವಾಗಿದೆ.

ಈ ಜಮೀನಿಗೆ ಮಂಡ್ಯ ಮೂಲದ ವ್ಯಕ್ತಿ ಅಕ್ರಮವಾಗಿ ಅತಿಕ್ರಮ ಪ್ರವೇಶ ಮಾಡಿ ಹೈಟೆಕ್ ಪೌಲ್ಟ್ರಿ ಫಾರಂ, ಮೂರು ವಾಸದ ಮನೆ ಒಂದು ವಾಟರ್ ಟ್ಯಾಂಕ್ ನಿರ್ಮಾಣ ಮಾಡಿದ್ದಾನೆ. ಒತ್ತುವರಿ ಸ್ಥಳ ತೆರವುಗೊಳಿಸುವಂತೆ ಜಿಲ್ಲಾಧಿಕಾರಿಗಳಿಂದ ತಾಲೂಕು ಆಡಳಿತಕ್ಕೆ ಸೂಚನೆ ಬಂದಿದೆ. ಆದರೂ, ತಮ್ಮ ಆಸ್ತಿಯನ್ನ ರಕ್ಷಿಸಿಕೊಳ್ಳಲು ನಂಜನಗೂಡು

ಪುಟ 2ಕ್ಕೆ

## ಮತದಾರರ ಪಟ್ಟಿ ಲೋಪ ಸರಿಪಡಿಸಿ

### *ರಾಜ್ಯ ಚುನಾವಣಾ ಆಯೋಗಕ್ಕೆ ಪತ್ರ ಬರೆದು ಡಿಕೆಶಿ ಆಗ್ರಹ

**ಬೆಂಗಳೂರು:** ಗ್ರೇಟರ್ ಬೆಂಗಳೂರು ವ್ಯಾಪ್ತಿಯ ಅನೇಕ ಕಡೆಗಳಲ್ಲಿ ಚುನಾವಣಾ ಮತದಾರರ ಪಟ್ಟಿಯಲ್ಲಿ ಲೋಪಗಳು ಕಂಡು ಬಂದಿರುವ ಹಿನ್ನೆಲೆಯಲ್ಲಿ ಇದನ್ನು ಸರಿಪಡಿಸಲು ಬೀದಿವಾರು, ಮನೆವಾರು ಮ್ಯಾಪಿಂಗ್ ಮಾಡಿ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ರಾಜ್ಯ ಚುನಾವಣಾ ಆಯೋಗಕ್ಕೆ ಪತ್ರ ಬರೆದು ಆಗ್ರಹಿಸಿದ್ದಾರೆ.



ಮತದಾರರ ಪಟ್ಟಿಯಲ್ಲಿ ಒಂದೇ ಕುಟುಂಬದ ಮತದಾರರನ್ನು ಬೇರೆ ಬೇರೆ ಮತಗಟ್ಟೆಗಳು ಹಾಗೂ ಬೇರೆ ವಾರ್ಡ್‌ಗಳಿಗೆ ವಿಂಗಡಿಸಲಾಗಿದೆ. ಮತದಾರರ ವಿಳಾಸದಲ್ಲಿ ಮನೆ ಸಂಖ್ಯೆ ತಪ್ಪಾಗಿರುವುದು, ರಸ್ತೆ ಸಂಖ್ಯೆ ತಪ್ಪಾಗಿ ನಮೂದಿಸಲಾಗಿದೆ. ಮತದಾರರ ಹೆಸರು ಎರಡು ಹಾಗೂ ಹೆಚ್ಚು ಬಾರಿ ಸೇರ್ಪಡೆ, ಮತ್ತೆ ಕೆಲವರ ಹೆಸರನ್ನು ಮತದಾರರ ಪಟ್ಟಿಯಿಂದ ಕೈಬಿಡಲಾಗಿದೆ. ಅಲ್ಲದೇ, ಕೆಲವು ಬೀದಿಗಳಲ್ಲಿ ಇರುವ ಮತದಾರರ ಹೆಸರುಗಳೇ ಪಟ್ಟಿಯಲ್ಲಿ ಕಣ್ಮರೆಯಾಗಿವೆ. ಮತ್ತೆ ಕೆಲವು ಮತದಾರರ ವಿಳಾಸ ಸರಿಯಾಗಿದ್ದರೂ, ಅವರನ್ನು ಬೇರೆ ವಾರ್ಡ್‌ಗಳಿಗೆ ಹಾಕಲಾಗಿದೆ ಎಂದು ಪತ್ರದಲ್ಲಿ ವಿವರಿಸಿದ್ದಾರೆ.

ಈ ತಪ್ಪುಗಳು ಕಣ್ತಪ್ಪಿನಿಂದ ಆಗಿರುವಂತೆ ಕಾಣುತ್ತಿಲ್ಲ. ಉದ್ದೇಶಪೂರ್ವಕವಾಗಿ ಮತದಾರರು ಹಾಗೂ ಬಿಎಲ್‌ಒಗಳು, ರಾಜಕೀಯ ಪಕ್ಷಗಳಲ್ಲಿ ಗೊಂದಲ ಮೂಡಿಸಲು ವ್ಯವಸ್ಥಿತವಾಗಿ ನಡೆಸಿರುವಂತಿದೆ. ಇದರಿಂದ ಮತದಾರರ ಪಟ್ಟಿಯ ವಿಶ್ವಾಸಾರ್ಹತೆಗೆ ಧಕ್ಕೆಯುಂಟು ಮಾಡಲಿದೆ. ಈ ಪ್ರಮಾದಗಳನ್ನು ಪಾರದರ್ಶಕವಾಗಿ ಹಾಗೂ ಶಾಶ್ವತವಾಗಿ ಸರಿಪಡಿಸಬೇಕಾಗಿದೆ. ಹೀಗಾಗಿ, ಬೀದಿವಾರು ಹಾಗೂ ಮನೆವಾರು ಮ್ಯಾಪಿಂಗ್ ಮಾಡುವ ಮೂಲಕ ಮತದಾರರ ಪಟ್ಟಿ ಪರಿಷ್ಕರಣೆ ಮಾಡಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಪುಟ 2ಕ್ಕೆ

## ಮೇಲುಕೋಟೆಯಲ್ಲಿ ಮಾ.23 ರಿಂದ ಏ.5ರ ವರೆಗೆ ವೈರಮುಡಿ ಬ್ರಹ್ಮೋತ್ಸವ ಆಚರಣೆ

### ವೈರಮುಡಿ ಬ್ರಹ್ಮೋತ್ಸವಕ್ಕೆ ಆಗಮಿಸುವ ಭಕ್ತಾದಿಗಳಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಿ: ಡಾ.ಕುಮಾರ

**ಮಂಡ್ಯ:** ಮಾರ್ಚ್ 23 ರಿಂದ ಏಪ್ರಿಲ್ 5ರ ವರೆಗೆ ವೈರಮುಡಿ ಬ್ರಹ್ಮೋತ್ಸವ 2026 ನಡೆಯಲಿದೆ. ಮಾರ್ಚ್ 28 ಶನಿವಾರದಂದು ವೈರಮುಡಿ ಕಿರೀಟಧಾರಣೆ ಮತ್ತು ಉತ್ಸವ ಆಚರಣೆ ಮಾಡಲಾಗುತ್ತದೆ. ಮಾರ್ಚ್ ನಲ್ಲಿ ಬೇಸಿಗೆ ಇರುವುದರಿಂದ ಬ್ರಹ್ಮೋತ್ಸವಕ್ಕೆ ಭಕ್ತಾದಿಗಳಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಿ. ಹಾಲಿ ಇರುವ ನೀರಿನ ಟ್ಯಾಂಕರ್ ಗಳನ್ನು ಸ್ವಚ್ಛಗೊಳಿಸಿ ನೈರ್ಮಲ್ಯ ಕಾಪಾಡಿ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಅವರು ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಗುರುವಾರ ನಡೆದ ಶ್ರೀ ವೈರಮುಡಿ ಬ್ರಹ್ಮೋತ್ಸವ-2026 ರ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ವೈರಮುಡಿ ಬ್ರಹ್ಮೋತ್ಸವ ನಡೆಯುವ ಸ್ಥಳದಲ್ಲಿ ಸೂಕ್ತ ಬ್ಯಾರಿಕೇಡ್ ವ್ಯವಸ್ಥೆ ಮಾಡಿ. ಈಗಾಗಲೇ ಜನಸಂದಣಿ ಹೊಂದುವ ಕಡೆ ಸಿ.ಸಿ.ಟಿ.ವಿ ವ್ಯವಸ್ಥೆ ಇದೆ. ಅಗತ್ಯ ಇರುವ ಕಡೆ ಹೆಚ್ಚುವರಿ ಸಿ.ಸಿ ಟಿವಿ ಅಳವಡಿಸಿ. ವಾಹನಗಳ ನಿಲುಗಡೆಗೆ ಅಗತ್ಯ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಿ. ಕೊಳದ ಬಳಿ ನುರಿತ ಈಜುಪಡೆ, ಅಗ್ನಿಶಾಮಕ ಸಿಬ್ಬಂದಿಗಳನ್ನು ನಿಯೋಜಿಸಿ ಎಂದರು.



ಕ್ಷೇತ್ರದಲ್ಲಿ ಡ್ರೈನೇಜ್ ವ್ಯವಸ್ಥೆ ಕಲ್ಪಿಸಿ ಸ್ವಚ್ಛತೆ ಕಾಪಾಡಿ, ಆಂಬುಲೆನ್ಸ್, ಮೆಡಿಸಿನ್‌ಗಳ ವ್ಯವಸ್ಥೆಯನ್ನು ಕಲ್ಪಿಸಿ. ಎಲ್ಲಾ ವಿದಧ ವೈದ್ಯರುಗಳು ಕಡ್ಡಾಯವಾಗಿ

ಪುಟ 2ಕ್ಕೆ

# ಎಐಗೆ ಹೊಂದಿಕೊಳ್ಳದಿದ್ದರೆ ಭವಿಷ್ಯ ಕಷ್ಟ: ಡಾ.ಎಸ್.ವಿದ್ಯಾಶಂಕರ್

ಮೈಸೂರು: ನಾವು ಈಗಾಗಲೇ ಎಐ ಯುಗವನ್ನು ದಾಟಿ ಆರ್ಟಿಫಿಷಿಯಲ್ ಇಂಟೆಲೆಜೆನ್ಸ್ ಎಐ ಯುಗಕ್ಕೆ ತಲುಪಿದ್ದು, ಇದಕ್ಕೆ ಹೊಂದಿಕೊಳ್ಳದೇ ಹೋದರೆ, ವಿದ್ಯಾರ್ಥಿಗಳು ಭವಿಷ್ಯ ರೂಪಿಸಿಕೊಳ್ಳುವುದು ಕಷ್ಟವಾಗಲಿದೆ ಎಂದು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಕುಲಪತಿ ಡಾ.ಎಸ್.ವಿದ್ಯಾಶಂಕರ್ ಭವಿಷ್ಯ ನುಡಿದರು.

ನಗರದ ಹೊರವಲಯದ ಸಾತಗಳ್ಳಿಯಲ್ಲಿರುವ ವಿಟಿಯು ಪ್ರಾದೇಶಿಕ ಕೇಂದ್ರದ ಸಭಾಂಗಣದಲ್ಲಿ ಗುರುವಾರ ಆಯೋಜಿಸಿದ್ದ ಪ್ರಾದೇಶಿಕ ಮಟ್ಟದ ಟೆಕ್ನೊ ಕಲ್ಚರಲ್ ಯುಕ್ತಿ 2026 ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು. 2030ಕ್ಕೆ ಉದ್ಯೋಗಗಳು ಸರಿಯಾಗಿ ಸಿಗುವುದಿಲ್ಲ. ಹಲವಾರು ಕಂಪನಿಗಳು ಈಗಾಗಲೇ 2030 ಸಾಫ್ಟ್‌ವೇರ್‌ಗಳು ಕೋಡಿಂಗ್ ನಲ್ಲಿ ಇರುವುದಿಲ್ಲ ಎಂದು ಎಚ್ಚರಿಕೆ ನೀಡಿವೆ. ಗೂಗಲ್ ಸಿಇಒ ಸುಂದರ್ ಪಿಚ್ಚೈ ಕೂಡ ತಮ್ಮ ಕಂಪನಿ ನೌಕರರಿಗೆ ಹೊಸ ತಂತ್ರಜ್ಞಾನ ಕಲಿಯಲು ಮುಂದಾಗಿ, ಇಲ್ಲವಾದರೆ ಕಂಪನಿ ಬಿಡಲು ಸಿದ್ದರಾಗಿ ಎಂಬ ಸಂದೇಶವನ್ನು ರವಾನಿಸಿದ್ದಾರೆ. ಎಐ ಮಾನವನ ಬುದ್ದಿಯನ್ನು ಮೀರಿ ಕೆಲಸ ಮಾಡುತ್ತಿದೆ. ಒಂದು ಪ್ರೊಟಿನ್ ಸ್ಟ್ರಚರ್ ಐಡೆಂಟಿಟಿ ಮಾಡಲು ಮಾನವನಿಗೆ 10 ವರ್ಷ ಬೇಕಾಯಿತು. ಆದರೆ, ಈಗ 200 ಮಿಲಿಯನ್ ಪ್ರೊಟಿನ್ ಸ್ಟ್ರಚರ್‌ಗಳನ್ನು ಎಐ ಐಡೆಂಟಿ? ಮಾಡಿದೆ. ಇಂತಹ ಪರಿಸ್ಥಿತಿಯಲ್ಲಿ ಎಐ ಕಂಟ್ರೋಲ್ ಮಾಡಲು ಸೂಪರ್ ಇಂಟಲಿಜೆಂಟ್ ಬೇಕಾಗಿದೆ. ಆ ವ್ಯವಸ್ಥೆಗೆ ನಾವು ಹೊಂದಿಕೊಳ್ಳಬೇಕಿದೆ ಎಂದು ಹೇಳಿದರು.



ದೇಶದ ವಿವಿಗಳಲ್ಲಿ ವಿಟಿಯು ಮಾದರಿಯಾಗಿದೆ. 83 ಸಾವಿರ ವಿದ್ಯಾರ್ಥಿಗಳು ಒಂದೇ ಪೋರ್ಟಲ್ ತಂದು, ಕೈಗಾರಿಕೆ ತರಬೇತಿ ನೀಡಿ ನೀಡಲಾಗುತ್ತದೆ. ಇದನ್ನು ಉಪಯೋಗಿಸಿಕೊಂಡು ವಿದ್ಯಾರ್ಥಿಗಳು ಭವಿಷ್ಯ ಉಜ್ವಲಗೊಳಿಸಿಕೊಳ್ಳಬೇಕು. ಜಗತ್ತಿಗೆ ದೇಶದಿಂದ ಕೊಡುಗೆ ಕೊಡಲು ವಿವಿಗಳ ವಿದ್ಯಾರ್ಥಿಗಳು ಪಣ ತೊಟ್ಟು, ದೇಶದಲ್ಲಿ ತಂತ್ರಜ್ಞಾನದಲ್ಲಿ ಬದಲಾವಣೆ ತರಬೇಕು. ವಿದ್ಯಾರ್ಥಿಗಳು 365 ದಿನಗಳನ್ನು ಎಂಜಾಯ್ ಮಾಡಬೇಡಿ, ನಾಲ್ಕು ವರ್ಷ ಕಲಿಯದೇ ಹೋದರೆ, ಶಿವ ಮಡಿಗಿದಂತೆ ಆಗಲಿದೆ ಎಂಬ ಹಾರಿಕೆಯ ಮಾತುಗಳನ್ನು ಬಿಟ್ಟು ಜೀವನ ರೂಪಿಸಿಕೊಳ್ಳಲು ಯೋಜನೆ ರೂಪಿಸಿಕೊಳ್ಳಬೇಕೆಂದರು.

ನಟಿ ಸೋನಲ್ ಮೊಂಥೆರೋ ಮಾತನಾಡಿ, ಕಾಲೇಜು ದಿನಗಳು ಜೀವನದ ಮುಖ್ಯವಾದ ದಿನಗಳು. ಎಂಜಾಯ್ ಮಾಡಿ, ಜೊತೆಯಲ್ಲಿ ಭವಿಷ್ಯ ರೂಪಿಸಿಕೊಳ್ಳುವ ಕಡೆಯು ಗಮನ ಹರಿಸಿ, ಪೋಷಕರು ನಿಮ್ಮ ಮೇಲೆ ಇಟ್ಟಿರುವ ನಂಬಿಕೆಯನ್ನು ಗಟ್ಟಿಮಾಡಿಕೊಳ್ಳಿ ಎಂದರು.

ನಟ ಶರಣ್ ಮಾತನಾಡಿ, ಸಾಂಸ್ಕೃತಿಕ ಹಾಗೂ ಕ್ರೀಡೆಗೆ ಆದ್ಯತೆ ಕೊಡುವ ಶಿಕ್ಷಣ ಸಂಸ್ಥೆಗಳು ವಿಶೇಷವಾಗಿ ಉಳಿದುಕೊಳ್ಳುತ್ತವೆ. ದೊಡ್ಡ ಕಲಾವಿದರನ್ನು ಪರಿಚಯಿಸುವ ವೇದಿಕೆ ಇದಾಗಲಿ. ವಿಟಿಯೂ ಕೂಗಳತೆ ದೂರದಲ್ಲಿದ್ದರೂ ಹೋಗಲು ಆಗಿರಲಿಲ್ಲ. ಮೈಸೂರಿನ ಕ್ಯಾಂಪಸ್ ಗೆ ಬರುವ ಅವಕಾಶ ಒದಗಿಸಿತು. ಒಳ್ಳೆ ಉದ್ದೇಶ ನಿಮಗಿದ್ದರೆ ಜೀವನದಲ್ಲಿಯೂ ಒಳ್ಳೆಯದಾಗುತ್ತದೆ. ಬದುಕಿನಲ್ಲಿ ಎಲ್ಲಿಯವರೆಗೆ ಕಲಿಯುವ ಹುಮ್ಮಸ್ಸು ಇರುತ್ತದೆಯೋ ಎಲ್ಲಿಯವರೆಗೆ ಕಲಿಯಬೇಕೆನ್ನುವ ಹುಮ್ಮಸ್ಸು ಇರುತ್ತದೆಯೋ ಅಲ್ಲಿಯವರೆಗೂ ಬದುಕು ಸುಂದರವಾಗಿರುತ್ತದೆ. ಇಲ್ಲಿರುವ ಎಲ್ಲರೂ ಸೆಲಬ್ರಟಿ ಎಂಬ ಉದ್ದೇಶ ಇರುವ ಕಾರ್ಯಕ್ರಮ ಇದೆ. ಯುಕ್ತಿ ಇಲ್ಲಿ ಕಲಿಯುವುದಾದರೆ ಇದರ ಶಕ್ತಿ ನೀವೆಲ್ಲರೂ ಎಂದರು. ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ನಟಿ ಧನ್ಯಾ ರಾಮ್‌ಕುಮಾರ್, ವಿವಿಸಿಇ ಪ್ರಾಂಶುಪಾಲ ಡಾ.ಬಿ.ಸದಾಶಿವೇಗೌಡ, ಕುಲಸಚಿವ ಡಾ.ಯು.ಜೆ. ಉಜ್ವಲ್, ವಿಟಿಯು ಪ್ರಾದೇಶಿಕ ನಿರ್ದೇಶಕ ಡಾ.ಎಚ್.ಎಂ.ನಂಜುಂಡಸ್ವಾಮಿ, ಯುಕ್ತಿ ವ್ಯವಸ್ಥಾಪಕ ಕಾರ್ಯದರ್ಶಿ ಡಾ.ಎಸ್.ಎನ್.ತಿಮ್ಮರಾಜು, ಆಡಳಿತಾಧಿಕಾರಿ ಡಾ.ಜಿ.ಪ್ರಶಾಂತನಾಯಕ ಮತ್ತಿತರರು ಇದ್ದರು.

> ವಿಟಿಯುನ ನಾಲ್ಕು ಪ್ರಾದೇಶಿಕ ಕೇಂದ್ರಗಳಿಗೆ ವಿವಿ ಬಜೆಟ್‌ನಲ್ಲಿ 2.5ಕೋಟಿ ನೀಡಲಾಗಿದೆ. ಅಲ್ಲದೇ, ಕೆಲವು ವಿದ್ಯಾರ್ಥಿಗಳು 35 ಸಾವಿರ ಶುಲ್ಕ ಕಟ್ಟಲು ಪರದಾಡುತ್ತಾರೆ. ಇವರಿಗಾಗಿ ವಿದ್ಯಾನಿಧಿ ಯೋಜನೆ ಮಾಡಿದ್ದೇನೆ. ಇದಕ್ಕಾಗಿ 60 ಲಕ್ಷ ರೂ.ದೇಣಿಗೆ ಬಂದಿದೆ. ಮುಂದಿನ ದಿನಗಳಲ್ಲಿ ಹೆಚ್ಚಿನ ದೇಣಿಗೆ ಬರಲಿದೆ. 300 ಇದ್ದ ಕ್ಯಾಂಪಸ್ ಈಗ 3000ಕ್ಕೆ ಏರಿಕೆ ಮಾಡಿದ್ದೇವೆ. ಇಲ್ಲಿಂದ ಹೋಗುವ ಪ್ರತಿಯೊಬ್ಬರೂ ಉದ್ಯೋಗಿಗಳನ್ನಾಗಿಸುವುದೇ ನನ್ನ ಗುರಿ.
>
> –ಡಾ.ಎಸ್.ವಿದ್ಯಾಶಂಕರ್ ಕುಲಪತಿ , ವಿಟಿಯು

**ಮೊದಲ ಪುಟದಿಂದ**

## ಕಾಂಗ್ರೆಸ್ 90ಕ್ಕೆ ಇಳಿಕೆ: ರವಿ ತಿರುಗೇಟು

ಧನ ಸೇರಿ ಎಲ್ಲವನ್ನೂ ಧಾರೆ ಎರೆದಿದ್ದಾರೆ ಎಂದು ಲೇವಡಿ ಮಾಡಿದ್ದಾರೆ. ಮಹದೇವಪ್ಪ ಅವರದ್ದು ಬಹು ದೊಡ್ಡ ವ್ಯಕ್ತಿತ್ವ. ಬಹಳ ದೊಡ್ಡ ಲೀಡರ್. ನಾವು ಕಾಂಗ್ರೆಸ್ಸಿರು ಅವರನ್ನು ನೆನಪಿಸಿಕೊಳ್ಳಬೇಕು. ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಚುನಾವಣೆಯಲ್ಲಿ ಮಹಾದೇವಪ್ಪ ಅವರು ತ್ಯಾಗದಿಂದ ಅಷ್ಟು ಸೀಟು ಬಂದಿದೆ. ಇಲ್ಲದಿದ್ದರೇ ನಮಗೆ ಅಷ್ಟು ಸೀಟು ಗೆಲ್ಲಲು ಸಾಧ್ಯವಾಗುತ್ತಿರಲಿಲ್ಲ ಎಂದು ವ್ಯಂಗ್ಯವಾಡಿದ್ದಾರೆ.

## ಇಬ್ಬರು ಕೊಲೆ ಅಪರಾಧಿಗಳಿಗೆ ಜೀವಾವಧಿ ಶಿಕ್ಷೆ, 1 ಲಕ್ಷ ದಂಡ

ಶಬ್ದಗಳಿಂದ ಬೈದು, ಮಚ್ಚಿನಿಂದ ಮಾರಣಾಂತಿಕವಾಗಿ ಹಲ್ಲೆ ಮಾಡಿದ್ದರು 13–07–2017 ರಂದು ಬೃಂದಾವನ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿರುತ್ತಾರೆ. ಆರೋಪಿಗಳಿಗೆ ಕಲಂ 302 ಐಪಿಸಿ ಅಡಿಯ ಅಪರಾಧಕ್ಕೆ ಜೀವಾವಧಿ ಶಿಕ್ಷೆ ಮತ್ತು ತಲಾ 1 ಲಕ್ಷ ರೂಪಾಯಿ ದಂಡ ವಿಧಿಸಿ ಕೋರ್ಟ್ ತೀರ್ಪು ನೀಡಿರುತ್ತದೆ. ದಂಡ ಪಾವತಿಸಲು ತಪ್ಪಿದಲ್ಲಿ ಮತ್ತೆ ಒಂದು ವರ್ಷ ಸಾದಾ ಶಿಕ್ಷೆ ವಿಧಿಸಿರುತ್ತದೆ. ಕಲಂ 504 ಐಪಿಸಿ ಅಡಿಯಲ್ಲಿನ ಅಪರಾಧಕ್ಕೆ ಒಂದು ವರ್ಷ ಶಿಕ್ಷೆ ವಿಧಿಸಿ ತೀರ್ಪು ನೀಡಿದ್ದಾರೆ. ಸರ್ಕಾರಿ ಅಭಿಯೋಜಕರಾದ ಎಂ.ಎನ್.ರಾಜನಾರಾವ್ ಅವರು ಸರ್ಕಾರದ ಪರ ವಾದ ಮಂಡಿಸಿದ್ದರು.

## ಮಾ.23 ರಿಂದ ಏ.5ರ ವರೆಗೆ ವೈರಮುಡಿ ಬ್ರಹ್ಮೋತ್ಸವ ಆಚರಣೆ

ನಿಗದಿ ಪಡಿಸಿದ ಸ್ಥಳದಲ್ಲಿ ಇರಬೇಕು. ಭಕ್ತಾದಿಗಳಿಗೆ ಯಾವುದೇ ರೀತಿಯ ಆರೋಗ್ಯ ಸಮಸ್ಯೆ ಉಂಟಾಗದಂತೆ ಕ್ರಮ ವಹಿಸಬೇಕು. ಕುಡಿಯುವ ನೀರಿಗೆ ತೊಂದರೆಯಾಗದಂತೆ ಸೂಕ್ತ ಕ್ರಮ ವಹಿಸಿ. ಕುಡಿಯುವ ನೀರಿನ ಗುಣಮಟ್ಟವನ್ನು ಪರಿಶೀಲಿಸಿ ನೀರು ಪೂರೈಕೆ ಮಾಡಬೇಕು ಎಂದು ಹೇಳಿದರು. ಮೇಲುಕೋಟೆ ಕಲ್ಯಾಣಿ, ಬಸ್ ನಿಲ್ದಾಣ, ದೇವಾಲಯದ ಬಳಿ ಬಯೋ ಶೌಚಾಲಯಗಳನ್ನು ನಿರ್ಮಿಸಬೇಕು. ರಸ್ತೆಗಳ ದುರಸ್ತಿ ಮಾಡಿಸಿ. ವಿವಿಧ ತಾಲೂಕಿನಿಂದ ಬರುವ ಸಾರ್ವಜನಿಕರಿಗೆ ಸೂಕ್ತ ಬಸ್ ವ್ಯವಸ್ಥೆ ಕಲ್ಪಿಸಿ. ಪಾರ್ಕಿಂಗ್ ನಿಂದ ದೇವಾಲಯಕ್ಕೆ ಭಕ್ತಾದಿಗಳು ಸಂಚಾರಿಸಲು ಉಚಿತ ಬಸ್ ವ್ಯವಸ್ಥೆ ಕಲ್ಪಿಸಿ ಎಂದು ಹೇಳಿದರು.

ಮಂಗಳ ವಾದ್ಯ, ನಾದ ಸ್ವರ ಹಾಗೂ ವಿವಿಧ ಕಲಾ ತಂಡಗಳನ್ನು ವೈರಮುಡಿ ಬ್ರಹ್ಮೋತ್ಸವದಲ್ಲಿ ನಿಯೋಜಿಸಿ. ಪ್ಲಾಸ್ಟಿಕ್ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಬೇಕು. ವೈರಮುಡಿ ಬ್ರಹ್ಮೋತ್ಸವ ಪ್ರಾರಂಭವಾಗಿ ಮುಗಿಯುವವರೆಗೂ ನಿರಂತರ ವಿದ್ಯುತ್ ಪೂರೈಕೆ ಮಾಡಿ. ಬೀದಿ ದೀಪಗಳ ದುರಸ್ತಿಗೊಳಿಸಿ ಎಂದು ಹೇಳಿದರು.

ಚೆಲುವ ನಾರಾಯಣ ಸ್ವಾಮಿ ದೇವಾಲಯ ಶ್ರೀ ಯೋಗ ನರಸಿಂಹ ಸ್ವಾಮಿ ದೇವಾಲಯ ಹಾಗೂ ದೇವಾಲಯದ ವ್ಯಾಪ್ತಿಯ ಪ್ರಮುಖ ಮಂಟಪ ಹಾಗೂ ಕಲ್ಯಾಣಿಯಲ್ಲಿ ವಿಶೇಷ ದಿಪಾಲಂಕಾರ ಹಾಗೂ ಹೂವಿನ ಅಲಂಕಾರ ವ್ಯವಸ್ಥೆ ಕಲ್ಪಿಸಿ ಎಂದು ಹೇಳಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಆರ್ ನಂದಿನಿ ಅವರು ಮಾತನಾಡಿ ವೈರಮುಡಿ ಬ್ರಹ್ಮೋತ್ಸವ ನಡೆಯುವ ಸ್ಥಳದಲ್ಲಿ ಸ್ವಚ್ಛತೆ ಕಾಪಾಡುವುದು ಅತಿ ಮುಖ್ಯ. ಸದರಿ ವ್ಯಾಪ್ತಿಯಲ್ಲಿ ಪ್ಲಾಸ್ಟಿಕ್ ಅನ್ನು ಸಂಪೂರ್ಣವಾಗಿ ನಿಷೇಧಿಸಬೇಕು. ವೈರುಮುಡಿ ಬ್ರಹ್ಮೋತ್ಸವಕ್ಕೆ ಭೇಟಿ ನೀಡುವ ಗಣ್ಯರು ಮತ್ತು ಅತಿ ಗಣ್ಯರಿಗೆ ಸೂಕ್ತ ಶಿಷ್ಟಾಚಾರ ವ್ಯವಸ್ಥೆಯನ್ನು ಕಲ್ಪಿಸಿ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಸಿ ಶಿವಾನಂದಮೂರ್ತಿ, ಉಪ ವಿಭಾಗಾಧಿಕಾರಿ ಶ್ರೀನಿವಾಸ್, ನಗರಾಭಿವೃದ್ಧಿ ಕೋಶದ ಯೋಜನಾಧಿಕಾರಿ ಟಿ.ಎನ್ ನರಸಿಂಹಮೂರ್ತಿ, ಮುಜರಾಯಿ ತಹಶೀಲ್ದಾರ್ ತಮ್ಮೆಗೌಡ, ಪಾಂಡವಪುರ ಇ ಓ ವೀಣಾ ಸೇರಿದಂತೆ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

## ಸರ್ಕಾರಿ ಭೂಮಿಯಲ್ಲಿ ಪೌಲ್ಟ್ರಿ ಫಾರಂ ತೆರವಿಗೆ ಮೀನಾಮೇಷ

ತಾಲೂಕು ಆಡಳಿತ ಆಸಕ್ತಿ ತೋರಿಸುತ್ತಿಲ್ಲ. ಯಾವುದೇ ಕ್ರಮವೂ ಕೈಗೊಂಡಿಲ್ಲ.

## ಪ್ರಿಯಾಂಕಾ ಗಾಂಧಿ ಜೊತೆ ಕಾಮಾಕ್ಯ ದೇಗುಲಕ್ಕೆ ಡಿಕೆಶಿ ಭೇಟಿ

ಪ್ರಿಯಾಂಕಾ ಗಾಂಧಿ ಅವರೊಂದಿಗೆ ಅಸ್ಸಾಂನ ಗುವಾಹಟಿಯಲ್ಲಿರುವ ಪವಿತ್ರ ಕಾಮಾಕ್ಯ ದೇವಾಲಯಕ್ಕೆ ಭೇಟಿ ನೀಡಿದ್ದೆವು. ತಾಯಿ ಕಾಮಾಕ್ಯ ದೇವಿ ಆಶೀರ್ವಾದ ಎಲ್ಲರಿಗೂ ಶಕ್ತಿ ಮತ್ತು ಸಮೃದ್ಧಿ ನೀಡಲಿ ಎಂದು ಪಾರ್ಥಿಸಿ ಡಿಕೆಶಿ ಟ್ವೀಟ್ ಮಾಡಿದ್ದಾರೆ.

# ಶಿವಾಜಿ ನೀಡಿರುವ ಕೊಡುಗೆ ಅಪಾರ

## ಶಾಸಕ ಸಿಎನ್ ಮಂಜೇಗೌಡ ಹೇಳಿಕೆ | ಛತ್ರಪತಿ ಶಿವಾಜಿ ಜಯಂತಿ

ಮೈಸೂರು:– ಛತ್ರಪತಿ ಶಿವಾಜಿಯು ಈ ಸಮಾಜಕ್ಕೆ ಕೊಟ್ಟ ಕೊಡುಗೆಗಳ ಬಗ್ಗೆ ನಮ್ಮ ಇಂದಿನ ಪೀಳಿಗೆಗಳು ತಿಳಿದುಕೊಳ್ಳಬೇಕು ಅವರು ತೋರಿಸಿ ಕೊಟ್ಟಂತಹ ಮಾರ್ಗದಲ್ಲಿ ಇಂದು ನಮ್ಮ ಜೀವನಗಳ ನಡೆಸಬೇಕು. ಛತ್ರಪತಿ ಶಿವಾಜಿಯ ಸಾಮ್ರಾಜ್ಯವು ಶಕ್ತಿಯುತ ಸೇನಾಧಿಪತಿಗಳಿಂದ ತುಂಬಿತ್ತು. ಮೊಘಲ್ ರಾಜರ ವಿರುದ್ಧ ಹೋರಾಡಿ ಯುದ್ಧದಲ್ಲಿ ಜಯ ಸಾಧಿಸಿದಂತ ವ್ಯಕ್ತಿ ಶಿವಾಜಿ. ಅವರ ಜೀವನದಲ್ಲಿ ಗೆರಿಲ್ಲಾ ಯುದ್ಧ ಬಹಳ ಮಹತ್ವಪೂರ್ಣವಾದದ್ದು ಎಂದು ವಿಧಾನಪರಿಷತ್ತಿನ ಶಾಸಕರಾದ ಸಿಎನ್ ಮಂಜೇಗೌಡ ಅವರು ಹೇಳಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತ ಇಲಾಖೆ, ಮೈಸೂರು ಮಹಾನಗರ ಪಾಲಿಕೆ ವತಿಯಿಂದ ಕಲಾಮಂದಿರದಲ್ಲಿ ಆಯೋಜಿಸಲಾಗಿದ್ದ ಛತ್ರಪತಿ ಶಿವಾಜಿ ಜಯಂತಿಯ ಅಧ್ಯಕ್ಷತೆ ವಹಿಸಿ ಉದ್ಘಾಟಿಸಿ ಮಾತನಾಡಿದ ಅವರು ಇಂದಿನ ಮಕ್ಕಳು ಶಿವಾಜಿಯವರ ಬಗ್ಗೆ ಅತಿ ಹೆಚ್ಚು ಮಾಹಿತಿಯನ್ನು ತಿಳಿದುಕೊಳ್ಳಬೇಕು. ಪ್ರತಿಯೊಬ್ಬರ ಮನೆಯಲ್ಲೂ ಛತ್ರಪತಿ ಶಿವಾಜಿ ಅವರ ಭಾವಚಿತ್ರಗಳನ್ನು ಇಡಬೇಕು. ಅವರ ಸ್ಪೂರ್ತಿ ನಿಮ್ಮೆಲ್ಲರಿಗೂ ದಾರಿದೀಪವಾಗಬೇಕು ಎಂದರು

ಡಾ.ಆರ್ ಚಲಪತಿ ಅವರು ಉಪನ್ಯಾಸ ನೀಡಿ ಮಾತನಾಡಿ ಶಿವಾಜಿಯು ಜನತೆಯ ರಾಜ ಮತ್ತು ಪ್ರಜೆಗಳ ಮನಸ್ಸಿನಲ್ಲಿ ಬೇರೂರಿದಂತಹ ವೀರ. ಶಿವಾಜಿಯನ್ನು ಶತ್ರುಗಳು ಸಹ ಪ್ರೀತಿಸುತ್ತಿದ್ದರಂತೆ. ಪ್ರಜೆಗಳು ರಾಜನಿಗೆ ಪ್ರಾಣವನ್ನು ನೀಡುವಂತಹ ಪ್ರೀತಿ ಗೌರವ ಸಂಪಾದಿಸಿದ್ದರು. ಅಂದು ಶಿವಾಜಿಯ ಸಾಮ್ರಾಜ್ಯದಲ್ಲಿ ಸೈನಿಕರಿಗೆ ಯಾವುದೇ ಹೆಂಗಸರ ಮೈ ಮೇಲೆ ಕೈ ಹಾಕಬಾರದೆಂದು ಎಚ್ಚರಿಕೆ ನೀಡಿದರಂತೆ. ಮಹಿಳೆಯರ ಮೇಲೆ ಅತ್ಯಾಚಾರ ಮಾಡಿದರೆ ಅವರ ಕಣ್ಣುಗಳನ್ನು ಕಿತ್ತು ಸೆರೆವಾಸಕ್ಕೆ ತಳ್ಳುತ್ತಿದ್ದರು ಇವರ ಸಾಮ್ರಾಜ್ಯದಲ್ಲಿ ಮಹಿಳೆಯರಿಗೆ ಗೌರವಯುತವಾದ ಸ್ಥಾನವಿತ್ತು ಎಂದು ತಿಳಿಸಿದರು.

ಯುದ್ಧಕ್ಕೆ ತೆರಳುವಾಗ ರೈತರ ಗದ್ದೆಗಳ ಮೇಲೆ ಹೋಗಬಾರದು. ರೈತರ ಬೆಳೆಗೆ ನಾಶವಾಗಬಾರದೆಂದು ಎಂದು ಸೈನಿಕರಿಗೆ ಎಚ್ಚರಿಕೆ ನೀಡಿದ್ದರು. ರೈತರಿಗೆ ಬರ ಬಂದಾಗ ಕಂದಾಯವನ್ನು ವಸಲಿ ಮಾಡಬಾರದೆಂದು ಆದೇಶ ನೀಡಿದರು. ಬರಗಾಲ ನೀಗುವವರೆಗೂ ಸಾಮ್ರಾಜ್ಯದಲ್ಲಿ ಇವರಿಗೆ ಸಹಕಾರ ನೀಡಬೇಕೆಂದು ಹೇಳಿದರಂತೆ ಎಂದು ತಿಳಿಸಿದರು.



ಯುದ್ಧದ ಸಂದರ್ಭದಲ್ಲಿ ಯಾವುದೇ ಮಹಿಳೆಯನ್ನು ದಾಸಿಯ ರೀತಿಯಲ್ಲಿ ನೋಡಬಾರದೆಂದು ಆಜ್ಞೆ ಮಾಡಿದ್ದರು. ಶಿವಾಜಿ ಅಧಿಕಾರಕ್ಕೆ ಬಂದಾಗ ಪಾರ್ಷಿಭಾಷೆಯನ್ನು ತೆಗೆದುಹಾಕಿ ಜನರಿಗೆ ಅರ್ಥವಾಗುವ ಭಾಷೆಯಲ್ಲಿ ಆಡಳಿತ ನಡೆಸಬೇಕೆಂದು ಸುಧಾರಣೆಗಳನ್ನು ಕೈಗೊಂಡರು. 1674 ರಲ್ಲಿ ಛತ್ರಪತಿ ಎಂದು ಕರೆಸಿಕೊಂಡರು ಶಿವಾಜಿಯು ಗೆರಿಲ್ಲಾ ಯುದ್ಧವನ್ನು ಪರಿಚಯಿಸಿದರು. ಅಂದರೆ ಬೆಟ್ಟ–ಗುಡ್ಡಗಳಲ್ಲಿ ಅಡಗಿ ಯುದ್ಧ ಮಾಡುವುದು ಎಂದರ್ಥ ಛತ್ರಪತಿ ಶಿವಾಜಿಯು ಸ್ವತಂತ್ರವಾಗಿ ಸಾಮ್ರಾಜ್ಯವನ್ನು ಕಟ್ಟಿ , ಜನರ ಪ್ರೀತಿ ವಿಶ್ವಾಸವನ್ನು ಗಳಿಸಿದಂತಹ ಮಹಾನ್ ವೀರ ಎಂದು ಹೇಳಿದರು

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕರಾದ ವಿ.ಎನ್ ಮಲ್ಲಿಕಾರ್ಜುನ ಸ್ವಾಮಿ, ಕನ್ನಡ ಮತ್ತು ಸಂಸ್ಕೃತ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಎಮ್ ಡಿ ಸುದರ್ಶನ್, ಮಾರುತಿ ಕೆ ನಾಗೇಂದ್ರ ರಾವ್, ಗಣೇಶ ರಾವ್ ಜ್ಞಾನಪ್ರಕಾಶ್ ಸುನೀಲ್ ಶ್ರೀನಿವಾಸ ಶಿಂಧೆ ಭೀಮರಾವ್ ಉಮಾಪತಿ ಸತ್ಯಪಾಲ್ ಮತ್ತಿತರರು ಉಪಸ್ಥಿತರಿದ್ದರು.

### ಶಿವಾಜಿ ಗುಣ ಎಲ್ಲರರಲ್ಲೂ ಇರಲಿ

ಶ್ರೀರಂಗಪಟ್ಟಣದ ಶ್ರೀ ಚಂದ್ರಮೌಳೇಶ್ವರ ಸ್ವಾಮಿ ದೇವಸ್ಥಾನದ ಟ್ರಸ್ಟ್ ನ ಗಜಾನನ ಸ್ವಾಮಿಯವರು ಮಾತನಾಡಿ ಶಿವಾಜಿಯ ಗುಣ ಇಂದು ಎಲ್ಲರಲ್ಲೂ ಇರಬೇಕೆಂದು ಹೇಳಿದರು ಶಿವಾಜಿಯ ಗುರು ದಾದಾಜಿ ಕೊಂಡದೇವ ರಾಮದಾಸರು ಸಮಾಜದಲ್ಲಿ ಪ್ರತಿ ಯೊಬ್ಬ ವ್ಯಕ್ತಿಯಲ್ಲಿ ಅಹಂಕಾರ ತುಂಬಿರುತ್ತದೆ. ಅಹಂ ಕಾರ ಒಳ್ಳೆಯದಲ್ಲ ಎಂದು ಹೇಳುತ್ತಿದ್ದರು. ತುಕ ರಾಮ್ ಮಹಾರಾಜ್ ಅವರು ತುಂಬಾ ಬಡತನ ದಿಂದ ಕೂಡಿರುತ್ತಾರೆ ಅಂದು ಛತ್ರಪತಿ ಶಿವಾಜಿ ಯವರು ಇದನ್ನು ಗಮನಿಸಿ ತಮ್ಮ ಸಾಮ್ರಾಜ್ಯದಿಂದ ಸಂಪತ್ತುಗಳನ್ನು ಅವರ ಮನೆಗೆ ಕಳಿಸಿಕೊಟ್ಟರೆಂದು ಹೇಳಿದರು



**ಮೊದಲ ಪುಟದಿಂದ**

## ಸ್ನೇಹಮಯಿ ಕೃಷ್ಣ ವಿರುದ್ಧ ಕ್ರಮ

ದೂರುದಾರರ ಸದರಿ ಆರೋಪಕ್ಕೆ ಸರ್ಕಾರಕ್ಕೆ ಸಂಬಂಧಿಸಿದಂತೆ ಯಾವುದೇ ಪೂರಕ ದಾಖಲೆಗಳನ್ನು ಸಲ್ಲಿಸಿರುವುದಿಲ್ಲ. ಆರೋಪ ಸಂಬಂಧ ಸೂಕ್ತ ದಾಖಲೆ ಒದಗಿಸಿದರೆ ನಿಯಮಾನುಸಾರ ಸಾಕ್ಷಾಧಾರಗಳನ್ನು ಖಂಡಿತವಾಗಿ ಪರಿಶೀಲಿಸಿ ಕ್ರಮಕೈಗೊಳ್ಳಲಾಗುವುದು. ಅಲ್ಲದೆ, ದೂರುದಾರರು ಯಾವುದೇ ಪೂರಕ ಸಾಕ್ಷ್ಯಾಧಾರಗಳನ್ನು ಒದಗಿಸದೆ ಆರೋಪ ಮಾಡಿದ್ದಾರೆ. ಸರ್ಕಾರದ ಉನ್ನತ ಹಂತದಲ್ಲಿರುವವರ ವಿರುದ್ಧ ನಿರಾಧಾರ ಆರೋಪ ಮಾಡುತ್ತಿದ್ದಾರೆ. ಇದು ಅಧಿಕಾರಗಳ ವಿರುದ್ಧ ಮಾನಹಾನಿ ಮಾಡಿದಂತಾಗುತ್ತದೆ. ಆಧಾರ ರಹಿತ ಆರೋಪಗಳಿಗಾಗಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ನಿಯಾಮನುಸಾರವಾಗಿಯೇ ಕೆಎಎಸ್ ಅಧಿಕಾರಿ, ಮುಡಾ ಮಾಜಿ ಆಯುಕ್ತ ನಟೇಶ್ ಅವರಿಗೆ ಬಡ್ತಿ ನೀಡಿರುವುದಾಗಿ ಸ್ಪಷ್ಟನೆ ನೀಡಿದ್ದಾರೆ.

## ಸಫಾರಿ ಅನುಮತಿಗೆ ಆಕ್ರೋಶ

ಹೆಣ್ಣು ಮಕ್ಕಳು ವಿಧವೆಯರಾಗು ತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಸಫಾರಿ ಆರಂಭಿಸುವ ನಿರ್ಧಾರದಿಂದ ಹಿಂದೆ ಸರಿಯದಿದ್ದರೆ ಅರಣ್ಯ ಸಚಿವರು ಮೈಸೂರಿಗೆ ಪ್ರವೇಶಿಸಲು ಬಿಡುವುದಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕಪ್ಪು ಬಾವುಟ ಪ್ರದರ್ಶಿಸುತ್ತೇವೆ ಎಂದು ಪ್ರತಿಭನಾಕಾರರು ಎಚ್ಚರಿಕೆ ನೀಡಿದರು.

## ಮತದಾರರ ಪಟ್ಟಿ ಲೋಪ ಸರಿಪಡಿಸಿ

ಪ್ರತಿ ಮತಗಟ್ಟೆ ವ್ಯಾಪ್ತಿಯಲ್ಲಿರುವ ಎಲ್ಲಾ ಬೀದಿಗಳು, ಪ್ರತಿ ಬೀದಿಗಳಲ್ಲಿರುವ ಎಲ್ಲಾ ಮನೆಗಳು, ಪ್ರತಿ ಮನೆಯಲ್ಲಿರುವ ಎಲ್ಲಾ ಮತದಾರರನ್ನು ಮ್ಯಾಪಿಂಗ್ ಮಾಡಬೇಕು. ಇದರಿಂದ ಮತದಾರರ ಪಟ್ಟಿ ನಿಖರತೆ ಕಾಪಾಡಿ, ನಕಲಿ ಮತದಾರರನ್ನು ತೆಗೆಯಲು ಹಾಗೂ ಕೈಬಿಡಲಾಗಿರುವ ಮತದಾರರನ್ನು ಮತ್ತೆ ಸೇರಿಸಲು ನೆರವಾಗಲಿದೆ. ಅರ್ಹ ಮತದಾರರು ಮತದಾನದ ಅವಕಾಶದಿಂದ ವಂಚಿತರಾಗದಂತೆ ನೋಡಿಕೊಳ್ಳಲು ಚುನಾವಣಾ ಆಯೋಗ ವಿಶೇಷವಾಗಿ ಪರಿಷ್ಕರಣೆ ಅಭಿಯಾನ ನಡೆಸಬೇಕು ಎಂದು ತಿಳಿಸಿದ್ದಾರೆ

## ಉಚಿತ ಕೊಡುಗೆ ಅಭಿವೃದ್ಧಿಗೆ ಮಾರಕ

ನ್ಯಾಯಲಯ, ಉಚಿತ ವಸ್ತುಗಳು ಜನರನ್ನು ಕೆಲಸ ಮಾಡದಂತೆ ಮಾಡುತ್ತವೆ ಎಂದು ಆತಂಕ ವ್ಯಕ್ತಪಡಿಸಿದರು. ದೇಶದಾದ್ಯಂತ ಎಲ್ಲೆಡೆ ಇದೇ ಸಂಸ್ಕೃತಿ ಬೆಳೆಯುತ್ತಿದೆ. ಇದನ್ನು ಪುನರ್ ಪರಿಶೀಲಿಸಬೇಕು ಎಂದು ಸೂಚಿಸಿತು. ತಮಿಳುನಾಡು ಪ್ರಕರಣದಲ್ಲಿ ನ್ಯಾಯಾಲಯ ಕೇಂದ್ರ ಸರ್ಕಾರಕ್ಕೆ ನೋಟಿಸ್ ಜಾರಿ ಮಾಡಿದೆ.ವಿಚಾರಣೆ ಮುಂದುವರಿಸಿದೆ.

## ವಿಜಯೇಂದ್ರ ನೇತೃತ್ವದಲ್ಲಿ ಬಹುಮತ

ಇರಬೇಕು ಎಂದು ಸಲಹೆ ನೀಡಿದರು. ರಾಜ್ಯ ಸರ್ಕಾರ ರೋಹಿತ್ ವೇಮುಲಾ ಮಸೂದೆಯಲ್ಲಿ ಎಸ್ ಸಿ ಎಸ್ ಟಿ ಜತೆಗೆ ಮುಸ್ಲಿಮರನ್ನೂ ಸೇರಿಸಿದೆ. ಇದು ಸಾಮಾಜಿಕ ಸಾಮರಸ್ಯ ಹದಗೆಡಲು ಕಾರಣ ಆಗುತ್ತದೆ. ಎಸ್ ಸಿ ಮತ್ತು ಎಸ್ ಟಿಗಳಿಗೆ ಮಾತ್ರ ಈ ಕಾಯ್ದೆ ಅನ್ವಯ ಆಗಬೇಕು ಎಂದು ಹೇಳಿದರು. ಸಾರ್ವಜನಿಕ ಜೀವನದಲ್ಲಿ 50 ವರ್ಷ ಪೂರ್ಣಗೊಳಿಸಿದ ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್. ಯಡಿಯೂರಪ್ಪ ಅವರನ್ನು ಅಭಿನಂದಿಸಲಾಯಿತು.

## ಹೀಲಿಯಂ ಅನಿಲ ಬಳಕೆಗೆ ನಿಷೇಧ

ಮೈಸೂರು:– ಭಾರತೀಯ ನಾಗರಿಕ ಸುರಕ್ಷತಾ ಸಂಹಿತೆ, 2023 ರ ಕಲಂ 152 ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಸಾರ್ವಜನಿಕ ಶಾಂತಿ, ಸುರಕ್ಷತೆ ಮತ್ತು ಜೀವ ರಕ್ಷಣೆಯ ಹಿತದೃಷ್ಟಿಯಿಂದ ಮೈಸೂರು ಜಿಲ್ಲೆಯ ವ್ಯಾಪ್ತಿಯಲ್ಲಿರುವ ಎಲ್ಲಾ ಸಾರ್ವಜನಿಕ ಸ್ಥಳಗಳಲ್ಲಿ ಹೀಲಿಯಂ ಅನಿಲವನ್ನು ಬಳಸಿ ಬಲೂನ್‌ಗಳು ಅಥವಾ ಇತರ ಯಾವುದೇ ವಸ್ತುಗಳನ್ನು ಹೀಲಿಯಂ ಅನಿಲ ಉಪಯೋಗಿಸಿ ತುಂಬುವುದು, ಬಳಸುವುದು ಹಾಗೂ ಮಾರಾಟ ಮಾಡುವುದನ್ನು ಮುಂದಿನ ಆದೇಶದವರೆಗೆ ಸಂಪೂರ್ಣವಾಗಿ ನಿ?ಧಿಸಿ ಆದೇಶಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಲಕ್ಷ್ಮೀಕಾಂತ್ ರೆಡ್ಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ ಅಭಿಮತ**

# ಶಿವಾಜಿ ಶ್ರೇಷ್ಠ ವ್ಯಕ್ತಿತ್ವ, ಸ್ವಾಭಿಮಾನಿ ರಾಷ್ಟ್ರಕಲ್ಪನೆ ಇಂದಿಗೂ ಸ್ಮರಣೀಯ

ಚಾಮರಾಜನಗರ, ಭಾರತೀಯ ಇತಿಹಾಸದಲ್ಲಿ ಶಿವಾಜಿ ಮಹಾರಾಜರ ಶ್ರೇಷ್ಠ ಆದರ್ಶ ವ್ಯಕ್ತಿತ್ವ, ನಾಯಕತ್ವ ಗುಣ, ಸ್ವರಾಜ್ಯ ಕಲ್ಪನೆ, ಸ್ವಾಭಿಮಾನಿ ರಾಷ್ಟ್ರ ಕಲ್ಪನೆ ಹಾಗೂ ಧಾರ್ಮಿಕ ಸಹಿಷ್ಣುತೆ ಇಂದಿಗೂ ಸ್ಮರಣೀಯವಾಗಿವೆ ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ ಅವರು ಹೇಳಿದರು. ನಗರದ ವರನಟ ಡಾ. ರಾಜ್‌ಕುಮಾರ್ ಜಿಲ್ಲಾ ರಂಗಮಂದಿರದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಛತ್ರಪತಿ ಶಿವಾಜಿಯವರ 399ನೇ ಜಯಂತಿ ಕಾರ್ಯಕ್ರಮದಲ್ಲಿ ಶಿವಾಜಿಯವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಹಾರಾಷ್ಟ್ರದ ಶಿವನೇರಿ ದುರ್ಗದಲ್ಲಿ 1627ರಲ್ಲಿ ಜನಿಸಿದ ಶಿವಾಜಿ ಅವರು ಬಾಲ್ಯದಲ್ಲಿ ತಾಯಿ ಜೀಜಾಬಾಯಿ ಅವರಿಂದ ಸಾಕಷ್ಟು ಪ್ರಭಾವಿತರಾಗಿದ್ದರು. ತಾಯಿಯವರು ಹೇಳುತ್ತಿದ್ದ ರಾಮಾಯಣ, ಮಹಾಭಾರತ ಪರಂಪರೆಯ ಇತಿಹಾಸವನ್ನು ಅರ್ಥೈಸಿಕೊಂಡು ಸದೃಢ ಸ್ವರಾಜ್ಯ ಕಟ್ಟಲು ಮುಂದಾದರು. ಅವರ ಧೈರ್ಯ, ಸಾಹಸ, ಹೋರಾಟ ಗುಣ ನಮ್ಮೆಲ್ಲರಿಗೂ ಸ್ಪೂರ್ತಿಯಾಗಿದೆ ಎಂದರು. ಗೆರಿಲ್ಲಾ ಯುದ್ಧತಂತ್ರದ ಮೂಲಕ ಮೊಘಲರು ಮತ್ತು ಬಿಜಾಪುರದ ಆದಿಲ್ ಶಾಹಿಗಳಿಗೆ ಸಿಂಹಸ್ವಪ್ನರಾಗಿದ್ದ ಶಿವಾಜಿಯವರು ಆಡಳಿತದಲ್ಲಿ ಎಲ್ಲಾ ವರ್ಗದ ಜನರನ್ನು ಸಮಾನತೆಯಿಂದ ಕಾಣುತ್ತಿದ್ದರು. ದೇಶ ಸಂರಕ್ಷಣೆಗೆ ಸೈನ್ಯವನ್ನು ಸಜ್ಜುಗೊಳಿಸುವುದರಲ್ಲಿ ಇತರೆ ರಾಜರಿಗೂ ಶಿವಾಜಿ ಮಾದರಿಯಾಗಿದ್ದರು. ಸ್ವಾಭಿಮಾನಿ ರಾಷ್ಟ್ರ ನಿರ್ಮಾಣಕ್ಕೆ ಹೋರಾಡಿದ ಶಿವಾಜಿಯವರು ಸದಾಕಾಲ ಸ್ಮರಣೀಯರಾಗಿದ್ದಾರೆ ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಜವರೇಗೌಡ ಅವರು ತಿಳಿಸಿದರು.




ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಹಮದ್ ಅಸ್ಗರ್ ಮುನ್ನಾ ಅವರು ಮಾತನಾಡಿ ಬಾಲ್ಯದಲ್ಲಿಯೇ ಹೋರಾಟ ಗುಣಗಳನ್ನು ಮೈಗೂಡಿಸಿಕೊಂಡಿದ್ದ ಶಿವಾಜಿ ಮಹಾರಾಜರು ಒಬ್ಬ ಆದರ್ಶ ರಾಜ ಹೇಗಿರಬೇಕು ಎಂಬುದಕ್ಕೆ ಮಾದರಿಯಾಗಿದ್ದಾರೆ. ಅವರ ಧೈರ್ಯ, ಶೌರ್ಯ, ವೀರತ್ವ ಹಾಗೂ ಮುಂಚೂಣಿ ನಾಯಕತ್ವ ಗುಣಗಳು ಚಿರಸ್ಥಾಯಿಯಾಗಿವೆ. ಈ ದೇಶಕ್ಕೆ, ನಾಡಿಗೆ ಅಪಾರ ಕೊಡುಗೆ ನೀಡಿರುವ ಶಿವಾಜಿ ಮಹಾರಾಜರ ಆದರ್ಶಗಳನ್ನು ಎಲ್ಲರು ಅಳವಡಿಸಿಕೊಳ್ಳಬೇಕಾಗಿದೆ ಎಂದು ಹೇಳಿದರು. ಕ್ಷತ್ರಿಯ ಮರಾಠ ಪರಿಷತ್ ಜಿಲ್ಲಾಧ್ಯಕ್ಷರಾದ ವೆಂಕಟರಾವ್ ಸಾಠೆ ಅವರು ಮಾತನಾಡಿ ದೇಶಾದ್ಯಂತ ಇಂದು ಶಿವಾಜಿ ಮಹಾರಾಜರ ಜಯಂತಿ ಆಚರಿಸಲಾಗುತ್ತಿದೆ. ಉತ್ತಮ ಚಾಣಾಕ್ಷರು ಹಾಗೂ ಧರ್ಮ ಸಹಿಷ್ಣುವಾಗಿದ್ದ ಶಿವಾಜಿ ಮಹಾರಾಜರು ತನ್ನ ರಾಜ್ಯದಲ್ಲಿ ಎಲ್ಲಾ ಪ್ರಜೆಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಆಡಳಿತ ನಡೆಸಿದ್ದರು. ಎಲ್ಲರನ್ನು ಸರ್ವ ಸಮಾನತೆಯಿಂದ ನೋಡಿಕೊಂಡಿದ್ದರು. ಅವರ ಮಾರ್ಗದರ್ಶನದಲ್ಲಿ ನಾವೆಲ್ಲರೂ ಮುನ್ನಡೆಯಬೇಕಾಗಿದೆ ಎಂದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ರಾಜು, ನಗರದ ಪೊಲೀಸ್ ವೃತ್ತ ನಿರೀಕ್ಷಕರಾದ ಜಗದೀಶ್, ಸಮುದಾಯದ ಮುಖಂಡರಾದ ಚಂದ್ರರಾವ್, ಶ್ರೀನಿವಾಸ್, ಮಮತಾ ಬಾಯಿ, ಲೋಕೇಶ್ ರಾವ್, ಬಾಬು ರಾವ್, ಅಭಿರಾಮ್, ಶಿವಕುಮಾರ್, ಅನಿತಾ ಬಾಯಿ, ಎಲ್. ಸುರೇಶ್, ಇತರರು ಇದೇ ಸಂದರ್ಭದಲ್ಲಿ ಇದ್ದರು.

# ಒಳ ಮೀಸಲಾತಿ ಅನ್ಯಾಯ ಖಂಡಿಸಿ ಪ್ರತಿಭಟನಾ ಮೆರವಣಿಗೆ



ಕೊಳ್ಳೇಗಾಲ. ತಾಲ್ಲೂಕು ಬಲಗೈ ಸಮುದಾಯಗಳ ಒಕ್ಕೂಟ ವತಿಯಿಂದ ಒಳ ಮೀಸಲಾತಿ ಅನ್ಯಾಯವನ್ನು ಖಂಡಿಸಿ ಬೃಹತ್ ಪ್ರತಿಭಟನಾ ಮೆರವಣಿಗೆಯನ್ನು ಗುರುವಾರ ಹಮ್ಮಿಕೊಂಡಿದ್ದರು.

ಪಟ್ಟಣದ ಎಂ.ಜಿ.ಎಸ್.ವಿ ಮೈದಾನದಲ್ಲಿ ಜಮಾಯಿಸಿದ್ದ ಹೋರಾಟಗಾರರು ಸರ್ಕಾರದ ವಿರುದ್ಧ ಧಿಕ್ಕಾರ ಘೋಷಣೆ ಕೂಗುವ ಬಸ್ ನಿಲ್ದಾಣದ ರಸ್ತೆ, ಡಾ.ವಿಷ್ಣು ರಸ್ತೆ, ಡಾ.ರಾಜ್ ರಸ್ತೆ, ಡಾ. ಅಂಬೇಡ್ಕರ್ ರಸ್ತೆ ಮೂಲಕ ಪ್ರತಿಭಟನೆ ನಡೆಸಿದರು. ಮೆರವಣಿಗೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವರು ಹೆಚ್.ಸಿ ಮಹದೇವಪ್ಪ, ಪರಮೇಶ್ವರ್ ಹಾಗೂ ನಿವೃತ್ತ ನ್ಯಾಯಮೂರ್ತಿ ನಾಗಮೋಹನ್ ದಾಸ್ ರವರ ಫೋಟೋಗಳಿಗೆ ಚಪ್ಪಲಿಯಲ್ಲಿ ಹೊಡೆಯುವ ಆಕ್ರೋಶ ವ್ಯಕ್ತಪಡಿಸಿದರು.

ಬಳಿಕ ಪ್ರತಿಭಟನಾಕಾರರು ಮಾತನಾಡಿ, ದೇಶದ ಬಹುಸಂಖ್ಯಾತ ಪರಿಶಿಷ್ಟ ಜಾತಿಯ ಬಲಗೈ ಸಂಬಂಧಿತ ಜಾತಿಗಳು ಶತಮಾನಗಳಿಂದ ಶಿಕ್ಷಣ, ಉದ್ಯೋಗ ಮತ್ತು ಅಧಿಕಾರಗಳಿಂದ ವಂಚಿತರಾಗಿದ್ದವು. ಬಿ.ಆರ್. ಅಂಬೇಡ್ಕರ್ ಅವರ ನಿರಂತರ ಹೋರಾಟದ ಫಲವಾಗಿ ದೊರೆತ ಮೀಸಲಾತಿಯಿಂದ ಈಗಷ್ಟೇ ಒಂದು–ಎರಡು ತಲೆಮಾರುಗಳಿಂದ ಶಿಕ್ಷಣ ಮತ್ತು ಉದ್ಯೋಗದಲ್ಲಿ ಸೀಮಿತ ಪ್ರಗತಿ ಸಾಧ್ಯವಾಗಿದೆ ಎಂದು ತಿಳಿಸಿದರು.

ಆದರೆ, ಜಾತಿವಾದ ಮತ್ತು ಕೋಮುವಾದ ಮನೋಭಾವದವರು ಒಳಮೀಸಲಾತಿಯ ಹೆಸರಿನಲ್ಲಿ ಬಲಗೈ ಸಂಬಂಧಿತ ಜಾತಿಗಳನ್ನು ಮೀಸಲಾತಿಯಿಂದ ಹೊರಗಿಡಲು ಪ್ರಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದರು. ಈ ರಾಜ್ಯವನ್ನು ಆಡಳಿತ ನಡೆಸಿದ ಜೆಡಿಎಸ್, ಬಿಜೆಪಿ ಹಾಗೂ ಕಾಂಗ್ರೆಸ್ ಸರ್ಕಾರಗಳು ಇಂದಿನ ಪರಿಸ್ಥಿತಿಗೆ ಕಾರಣವಾಗಿವೆ ಎಂದು ವಾಗ್ದಾಳಿ ನಡೆಸಿದರು.

ಹಲವಾರು ಹಕ್ಕೊತ್ತಾಯಗಳನ್ನು ಈಡೇರಿಸಬೇಕೆಂದು ಒತ್ತಾಯಿಸಿ ಸರ್ಕಾರಕ್ಕೆ ತಲುಪಿಸುವಂತೆ ಉಪವಿಭಾಗ ಅಧಿಕಾರಿ ದಿನೇಶ್ ಕುಮಾರ್ ಮೀನಾ ರವರಿಗೆ ಮನವಿ ಪತ್ರ ನೀಡಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಜಿಲ್ಲಾ ಕಾರ್ಯಾಧ್ಯಕ್ಷ ಮತ್ತು ನಿವೃತ್ತ ಪೊಲೀಸ್ ಅಧಿಕಾರಿ ಬಿ.ಪುಟ್ಟಸ್ವಾಮಿ, ಹೆಚ್.ಕೆ ಟ್ರಸ್ಟ್ ಕಾರ್ಯದರ್ಶಿ ಪ್ರೇಮಲತಾ, ಡಾ.ಬಿ.ಆರ್.ಅಂಬೇಡ್ಕರ್ ಸಂಘದ ಅಧ್ಯಕ್ಷರು ಆನಂದಮೂರ್ತಿ, ಉಪಾಧ್ಯಕ್ಷ ಕಿರಣ್, ಕಾರ್ಯದರ್ಶಿ ಪಾಪಣ್ಣ, ಸಹಕಾರ್ಯದರ್ಶಿ ಶಶಿಧರ್, ಖಜಾಂಚಿ ರಾಜೇಶ್, ಮುಖಂಡರು ಅಣಗಳ್ಳಿ ಬಸವರಾಜು, ಕೂಡ್ಲೂರು ಶ್ರೀಧರ್ ಮೂರ್ತಿ, ನಟರಾಜು ಮಾಳಿಗೆ, ಶೇಖರ್ ಬುದ್ಧ, ಸಿದ್ದಪ್ಪಾಜಿ, ಶಂಕರ್ ಚೇತನ್, ದಿಲೀಪ್ ಸಿದ್ದಪ್ಪಾಜಿ, ಮುಳ್ಳೂರು ಕಮಲ್, ವಕೀಲರ ಸಂಘದ ಅಧ್ಯಕ್ಷರು ಬಸವರಾಜು, ಮುಳ್ಳೂರು ಶಿವಮಲ್ಲು, ಚೇತನ್ ದೊರೆ, ವರದರಾಜು, ಗುರುಮೂರ್ತಿ, ಮಹಿಳಾ ಸಂಘಟನೆಯ ಶಿವಮ್ಮ, ಸಿದ್ದಯ್ಯನಪುರ ಗ್ರಾ.ಪಂ ಮಾಜಿ ಅಧ್ಯಕ್ಷರು ಶಶಿಕುಮಾರಿ, ಕನ್ನಡ ಸಂರಕ್ಷಣಾ ಪಡೆ ಜಿಲ್ಲಾಧ್ಯಕ್ಷ ಮಾಂಬಳ್ಳಿ ರಾಜೇಶ್ ಮಹಾಜನ್, ಜಗದೀಶ್ ಶಂಕನಪುರ, ಮಹದೇವ ಶಂಕನಪುರ, ತಾಲ್ಲೂಕಿನ ಮಾಜಿ ಜನಪ್ರತಿನಿಧಿಗಳು ಹಾಗೂ ಇತರರು ಇದ್ದರು.


ಕೃಷ್ಣ ವಂದನ

ಸ್ನೇಹಾ ಆನಂದ್

## ಹೇ ಕೃಷ್ಣಾ !

ಹೂವ ಹಾಕಿದರೇನು
ಜಪವ ಮಾಡಿದರೇನು
ಕಸುದಿಲ್ಲಮನದ ಕಸ ಗುಡಿಸಿದೆ!

ಗುಡಿ,ಗುಂಡಾರವ ಸುತ್ತಿ,
ತುಪ್ಪದಾರತಿ ಎತ್ತಿ ತಪ್ಪನ್ನು ತಿದ್ದದೆ, ಒಪ್ಪುವನೇ ಆ ಕೃಷ್ಣಪ್ಪ!

ನೈವೇದವನು ಇಟ್ಟು , ಮಡಿ ಬಟ್ಟೆಯನು ಉಟ್ಟು
ಮನದ ಕಲ್ಮಶದೂಡದೆ ಅಪ್ಪುವನೇ
ಆ ತಿಮ್ಮಪ್ಪ!

ಸಿಟ್ಟು , ಸೇಡಿಗೆ ಶಿರವಿಟ್ಟು!
ಮನದ

ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆ

# ಜಿಲ್ಲಾಧ್ಯಕ್ಷರಾಗಿ ಗೌಡಹಳ್ಳಿ ಮಹೇಶ್ ನೇಮಕ

ಚಾಮರಾಜನಗರ, ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆಯ ಚಾಮರಾಜನಗರ ಜಿಲ್ಲಾಧ್ಯಕ್ಷರನ್ನಾಗಿ ಮತ್ತು ರಾಜ್ಯ ಕಾರ್ಯಕಾರಿ ಸಮಿತಿ ನಿರ್ದೇಶಕರನ್ನಾಗಿ ವಕೀಲ ಗೌಡಹಳ್ಳಿ ಮಹೇಶ್ ನೇಮಕಗೊಂಡಿದ್ದಾರೆ.



ಪರಿಸರ ಸಂರಕ್ಷಣೆ, ವನ್ಯಜೀವಿ ರಕ್ಷಣೆ ಹಾಗೂ ಸಾಮಾಜಿಕ ಸೇವೆಯಲ್ಲಿನ ಅನುಭವ, ಆಸಕ್ತಿ ಮತ್ತು ಸೇವಾ ಮನೋಭಾವವನ್ನು ಗುರುತಿಸಿ ಈ ನೇಮಕಾತಿ ಮಾಡಲಾಗಿದೆ. ಇದು ಮೂರು ವರ್ಷಗಳ ಅವಧಿಗೆ (3 ವರ್ಷ) ಮಾನ್ಯವಾಗಿರುತ್ತದೆ. ನಿಮ್ಮ ಸೇವೆ ಸಮಾಜಕ್ಕೆ ಮತ್ತು ಪರಿಸರಕ್ಕೆ ಮಹತ್ವದ ಕೊಡುಗೆ ನೀಡಲಿದೆ ಎಂಬ ವಿಶ್ವಾಸ ನಮಗಿದೆ ಎಂದು ವೇದಿಕೆಯ ರಾಜ್ಯಾಧ್ಯಕ್ಷ ಮಾಲತೇಶ್ ಅರಸ್ ಹರ್ತಿಕೋಟೆ ನೇಮಕಾತಿ ಆದೇಶದಲ್ಲಿ ತಿಳಿಸಿದ್ದಾರೆ. ಇವರ ನೇಮಕವನ್ನು ಪರಿಸರ ಪ್ರೇಮಿಗಳು ಸೇರಿದಂತೆ ವಿವಿಧ ಸಂಘಟನೆಳ ಮುಖಂಡರು ಸ್ವಾಗತಿಸಿದ್ದಾರೆ.

## ಇಂದು ಕರಪತ್ರ ಬಿಡುಗಡೆ


ಚಾಮರಾಜನಗರ: ಕನ್ನಡ ಪುಸ್ತಕ ಪ್ರಾಧಿಕಾರ ಹಾಗೂ ನಗರದ ರೋಟರಿ ಸಂಸ್ಥೆ ಸಂಯುಕ್ತಾಶ್ರಯದಲ್ಲಿ ಕನ್ನಡ ಪುಸ್ತಕ ಪ್ರಾಧಿಕಾರ ಯೋಜನೆಯಾದ 'ಮನೆಗೊಂದು ಗ್ರಂಥಾಲಯ' ಕರಪತ್ರ ಬಿಡುಗಡೆ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದ ಜಿಲ್ಲಾ ಜಾಗೃತಿ ಸಮಿತಿ ಸದಸ್ಯರಿಗೆ ನೇಮಕಾತಿ ಪತ್ರ ವಿತರಣೆ ಸಮಾರಂಭವನ್ನು ಫೆಬ್ರವರಿ 20ರಂದು ಬೆಳಿಗ್ಗೆ 11 ಗಂಟೆಗೆ ನಗರದ ರೋಟರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷರಾದ ಡಾ.ಮಾನಸ ಅವರು ಕಾರ್ಯಕ್ರಮ ಉದ್ಘಾಟಿಸುವರು. ಜೆ.ಎಸ್.ಎಸ್. ಮಹಿಳಾ ಕಾಲೇಜಿನ ಪ್ರಾಂಶುಪಾಲರಾದ ಡಾ. ಎನ್. ಮಹದೇವ ಸ್ವಾಮಿ, ರೋಟರಿ ಸಂಸ್ಥೆ ಅಧ್ಯಕ್ಷರಾದ ಕಾಗಲವಾಡಿ ಚಂದ್ರು, ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ದ್ವಿತೀಯ ಪಿಯುಸಿ ಪರೀಕ್ಷೆ | ಜಿಲ್ಲಾಧಿಕಾರಿ ಶ್ರೀರೂಪ ಸೂಚನೆ

# ಸಿಬ್ಬಂದಿ ಹೊಣೆಗಾರಿಕೆಯಿಂದ ಕಾರ್ಯನಿರ್ವಹಿಸಲು ಸೂಚನೆ

ಚಾಮರಾಜನಗರ: ಕರ್ನಾಟ ಪಿಯುಸಿ ಪರೀಕ್ಷೆ ಇದೇ ಫೆಬ್ರವರಿ 28 ರಿಂದ ಮಾರ್ಚ್ 17ರವರೆಗೆ ನಡೆಯಲಿದ್ದು, ಪರೀಕ್ಷಾ ಕಾರ್ಯವನ್ನು ಪಾರದರ್ಶಕವಾಗಿ ನಡೆಸಲು ನಿಯೋಜಿತ ಅಧಿಕಾರಿಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸುವಂತೆ ಜಿಲ್ಲಾಧಿಕಾರಿ ಶ್ರೀರೂಪ ಸೂಚನೆ ನೀಡಿದರು.



ನಗರದ ಜಿಲ್ಲಾಡಳಿತ ಭವನದಲ್ಲಿರುವ ವೀಡಿಯೋ ಕಾನ್ಫರೆನ್ಸ್ ಸಭಾಂಗಣದಲ್ಲಿಂದು ದ್ವಿತೀಯ ಪಿಯುಸಿ ಪರೀಕ್ಷೆಗೆ ಸಂಬಂಧಿಸಿದಂತೆ ನಡೆದ ಪೂರ್ವ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಒಟ್ಟು 6285 ಹೊಸ ವಿದ್ಯಾರ್ಥಿಗಳು, 150 ಖಾಸಗಿ ವಿದ್ಯಾರ್ಥಿಗಳು, 474 ಪುನರಾವರ್ತಿತ ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 6909 ವಿದ್ಯಾರ್ಥಿಗಳು ಜಿಲ್ಲೆಯ 17 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗೆ ಹಾಜರಾಗಲಿದ್ದಾರೆ. ಪರೀಕ್ಷಾ ಕಾರ್ಯವು ಮುಕ್ತ, ಸುವ್ಯವಸ್ಥಿತ ಹಾಗೂ ಪಾರದರ್ಶಕವಾಗಿ ನಡೆಯಲು ಅಧಿಕಾರಿಗಳು ಹೊಣೆಗಾರಿಕೆಯಿಂದ ಕರ್ತವ್ಯ ನಿರ್ವಹಿಸಬೇಕು ಎಂದರು.

ಪರೀಕ್ಷಾ ಕೇಂದ್ರಗಳಿಗೆ ಅವಶ್ಯಕತೆಗನುಗುಣವಾಗಿ ಸೂಕ್ತ ಪೊಲೀಸ್ ಬಂದೋ ಬಸ್ತ್ ಒದಗಿಸಬೇಕು. ಅಗತ್ಯಕ್ಕೆ ತಕ್ಕಂತೆ ಮಹಿಳಾ ಸಿಬ್ಬಂದಿಯನ್ನು ಸಹ ನಿಯೋಜಿಸಬೇಕು. ಪರೀಕ್ಷಾ ಕೇಂದ್ರಕ್ಕೆ ಅನಧಿಕೃತ ವ್ಯಕ್ತಿಗಳು ಅತಿಕ್ರಮ ಪ್ರವೇಶ ಮಾಡದಂತೆ ತಡೆಯಬೇಕು. ಪರೀಕ್ಷಾ ಕೇಂದ್ರಗಳ ಬಳಿ ಅಕ್ರಮಗಳಿಗೆ ಪ್ರಚೋದಿಸುವವರ ವಿರುದ್ದ ಸೂಕ್ತ ಕ್ರಮ ತೆಗೆದುಕೊಳ್ಳಬೇಕು. ಪರೀಕ್ಷಾ ಅಕ್ರಮಗಳಿಗೆ ಆಸ್ಪದ ಕೊಡಬಾರದು ಎಂದು ತಿಳಿಸಿದರು. ಆರೋಗ್ಯ ಇಲಾಖೆಯಿಂದ ಪ್ರತಿ ಪರೀಕ್ಷಾ ಕೇಂದ್ರಕ್ಕೆ ಇಬ್ಬರು ಶುಶ್ರೂಷಕರನ್ನು ಪ್ರಥಮ ಚಿಕಿತ್ಸೆ ಕಿಟ್ ನೊಂದಿಗೆ ನೇಮಕ ಮಾಡಬೇಕು. ಪರೀಕ್ಷಾ ದಿನಗಳಂದು ವಿದ್ಯಾರ್ಥಿಗಳು ಹಾಗೂ ಪರೀಕ್ಷಾ ಕಾರ್ಯಗಳಿಗೆ ತೊಂದರೆಯಾಗದಂತೆ ನಿರಂತರವಾಗಿ ವಿದ್ಯುತ್ ಪೂರೈಸಬೇಕು. ಪರೀಕ್ಷಾ ಕೇಂದ್ರಗಳಲ್ಲಿ ಎಲ್ಲ ಮೂಲ ಸೌಕರ್ಯಗಳು ಸಮರ್ಪಕವಾಗಿ ಇರುವಂತೆ ಮೊದಲೇ ನೋಡಿಕೊಳ್ಳಬೇಕು ಎಂದರು.

ಪರೀಕ್ಷೆ ಹಾಗೂ ಪ್ರಶ್ನೆ ಪತ್ರಿಕೆಗಳಿಗೆ ಸಂಬಂಧಿಸಿದಂತೆ ಸಾಮಾಜಿಕ ಜಾಲತಾಣಗಳ ಮೂಲಕ ಗೊಂದಲ, ಸಂದೇಹ, ಸುಳ್ಳು ವದಂತಿ ಹಬ್ಬಿಸುವ ಹಾಗೂ ರವಾನಿಸುವವರ ವಿರುದ್ಧ ಕಾನೂನಿನ ಪ್ರಕಾರ ಅಗತ್ಯ ಕ್ರಮ ತೆಗೆದುಕೊಳ್ಳಲಾಗುತ್ತದೆ. ಸಾರ್ವಜನಿಕರು, ಪೋಷಕರು, ವಿದ್ಯಾರ್ಥಿಗಳು ಪರೀಕ್ಷೆ ಸಂಬಂಧ ಸುಳ್ಳು ಮಾಹಿತಿಗಳಿಗೆ ಕಿವಿಗೊಡಬಾರದು. ಈ ಬಗ್ಗೆ ಅಧಿಕಾರಿಗಳು ಜಾಗೃತಿ ಮೂಡಿಸಬೇಕು ಎಂದರು.

ಪರೀಕ್ಷಾ ಪಾವಿತ್ರ್ಯತೆಯನ್ನು ಕಾಪಾಡಿಕೊಂಡು ಶಿಸ್ತು ಬದ್ದವಾಗಿ ಪರೀಕ್ಷಾ ಕಾರ್ಯವನ್ನು ನಿರ್ವಹಿಸಬೇಕು. ಯಾವುದೇ ಲೋಪಗಳಿಗೆ ಅವಕಾಶವಾಗದಂತೆ ಯಶಸ್ವಿಯಾಗಿ ಪರೀಕ್ಷಾ ಕರ್ತವ್ಯವನ್ನು ಪೂರೈಸಬೇಕು ಎಂದು ಜಿಲ್ಲಾಧಿಕಾರಿ ಶ್ರೀರೂಪ ಅವರು ತಿಳಿಸಿದರು. ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಪುಟ್ಟಗೌರಮ್ಮ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಸುರೇಶ್, ಖಜಾನೆ ಇಲಾಖೆ ಉಪನಿರ್ದೇಶಕರಾದ ಕೆ.ಎಸ್. ರಾಜೇಶ್ವರಿ, ತಾಲೂಕುಗಳ ತಹಶೀಲ್ದಾರರು, ವಿವಿಧ ಇಲಾಖೆಗಳ ಅಧಿಕಾರಿಗಳು, ಪ್ರಾಂಶುಪಾಲರು ಸಭೆಯಲ್ಲಿ ಉಪಸ್ಥಿತರಿದ್ದರು.

### ಕೆಎಸ್ಆರ್‌ಟಿಸಿ ಬಸುಗಳಲ್ಲಿ ಉಚಿತ ಸಂಚಾರ

**ಪರೀಕ್ಷೆ ದಿನಗಳಂದು ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರಗಳಿಗೆ ತೆರಳಲು ಕೆಎಸ್ಆರ್‌ಟಿಸಿ ಬಸ್ಸುಗಳಲ್ಲಿ ಪರೀಕ್ಷಾ ಪ್ರವೇಶ ಪತ್ರ ತೋರಿಸಿ ಉಚಿತವಾಗಿ ಸಂಚರಿಸಲು ಆದೇಶಿಸಲಾಗಿದೆ. ಪರೀಕ್ಷಾ ಸಮಯ ದಲ್ಲಿ ವಿದ್ಯಾರ್ಥಿಗಳು ನಿಗದಿತ ಸಮಯದಲ್ಲಿ ಪರೀಕ್ಷಾ ಕೇಂದ್ರಗಳಿಗೆ ತಲುಪಲು ಅನುಕೂಲವಾಗು ವಂತೆ ಪಟ್ಟಣ ಹಾಗೂ ಎಲ್ಲ ಗ್ರಾಮಾಂತರ ಪ್ರದೇಶಗಳಿಗೆ ಹೆಚ್ಚಿನ ಬಸ್ ವ್ಯವಸ್ಥೆ ಕಲ್ಪಿಸಬೇಕು. ಪರೀಕ್ಷಾ ಕೇಂದ್ರಗಳಿರುವ ಮಾರ್ಗಗಳಲ್ಲಿ ವಿದ್ಯಾರ್ಥಿಗಳು ಕಂಡು ಬಂದಲ್ಲಿ ಕಡ್ಡಾಯವಾಗಿ ಬಸ್ ನಿಲುಗಡೆ ಗೊಳಿಸಿ ವಿದ್ಯಾರ್ಥಿಗಳಿಗೆ ಸಂಚರಿಸಲು ಅವಕಾಶ ಮಾಡಿಕೊಡಬೇಕು ಎಂದು ಸೂಚಿಸಿದರು.**

ಈ ಸಭೆಗೂ ಮೊದಲು ಜಿಲ್ಲಾಡಳಿತ ಭವನದ ಹಳೆ ಕೆಡಿಪಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಶ್ರೀರೂಪ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರ ಜಂಟಿ ಅಧ್ಯಕ್ಷತೆಯಲ್ಲಿ ಪ್ರಾಂಶುಪಾಲರೊಂದಿಗೆ ದ್ವಿತೀಯ ಪಿಯುಸಿ ಫಲಿತಾಂಶ ಪ್ರಗತಿ ಸುಧಾರಣಾ ಸಂಬಂಧ ಸಭೆ ನಡೆಸಲಾಯಿತು.

# ನರೇಗಾ ಉಳಿವಿಗೆ ಚಾಮುಂಡೇಶ್ವರಿ ಕಾಂಗ್ರೆಸ್ ಹೋರಾಟ

ಮೈಸೂರು: ಮಹಾತ್ಮಗಾಂಧೀಜಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಮರಳಿ ತರುವಂತೆ ದೇಶದೆಲ್ಲೆಡೆ ನಡೆಯುತ್ತಿರುವ ಕಾಂಗ್ರೆಸ್ ಹೋರಾಟವನ್ನು ಬೆಂಬಲಿಸಿ ಚಾಮುಂಡೇಶ್ವರಿ ಕ್ಷೇತ್ರದ ಕಾರ್ಯಕರ್ತರು ಪ್ರತಿಭಟಿಸಿದರು.

ನಗರದ ಕೋಟೆ ಆಂಜನೇಯ ಸ್ವಾಮಿ ದೇವಾಲಯದ ಮುಂಭಾಗದಲ್ಲಿ ಜಿಲ್ಲಾ ಕಾಂಗ್ರೆಸ್ ನೇತೃತ್ವದಲ್ಲಿ ನಡೆದ ಹೋರಾಟದಲ್ಲಿ ನೂರಾರು ಮಂದಿ ಭಾಗವಹಿಸಿ ಬಿಜೆಪಿ ವಿರುದ್ಧ ನಾನಾ ಘೋಷಣೆಗಳನ್ನು ಕೂಗಿದರು. ಇದೇ ವೇಳೆ ನರೇಗಾ ಯೋಜನೆಯನ್ನು "ವೀಕ್ಷಿತ್ ಭಾರತ್–ಗ್ಯಾರಂಟಿ ಫಾರ್ ರೋಜ್‌ಗಾರ್ ಮತ್ತು ಅಜೀವಿಕಾ ಮಿಷನ್ (ಗ್ರಾಮೀಣ)' ಎಂದು ಮರುನಾಮಕರಣ ಮಾಡಿರುವ ಬಿಜೆಪಿ ನಡೆಯನ್ನು ಖಂಡಿಸಿದರು. ಅಲ್ಲದೆ ಕೇಂದ್ರ ಬಿಜೆಪಿ ಗ್ರಾಮೀಣ ಜನರ ಕೂಲಿಯನ್ನಷ್ಟೇ ಅಲ್ಲದೆ ಬದುಕನ್ನು ಕಸಿದುಕೊಳ್ಳಲು ಇಂತಹ ತೀರ್ಮಾನ ಕೈಗೊಂಡಿದೆ. ನರೇಗಾ ಯೋಜನೆ ಬದಲಾವಣೆ ಅವೈಜ್ಞಾನಿಕವಾಗಿದ್ದು, ಈ ಕೂಡಲೇ ಮತ್ತೆ ನರೇಗಾ ಮರುಸ್ಥಾಪಿಸಬೇಕು. ಆ ಮೂಲಕ ಗ್ರಾಮೀಣ ಜನರ ಹಿತಾಸಕ್ತಿ ಕಾಪಾಡಬೇಕೆಂದು ಆಗ್ರಹಿಸಿದರು.ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಎಸ್.ಅರುಣ್ ಕುಮಾರ್ ಮಾತನಾಡಿದರು. ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಮಾತನಾಡಿ ಕೇಂದ್ರದ ವಿರುದ್ಧ ಕಿಡಿಕಾರಿದರು. ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಎಸ್.ಅರುಣ್ ಕುಮಾರ್, ಮಾಜಿ ಮೇಯರ್ ಪುಷ್ಪಲತಾ ಚಿಕ್ಕಣ್ಣ, ಮೋದಾಮಣಿ, ಚಿಕ್ಕಣ್ಣ, ಚಾಮುಂಡೇಶ್ವರಿ ಬ್ಲಾಕ್ ಕಾಂಗ್ರೆಸ್‌ನ ಅಧ್ಯಕ್ಷ ಜೆ.ಸತೀಶ್, ಬಿ. ಗುರುಸ್ವಾಮಿ, ಜಿಪಂ ಮಾಜಿ ಸದಸ್ಯ ಕೂರ್ಗಳ್ಳಿ ಮಹದೇವ್, ಲೇಖಾ ವೆಂಕಟೇಶ್, ಜವರಪ್ಪ, ತಾಪಂ ಮಾಜಿ ಸದಸ್ಯ ಸಾಲುಂಡಿ ಸಿದ್ದರಾಮೇಗೌಡ, ಸಿದ್ದಲಿಂಗಪುರ ಸೋಮಣ್ಣ, ನಾಗನಹಳ್ಳಿ ಕೆ.ಊಮಾಶಂಕರ್, ಹಂಚ್ಯಾ ಗ್ರಾಮಪಂಚಾಯಿತಿ ಮಾಜಿ ಅಧ್ಯಕ್ಷ ಎಚ್.ಸಿ.ಕುಮಾರಸ್ವಾಮಿ, ಕೆಪಿಸಿಸಿ ಬಸವರಾಜು ಸೇರಿ ಅನೇಕರು ಉಪಸ್ಥಿತರಿದ್ದರು.





**ನಗರಸಭಾ ಕಾರ್ಯಾಲಯ, ಹೂಟಗಳ್ಳಿ**
ಎಸ್.ಆರ್.ಎಸ್. ಸ್ಟೇಷನ್ ಎದುರು, ಹೈಟೆನ್ಷನ್ ಜೋಡಿ ರಸ್ತೆ, ಹೂಟಗಳ್ಳಿ
ಮೈಸೂರು ಜಿಲ್ಲೆ – 570018, ದೂ: 0821–2001737
ಇ–ಮೇಲ್: ka.hootagalli.cmc@gmail.com, ವೆಬ್‌ಸೈಟ್: ka.hootagalli.cmc@gmail.com

ಸಂ.: ನಸಹೂ/ತಾಂತ್ರಿಕ/ಟೆಂಡರ್ ಪ್ರಕಟಣೆ/ಸಿ.ಆರ್.–16/2025–26 **ದಿನಾಂಕ:** 18.02.2026

**ಟೆಂಡರ್ ಪ್ರಕಟಣೆ**

ಹೂಟಗಳ್ಳಿ ನಗರಸಭೆ ವ್ಯಾಪ್ತಿಯಲ್ಲಿ 2025–26ನೇ ಸಾಲಿನ ನಗರಸಭಾ ನಿಧಿ ಅನುದಾನದಲ್ಲಿ ಕೆ.ಟಿ.ಪಿ.ಪಿ. ಕಾಯ್ದೆ 2000ರ ಪ್ರಕಾರ KPP ಪೋರ್ಟಲ್ ಮೂಲಕ ಈ ಕೆಳಕಂಡ ಸೇವೆಗಳನ್ನು ಒದಗಿಸಲು ಟೆಂಡರ್ ಕರೆಯಲಾಗಿದ್ದು, ನೋಂದಾಯಿತ ಗುತ್ತಿಗೆದಾರರು ಹಾಗು ಸಂಸ್ಥೆಗಳಿಂದ ಟೆಂಡರ್ ಆಹ್ವಾನಿಸಲಾಗಿದೆ. ಟೆಂಡರ್‌ಗಳನ್ನು **https://kppp.karnataka.gov.in** ಪೋರ್ಟಲ್ ಮೂಲಕ ಸಲ್ಲಿಸಬಹುದಾಗಿದೆ. ಟೆಂಡರ್ ಸಲ್ಲಿಸುವ ಕೊನೆಯ **ದಿನಾಂಕ: 05.03.2026 ಸಂಜೆ 5:30 ಗಂಟೆಯವರೆಗೆ,** ಟೆಂಡರ್ ತೆರೆಯುವ **ದಿನಾಂಕ: 07.03.2026, ಬೆಳಿಗ್ಗೆ 10.30 ಗಂಟೆಗೆ.** ಹೆಚ್ಚಿನ ಮಾಹಿತಿಗಾಗಿ ಕಛೇರಿಯ ತಾಂತ್ರಿಕ ಶಾಖೆಯ ಅಭಿಯಂತರರನ್ನು ಸಂಪರ್ಕಿಸಬಹುದಾಗಿದೆ. ಟೆಂಡರ್‌ನ್ನು ಅಂಗೀಕರಿಸುವ ಅಥವಾ ತಿರಸ್ಕರಿಸುವ ಹಕ್ಕನ್ನು ನಗರಸಭೆ ಕಾಯ್ದಿರಿಸಿಕೊಂಡಿದೆ ಹಾಗೂ ಜಿ.ಎಸ್.ಟಿ.ಯನ್ನು ಪ್ರತ್ಯೇಕವಾಗಿ ಪಾವತಿಸಲಾಗುವುದು.

| ಕ್ರ. ಸಂ. | ಇಂಡೆಂಟ್ ವಿವರಗಳು | ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) | ಇ.ಎಂ.ಡಿ ಮೊತ್ತ (ರೂ.ಗಳಲ್ಲಿ) |
|---|---|---|---|
| 1 | DMA/2025-26/SE7336 | 5.01 | 12,600/- |
| 2 | DMA/2025-26/SE7350 | 20.00 | 42,500/- |

DIPR/MYS/1694/SA/2025-26
ಸಹಿ/– **ಪೌರಾಯುಕ್ತರು**
ನಗರಸಭೆ, ಹೂಟಗಳ್ಳಿ


# ರಾಜಗೋಪುರ ನಿರ್ಮಾಣಕ್ಕೆ ಚಾಲನೆ



ಮೈಸೂರು: ವಿಜಯನಗರದಲ್ಲಿರುವ ಐತಿಹಾಸಿಕ ಶ್ರೀ ಯೋಗನರಸಿಂಹಸ್ವಾಮಿ ದೇವಾಲಯದ ರಾಜಗೋಪುರ ನಿರ್ಮಾಣಕ್ಕೆ ಗುರುವಾರ ಬೆಳಗ್ಗೆ ಚಾಲನೆ ದೊರೆಯಿತು.

ದೇವಾಲಯದ ಸಂಸ್ಥಾಪಕ ನಾಡೋಜ ಪ್ರೊ. ಡಾ.ಭಾಷ್ಯಂ ಸ್ವಾಮೀಜಿ ರಾಜಗೋಪುರ ನಿರ್ಮಾಣ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿದರು. ಗುರುವಾರ ಬೆಳಗ್ಗಿನಿಂದಲೇ ಶ್ರೀ ಸ್ವಾಮಿಗೆ ವಿಶೇಷ ಪೂಜಾ–ಕೈಂಕರ್ಯಗಳು ಜರುಗಿದವು. 10.30ರಿಂದ 11ಗಂಟೆಯ ಒಳಗೆ ಸಲ್ಲುವ ಶುಭ ಲಗ್ನದಲ್ಲಿ ರಾಜಗೋಪುರ ನಿರ್ಮಾಣ ಕಾರ್ಯಕ್ಕೆ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ಯೋಗಾನರಸಿಂಹ ದೇವಾಲಯವನ್ನು ಮತ್ತಷ್ಟು ಅಭಿವೃದ್ಧಿಗೊಳಿಸಿ, ಭಕ್ತರಿಗೆ ಅಗತ್ಯ ಸಕಲ–ಸೌಲಭ್ಯಗಳನ್ನು ಕಲ್ಪಿಸಲು ಮುಂದಾಗಿದ್ದು, ಅಂತೆಯೇ ಇಂದು ದೇಗುಲದ ರಾಜಗೋಪುರ ನಿರ್ಮಾಣಕ್ಕೆ ಚಾಲನೆ ನೀಡಲಾಗಿದೆ. ಭಕ್ತಾದಿಗಳು ದೇವಾಲಯಕ್ಕೆ ಆಗಮಿಸಿ ದೇವರ ದರ್ಶನ ಪಡೆದು ಪುನೀತರಾಗಬೇಕೆಂದು ಆಶೀರ್ವದಿಸಿದರು. ಇದೇ ವೇಳೆ ದೇವಸ್ಥಾನಕ್ಕೆ ಆಗಮಿಸಿದ ಎಲ್ಲಾ ಭಕ್ತಾದಿಗಳಿಗೂ ಅನ್ನಸಂತರ್ಪಣೆ ಪ್ರಸಾದ ವ್ಯವಸ್ಥೆಯನ್ನು ಕಲ್ಪಿಸಲಾಗಿತ್ತು. ಈ ಸಂದರ್ಭದಲ್ಲಿ ದೇವಾಲಯದ ಆಡಳಿತಾಧಿಕಾರಿ ಎನ್.ಶ್ರೀನಿವಾಸನ್, ಪ್ರಧಾನ ಅರ್ಚಕರಾದ ಶೇಷಾದ್ರಿ ಅವರುಗಳು ಸೇರಿ ಇತರರು ಉಪಸ್ಥಿತರಿದ್ದರು.

# ವಿದ್ಯುತ್ ಚಿತಾಗಾರ ನಿರ್ಮಾಣಕ್ಕೆ ಮನವಿ

ಚಾಮರಾಜನಗರ: ಜಿಲ್ಲಾ ಕೇಂದ್ರದಲ್ಲಿ ವಿದ್ಯುತ್ ಚಿತಾಗಾರ ನಿರ್ಮಾಣ ಮಾಡುವಂತೆ ಒತ್ತಾಯಿಸಿ ವಿಜಯಕುಮಾರ್ ಜಟ್ಟಪ್ಪ ಅವರ ನೇತೃತ್ವದಲ್ಲಿ ನಗರದ ನಗರಸಭೆ ಕಚೇರಿಯಲ್ಲಿಪೌರಾಯುಕ್ತ ಪರಶುರಾಮ ಛಲವಾದಿ ಅವರಿಗೆ ಮನವಿ ಸಲ್ಲಿಸಲಾಯಿತು.

2020–21 ರಿಂದಲೂ ಸಹ ಚಾಮರಾಜನಗರದಲ್ಲಿ ಒಂದು ಸುಸಜ್ಜಿತ ವಿದ್ಯುತ್ ಚಾಲಿತ ಚಿತಾಗಾರ ನಿರ್ಮಾಣ ಮಾಡಲು ಹೋರಾಟ ಮಾಡುತ್ತಾ ಜಿಲ್ಲೆಯ ಶಾಸಕರು, ಸಂಸದರು, ಉಸ್ತುವಾರಿ ಮಂತ್ರಿಗಳು, ಮುಖ್ಯ ಮಂತ್ರಿಗಳು, ಜಿಲ್ಲಾಧಿಕಾರಿಗಳು ಎಲ್ಲರಿಗೂ ಅರ್ಜಿ ಸಲ್ಲಿಸಿ ಒತ್ತಾಯ ಮಾಡಿ ಸಂಬಂಧಿಸಿದ ಸಂಸದರು, ಉಸ್ತುವಾರಿ ಮಂತ್ರಿಗಳು, ಮುಖ್ಯ ಮಂತ್ರಿಗಳ ಕಛೇರಿಯಿಂದ ಪತ್ರವ್ಯವಹಾರ ನಡೆದು ತಮ್ಮ ಕಛೇರಿಗೆ ಕ್ರಮ ವಹಿಸುವಂತೆ ನಿರ್ದೇಶನ ನೀಡಿದ್ದು ಸರಿಯಷ್ಟೆ. 2024–25ನೇ ಸಾಲಿನ ಆಯವ್ಯಯ ಮಂಡಿಸಿದ ಅಂದಿನ ಆಡಳಿತಾಧಿಕಾರಿಗಳು ವಿದ್ಯುತ್ ಚಾಲಿತ ಚಿತಾಗಾರಕ್ಕೆ 2.50 ಕೋಟಿ ರೂ.ಗಳನ್ನು ಮೀಸಲು ಇಟ್ಟಿರುತ್ತಾರೆ. ಈವರೆವಿಗೂ ಸಹ ಕ್ರಮ ಕೈಗೊಂ ಡಿಲ್ಲ. ಆದ್ದರಿಂದ 2026–27ನೇ ಆಯವ್ಯಯದಲ್ಲಿ



ವಿದ್ಯುತ್ ಚಾಲಿತ ಚಿತಾಗಾರದ ಕಾಮಗಾರಿಯನ್ನು ಆರಂಭಿಸಿ ಕೂಡಲೇ ಚಿತಾಗಾರ ನಿರ್ಮಿಸಿ ಶವ ಸಂಸ್ಕಾರಕ್ಕೆ ಅವಕಾಶ ಮಾಡಿಕೊಡಬೇಕು ಎಂದು ಪೌರಾಯುಕ್ತರಿಗೆ ಸಲ್ಲಿಸಿರುವ ಮನವಿಯಲ್ಲಿ ವಿಜಯಕುಮಾರ್ ಒತ್ತಾಯಿಸಿದ್ದಾರೆ. ಈ ಸಂದರ್ಭದಲ್ಲಿ ಮುಖಂಡರಾದ ವೇಲುಮಣಿ, ಮಹದೇವಪ್ಪ, ರಂಗಸ್ವಾಮಿ ನಾಯಕ, ಅಮಚವಾಡಿ ಶಿವಣ್ಣ ಹಾಜರಿದ್ದರು.

# ಉದ್ಯೋಗ ಮೇಳವನ್ನು ಸದುಪಯೋಗಪಡಿಸಿಕೊಳ್ಳಿ

ಕೆ.ಆರ್.ಪೇಟೆ : "ಯುವ ಭಾರತದಲ್ಲಿ ಯುವ ಜನರ ಸಂಖ್ಯೆ ಅಧಿಕವಾಗಿದ್ದು ಅವರಿಗೆ ಸೂಕ್ತ ಸಮಯದಲ್ಲಿ ಉದ್ಯೋಗದ ಅಗತ್ಯವಿದ್ದು ನಿರುದ್ಯೋಗದಿಂದ ಅವರು ಬಳಲದಂತೆ ಇಂತಹ ಉದ್ಯೋಗ ಮೇಳಗಳನ್ನು ಸರ್ಕಾರದ ಮಟ್ಟದಲ್ಲಿ ಆಯೋಜಿಸುತ್ತಿ ರುವುದು ಅಭಿನಂದನಾರ್ಹವಾಗಿದ್ದು ಅವಕಾಶವನ್ನು ಬಳಸಿಕೊಳ್ಳಬೇಕೆಂದು ಶಾಸಕ ಹೆಚ್.ಟಿ.ಮಂಜು ತಿಳಿಸಿದರು



ಗ್ರಾಮೀಣಾಭಿವೃದ್ಧಿ ಸಚಿವಾಲಯ, ಭಾರತ ಸರ್ಕಾರ ಸಹಭಾಗಿತ್ವದಲ್ಲಿ ಜಿಲ್ಲಾ ಮಟ್ಟದ ಉದ್ಯೋಗ ಮೇಳ–2026 ಅನ್ನು ದಿನಾಂಕ–21–02–2026 ನೇ ಶನಿವಾರ ಬೆಳಿಗ್ಗೆ 9 ಗಂಟೆಯಿಂದ ಸಾಯಂಕಾಲ 5 ಗಂಟೆಯವರೆಗೆ ಕಲಾಭವನ, ಮಂಡ್ಯ ವಿಶ್ವವಿದ್ಯಾಲಯ, ಮಂಡ್ಯದಲ್ಲಿ ಆಯೋಜಿಸಲಾಗಿರುವ ಉದ್ಯೋಗ ಮೇಳಕ್ಕೆ ಅಭ್ಯರ್ಥಿಗಳ ನೋಂದಣಿ ಕಡ್ಡಾಯವಾಗಿದ್ದು ಕ್ಯೂ ಆರ್ ಕೋಡ್ ಸ್ಕ್ಯಾನ್ ಮಾಡಿಯೂ ನೋಂದಣಿ ಮಾಡಿಕೊಳ್ಳಲು ಅವಕಾಶವಿದ್ದು ಮಾಹಿತಿ ತಂತ್ರಜ್ಞಾನ , ಆರೋಗ್ಯಸೇವೆ, ಕೈಗಾರಿಕಾ ವಲಯ, ಸೇವಾವಲಯ, ಕೃಷಿ ಉದ್ಯಮ, ಇತರೆ ಕಂಪನಿಗಳಲ್ಲಿ ಉದ್ಯೋಗಕ್ಕೆ ಅವಕಾಶವಿದ್ದು ಯಾವುದೇ ಕೀಳರಿಮೆ ಇಲ್ಲದೆ ಎಸ್.ಎಸ್.ಎಲ್.ಸಿ ಗಿಂತ ಕಡಿಮೆ ವಿದ್ಯಾರ್ಹತೆಯಿಂದ ಸ್ನಾತಕೋ ತ್ತರ ಪದವಿ ವರೆಗೂ ನೋಂದಣಿ ಮೂಲಕ ಅರ್ಜಿ ಸಲ್ಲಿಸಲು ತಿಳಿಸಿದರು

ಶಾಸಕ ಸಿ. ಪುಟ್ಟರಂಗಶೆಟ್ಟಿ ಹೇಳಿಕೆ

# ಮಹಿಳೆ ಶಿಕ್ಷಣ ಪಡೆದಾಗ ಇಡೀ ಕುಟುಂಬ, ಸಮಾಜ ಅಭಿವೃದ್ಧಿ

ಚಾಮರಾಜನಗರ, –ಮಹಿಳೆ ಶಿಕ್ಷಣ ಪಡೆದರೆ ಆ ಕುಟುಂಬಕ್ಕೆ ಶಿಕ್ಷಣ ದೊರೆಯುವ ಜೊತೆಗೆ ಸಮಾಜದ ಪ್ರಗತಿ ಸಾಧ್ಯವಾಗುತ್ತದೆ. ಹೀಗಾಗಿ ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಅದ್ಯತೆ ನೀಡಬೇಕು ಎಂದು ಎಂಎಸ್ಐಎಲ್ ಅಧ್ಯಕ್ಷರು ಆದ ಶಾಸಕ ಸಿ. ಪುಟ್ಟರಂಗಶೆಟ್ಟಿ ತಿಳಿಸಿದರು.

ತಾಲೂಕಿನ ಪಣ್ಯದಹುಂಡಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸರ್ಕಾರಿ ಪ್ರಥಮ ದರ್ಜೆ ಮಹಿಳೆ ಕಾಲೇಜು ವತಿಯಿಂದ ರಾಷ್ಟ್ರೀಯ ಸೇವಾ ಯೋಜನೆ 2025–26 ವಾರ್ಷಿಕ ವಿಶೇಷ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ರಾಷ್ಟೀಯ ಸೇವಾ ಯೋಜನೆಯಡಿಯಲ್ಲಿ ಪ್ರತಿ ವರ್ಷ ಗ್ರಾಮಾಂತರ ಪ್ರದೇಶದಲ್ಲಿ ಜಾಗೃತಿ ಮೂಡಿಸುವ ಕಾರ್ಯ ನಿರಂತರವಾಗಿದೆ. ಗ್ರಾಮದ ಸ್ವಚ್ಛತೆ, ಶೌಚಾಲಯ ನಿರ್ವಹಣೆ ಮತ್ತು ವೈಯಕ್ತಿಕ ಸ್ವಚ್ಛತೆ ಮತ್ತು ಶಾಲೆಗಳಲ್ಲಿ ಉತ್ತಮ ವಾತಾವರಣವನ್ನು ನಿರ್ಮಾಣ ಕಾರ್ಯ ನಾಯಕತ್ವ ಗುಣ ರೂಡಿಸಿಕೊಳ್ಳುವುದು, ವ್ಯಕ್ತಿತ್ವ ವಿಕಸನ ಕಾರ್ಯಕ್ರಮಗಳು ಯಶಸ್ವಿಯಾಗಿ ನಡೆಯುತ್ತಿದೆ. ಇದೊಂದು ಪ್ರಮುಖ ಕಾರ್ಯಕ್ರಮವಾಗಿದ್ದು, ಪಣ್ಯದಹುಂಡಿ ಗ್ರಾಮಸ್ಥರ ಸಹಕಾರ ಹೆಚ್ಚಿನ ದ್ದಾಗಿದೆ ಎಂದರು.

ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಲಾಗುತ್ತದೆ. ಈ ಹಿಂದೆ ಮೋಟಮ್ಮ ಅವರು ಸಚಿವರಾಗಿದ್ದಾಗ ಸ್ತ್ರೀಶಕ್ತಿ ಸ್ವಸಹಾಯ ಸಂಘಗಳನ್ನು ರಚನೆ ಮಾಡಿ, ರಾಜ್ಯದ್ಯಂತ ಒಂದು ಕ್ರಾಂತಿ ಮಾಡಿದರು. ಈ ಸಂಘಗಳ ಮೂಲಕ ಓದಿದವರನ್ನು ಪ್ರತಿನಿಧಿಗಳನ್ನಾಗಿ ಮಾಡಿ, ಅವರಿಗೆ ಹಣಕಾಸು ನಿರ್ವಹಣೆ ಬಗ್ಗೆ ತರಬೇತಿ ನೀಡಲಾಯಿತು. ಇದರಿಂದ ಉತ್ತೇಜನ ಗೊಂಡು ಮಹಿಳೆಯರು ಹಾಗು ಪುರುಷರು ತಮ್ಮ ಮಕ್ಕಳ ಶಿಕ್ಷಣಕ್ಕೆ ಅದ್ಯತೆ ನೀಡಿದರು. ವಿಶೇಷವಾಗಿ ಹೆಣ್ಣು ಮಕ್ಕಡಿಳಿಗೆ ಶಿಕ್ಷಣ ಕೊಡಿಸಲು ಶ್ರಮಿಸಿದರು. ಇದರ ಪರಿಣಾಮ ಇಂದು ವಿದ್ಯಾವಂತ ಹೆಣ್ಣು ಮಕ್ಕಳ ಸಂಖ್ಯೆ ಹೆಚ್ಚಾಗುತ್ತದೆ. ಪೋಷಕರು ತಮ್ಮ ಮಕ್ಕಳು ವಿದ್ಯಾವಂತರನನ್ನಾಗಿ ಮಾಡಬೇಕೆಂಬ ಸಂಕಲ್ಪ ಹೆಚ್ಚಾಗುತ್ತದೆ ಎಂದರು.

ವಿದ್ಯಾರ್ಥಿಗಳು ಸಹ ಶಿಬಿರಾರ್ಥಿಗಳಾಗಿ ಏಳು ದಿನಗಳು ಗ್ರಾಮದಲ್ಲಿದ್ದು, ಶ್ರಮದಾನ, ಅರಿವು ಕಾರ್ಯಕ್ರಮದ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಭಾಗವಹಿಸಿ, ಗ್ರಾಮಸ್ಥರ ಮನಸ್ಸು ಗೆಲ್ಲಬೇಕು. ಜೊತೆಗೆ ಗ್ರಾಮಸ್ಥರು ಸಹ ಹೆಚ್ಚಿನ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲ ಪ್ರೊ. ಮಹದೇವಸ್ವಾಮಿ, ಬಿ.ಎಸ್., ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಎಸ್. ಪ್ರಸಾದ್, ಉಪಾಧ್ಯಕ್ಷೆ ನಂದಿನಿ, ಶಿಬಿರಾಧಿಕಾರಿ ಎಸ್.ಆರ್. ದೀಪ, ಸಹ ಶಿಬಿರಾಧಿಕಾರಿ ಡಾ. ಬಿ.ಆರ್. ಜಯಣ್ಣ, ಗ್ರಾ.ಪಂ ಮಾಜಿ ಅಧ್ಯಕ್ಷ ದೇವರಾಜು, ಶಾಲೆಯ ಮುಖ್ಯ ಶಿಕ್ಷಕ ಭರತ್‌ಭೂಷಣ, ಸಹ ಶಿಕ್ಷಕಿ ಸೂರ್ಯಪ್ರಭಾ, ಕೆ.ಎಸ್.ಮಧು, ಅನುಪ್ರಿಯ, ರವಿ, ಪುಷ್ಪ, ಸುನಂದ, ಸಿದ್ದರಾಜು, ನಟರಾಜು, ಯ. ಆರ್.ಶಿವಣ್ಣ, ಡೇರಿ ಅಧ್ಯಕ್ಷ ರವಿ, ಹೆಗ್ಗೋಠಾರ ಲೋಕೇಶ್ ಮೊದಲಾದವರು ಹಾಜರಿದ್ದರು.

# ಡೋಪ್ಲಿನ್ ಕಾಂಪ್ಲೆಕ್ಸ್ ನಾವೇ ಮಾಲೀಕರು

## ವರ್ತಕರ ಒಕ್ಕೊರಲ ಹೇಳಿಕೆ, ಗೊಂದಲ ಬಗೆಹರಿಸಲು ಆಗ್ರಹ



ಮೈಸೂರು: ಮೈಸೂರಿನ ಹೃದಯ ಭಾಗದ ಚಿಕ್ಕಗಡಿಯಾರ ವೃತ್ತ ಸಮೀಪದ ಡೋಪ್ಲಿನ್ ಕಾಂಪ್ಲೆಕ್ಸ್ ವರ್ತಕರಿಗೆ ಮೈಸೂರು ಅಭಿವೃದ್ಧಿ ಪ್ರಾಧಿಕಾರ(ಎಂಡಿಎ) ನೋಟಿಸ್ ಜಾರಿ ಮಾಡಿದ ಬೆನ್ನಲ್ಲೇ, ನಾವೆಲ್ಲ ಬಾಡಿಗೆದಾರರಲ್ಲ ಮಾಲೀಕರು ಎಂದು ವರ್ತಕರು ಒಕ್ಕೊರಲಿನ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಕಾಂಪ್ಲೆಕ್ಸ್‌ನಲ್ಲಿ ಗುರುವಾರ ತುರ್ತು ಸುದ್ದಿಗೋಷ್ಠಿ ನಡೆಸಿದ ಡೋಪ್ಲಿನ್ ಕಾಂಪ್ಲೆಕ್ಸ್ ವರ್ತಕರ ಸಂಘದ ಅಧ್ಯಕ್ಷ ಗಿರೀಶ್, ಎಂಡಿಎ ನೀಡಿರುವ ಗಡುವು ನಮಗೆ ಸಂಬಂಧಪಟ್ಟಿಲ್ಲ ಎಂದರು.

> ಅರ್ಜಿದಾರ ವಿವೇಕಾನಂದ ಅವರಿಗೂ ಇಲ್ಲಿಗೂ ಯಾವುದೇ ಸಂಬಂಧವಿಲ್ಲ. ಡ್ಯೂಪ್ಲೀನ್ ಕಾಂಪ್ಲೆಕ್ಸ್‌ನಲ್ಲಿ ಇರುವವರಲ್ಲಿ ಶೇ.75 ರಷ್ಟು ಮೂಲ ಮಾಲೀಕರು. ಇಲ್ಲಿಯವರನ್ನು ಬಾಡಿಗೆದಾರರು ಎಂದು ಬಿಂಬಿಸುತ್ತಿದ್ದಾರೆ.
> – **ಸುದೀಪ್** ಡೋಪ್ಲಿನ್ ಕಾಂಪ್ಲೆಕ್ಸ್ ವರ್ತಕ

ಹೈಕೋರ್ಟ್ ನೀಡಿರುವ ತೀರ್ಪಿನ ಪ್ರತಿಯನ್ನು ನಮ್ಮ ಕಾನೂನು ತಜ್ಞರಿಗೆ ನೀಡಿ ಪರಿಶೀಲನೆ ಮಾಡಿಸಿದ್ದೇವೆ. ಅವರಿಂದ ವಸ್ತು ಸ್ಥಿತಿಯನ್ನು ಮನದಟ್ಟು ಮಾಡಿಕೊಂಡ ನಂತರ ವರ್ತಕರ ಸಂಘದಲ್ಲಿ ಚರ್ಚೆ ಮಾಡಿದ್ದೇವೆ. ನಮ್ಮ ಕಾನೂನು ತಜ್ಞರ ಸಲಹೆಯಂತೆ ಈ ವಿಚಾರವಾಗಿ ವರ್ತಕರು ಆತಂಕಗೊಳ್ಳಬಾರದು ಎಂದು ತೀರ್ಮಾನ ಕೈಗೊಂಡಿದ್ದೇವೆ ಎಂದು ತಿಳಿಸಿದರು. ಕಾಂಪ್ಲೆಕ್ಸ್‌ನಲ್ಲಿ ವ್ಯಾಪಾರ ಮಾಡುತ್ತಿರುವ ನಮಗೆ 1980ನೇ ಇಸವಿಯಲ್ಲಿ ಈ ಸ್ಥಳ ಹಂಚಿಕೆಯಾಗಿದೆ. ಅಲ್ಲಿಂದ ಇಲ್ಲಿಯವರೆಗೂ ಎಲ್ಲರೂ ಕ್ರಯಪತ್ರ ಮಾಡಿಸಿಕೊಂಡು ಮೂಲ ಮಾಲೀಕರೇ ಆಗಿದ್ದೇವೆ. ಪ್ರತಿವರ್ಷ ಕಂದಾಯವನ್ನೂ ಕಟ್ಟಿದ್ದೇವೆ. ಹೀಗಾಗಿ ಇಲ್ಲಿ ಬಾಡಿಗೆದಾರರು ಎಂದು ಬಳಸಿರುವುದು ತಪ್ಪು ಮಾಹಿತಿ. ನಾವು ಮಾಲೀಕರೇ ಹೊರತು ಬಾಡಿಗೆದಾರರಲ್ಲ ಎಂದು ಸ್ಪಷ್ಟವಾಗಿ ಹೇಳಿದರು.

ಡೋಪ್ಲಿನ್ ಕಾಂಪ್ಲೆಕ್ಸ್ ಖಾಲಿ ಮಾಡಿಸುತ್ತಿದ್ದಾರೆ ಎಂಬ ಸುದ್ದಿ ಮಾಧ್ಯಮಗಳಲ್ಲಿ ಬಂದ ಬಳಿಕ ನಮ್ಮ ವಹಿವಾಟಿಗೆ ತೊಂದರೆಯಾಗಿದೆ. ನಮ್ಮ ಬಳಿ ವ್ಯವಹಾರ ಮಾಡಬೇಕೆಂದವರು ಒಂದು ಬಾರಿ ಯೋಚನೆ ಮಾಡುವ ಪರಿಸ್ಥಿತಿ ಉಂಟಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು. ಡೋಪ್ಲಿನ್ ಕಾಂಪ್ಲೆಕ್ಸ್‌ನಲ್ಲಿರುವ 51 ಅಂಗಡಿಗಳಲ್ಲಿ ಶೇ.70ರಷ್ಟು ವರ್ತಕರು ಅಂದಿನ ಮುಡಾಗೆ ಹಣ ಪಾವತಿಸಿ ನೋಂದಣಿ ಮಾಡಿಸಿಕೊಂಡಿದ್ದಾರೆ. ಬಹುತೇಕರ ಬಳಿ ಕ್ರಯ ಪತ್ರಗಳಿವೆ. ಹೈಕೋರ್ಟ್ ತೀರ್ಪಿಗೂ ನಿಮಗೂ ಯಾವುದೇ ಸಂಬಂಧವಿಲ್ಲ. ನೀವು ನಿಶ್ಚಿಂತೆಯಿಂದ ಇರಿ ಎಂದು ವಕೀಲರು ಸಲಹೆ ನೀಡಿದ್ದಾರೆ. ಇಲ್ಲಿ ಶಾಪಿಂಗ್ ಕಾಂಪ್ಲೆಕ್ಸ್ ಮಾಡಿದರೆ ಪಾರ್ಕಿಂಗ್ ವ್ಯವಸ್ಥೆ ಮಾಡಲು ಆಗುತ್ತದೆಯೇ? ನಮ್ಮ ಬಳಿ ಎಲ್ಲ ದಾಖಲೆಗಳೂ ಇರುವಾಗ ಹೇಗೆ ಶಾಪಿಂಗ್ ಕಾಂಪ್ಲೆಕ್ಸ್ ಮಾಡುತ್ತಾರೆ ಎಂದು ಪ್ರಶ್ನಿಸಿದರು. ಉಪಾಧ್ಯಕ್ಷ ಜಗದೀಶ್, ಖಜಾಂಚಿ ಎನ್.ಹರ್ಷ, ಕಾರ್ಯದರ್ಶಿ ಶ್ರೀನಿವಾಸನ್ ಮುಂತಾದವರಿದ್ದರು.

### ಆಯುಕ್ತರೇ ನಮ್ಮೊಂದಿಗೆ ಚರ್ಚಿಸಿ

ಮೈಸೂರು: ಎಂಡಿಎ ಆಯುಕ್ತ ಕೆ.ಆರ್.ರಕ್ಷಿತ್ ಅವರ ಹೇಳಿಕೆಯ ಬಳಿಕ ಡೋಪ್ಲಿನ್ ಕಾಂಪ್ಲೆಕ್ಸ್ ಬಗ್ಗೆ ಗೊಂದಲಗಳು ಶುರುವಾಗಿವೆ. ನಮ್ಮ ಸಂಘದ ನೇತೃತ್ವದಲ್ಲಿ ಬರುತ್ತೇವೆ, ಆಯುಕ್ತರು ನಮಗೆ ಚರ್ಚೆಗೆ ಅವಕಾಶ ಕೊಡಬೇಕೆಂದು ಎಂದು ಅಸೋಸಿಯೇಷನ್ ಅಧ್ಯಕ್ಷ ಗಿರೀಶ್ ಮನವಿ ಮಾಡಿದರು.

ಡೋಪ್ಲಿನ್ ಕಾಂಪ್ಲೆಕ್ಸ್ ಬಾಡಿಗೆದಾರರನ್ನು ಮಾರ್ಚ್ ಮೊದಲ ವಾರದಲ್ಲಿ ತೆರವು ಮಾಡಿಸುತ್ತೇವೆ ಎಂದು ಆಯುಕ್ತ ಕೆ.ಆರ್.ರಕ್ಷಿತ್ ಮಾಧ್ಯಮಗಳಿಗೆ ಹೇಳಿಕೆ ನೀಡಿದ್ದರು. ಇದರಿಂದಾಗಿ ಸಹಜವಾಗಿಯೇ ನಮ್ಮ ವರ್ತಕರು ಆತಂಕಗೊಂಡಿದ್ದರು. ಅಲ್ಲದೆ ಅಂಗಡಿ ಮಾಲೀಕರಾಗಿರುವ ನಮ್ಮನ್ನು ಹೇಗೆ ತೆರವು ಗೊಳಿಸುತ್ತಾರೆ ಎಂಬ ಗೊಂದಲವಿತ್ತು. ಈ ವಿಚಾರದ ಖಚಿತತೆ ಪಡೆಯಲು ನಿನ್ನೆ ನಮ್ಮ ಕೆಲವು ವರ್ತಕರು ಎಂಡಿಎ ಕಚೇರಿಗೆ ಹೋದಾಗ ಅಲ್ಲಿನ ಅಧಿಕಾರಿಗಳು ಯಾವುದೇ ಸ್ಪಷ್ಟನೆ ನೀಡಲಿಲ್ಲ. ಆದರೆ ಈಗ ನಮ್ಮ ಕಾನೂನು ತಜ್ಞರು ನೀಡಿರುವ ಸಲಹೆಯಿಂದ ನಾವು ನಿರಾಂತಕವಾಗಿದ್ದೇವೆ. ಎಂಡಿಎ ನೀಡಿರುವ ಗುಡುವು ನಮಗೆ ಸಂಬಂಧಪಟ್ಟಿದ್ದಲ್ಲ ಎಂಬ ತೀರ್ಮಾನಕ್ಕೆ ಬಂದಿದ್ದು, ನಾವೆಲ್ಲ ಎಂದಿನಂತೆ ವ್ಯಾಪಾರದಲ್ಲಿ ತೊಡಗಿದ್ದೇವೆ. ಒಂದು ವೇಳೆ ಎಂಡಿಎ ಅಧಿಕಾರಿಗಳು ಅವಕಾಶ ನೀಡಿದರೆ ಸ್ಪಷ್ಟನೆ ನೀಡಲು ಸಿದ್ಧರಿದ್ದೇವೆ ಎಂದು ತಿಳಿಸಿದರು.

### ಭಕ್ಷಿ ನಂಜಪ್ಪ, ಮನ್ನರ್, ಭಾವಸಾರ್ ಆಸ್ತಿ

ಮೈಸೂರು: ಡೋಪ್ಲಿನ್ ಕಾಂಪ್ಲೆಕ್ಸ್ ಭಕ್ಷಿ ನಂಜಪ್ಪ, ಮನ್ನರ?ಸ್ ಎಂಪೋರಿಯಂ, ಭಾವಸಾರ್ ಸೈಕಲ್ ಅವರಿಗೆ ಸೇರಿದ ಆಸ್ತಿ ಎಂದು ಡೋಪ್ಲಿನ್ ಕಾಂಪ್ಲೆಕ್ಸ್ ಪದಾಧಿಕಾರಿ ಸುದೀಪ್ ವಿವರಿಸಿದರು.

ಈಗಿನ ಎಂಡಿಎ ಹಿಂದೆ ಮುಡಾ, ಸಿಐಟಿಬಿ ಹೆಸರಿನಲ್ಲಿತ್ತು. ಅದಕ್ಕೂ ಮುಂಚೆಯೇ ಡೋಪ್ಲಿನ್ ಕಾಂಪ್ಲೆಕ್ಸ್ ನಿರ್ಮಾಣವಾಗಿದೆ. ದಾಖಲೆಗಳ ಪ್ರಕಾರ, ಒಂದು ಭಾಗಕ್ಕೆ ಭಕ್ಷಿ ಬಸಪ್ಪಾಜಿ ಅರಸ್ ಅನ್ನುವವರಿಗೆ ಬಾಡಿಗೆ ಕಟ್ಟುತ್ತಿದ್ದೆವು. ಇನ್ನೊಂದು ಭಾಗ ಮನ್ನರ?ಸ್ ಎಂಪೋರಿಯಂ ಅವರದ್ದು. ಮತ್ತೊಂದು ಭಾಗ ಭಾವಸಾರ್ ಸೈಕಲ್ ಅವರದ್ದು. ಸಿಐಟಿಬಿ ಅವರು ಇವರಿಂದ ಖರೀದಿ ಮಾಡಿ ಹಂಚಿಕೆ ಮಾಡುತ್ತೇವೆ ಎಂದಿದ್ದರು ಹಾಗೂ ಮಹಾರಾಜರ ಆಜ್ಞೆ ಮೇರೆಗೆ ತುಂಬಾ ಹಳಯವರಿಗೆ ಜಾಗ ನೀಡಲಾಯಿತು ಎಂದು ವಿವರಿಸಿದರು.

# ಕಾರು, ಹೊಲಿಗೆ ಯಂತ್ರಗಳ ವಿತರಣೆ



ಕೆ.ಆರ್.ಪೇಟೆ, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಸೇರಿದಂತೆ ಹಲವು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಗಳ ವತಿಯಿಂದ ಅರ್ಹ ಫಲಾನುಭವಿಗಳಿಗೆ ಉಚಿತ ಹೊಲಿಗೆ ಯಂತ್ರಗಳು ಹಾಗೂ ಸಾರಥಿ ಯೋಜನೆ ಅಡಿಯಲ್ಲಿ ನಿರುದ್ಯೋಗಿ ಯುವಕರಿಗೆ ಸಬ್ಸಿಡಿ ದರದಲ್ಲಿ ಕಾರುಗಳನ್ನು ಕ್ಷೇತ್ರದ ಶಾಸಕರಾದ ಹೆಚ್.ಟಿ.ಮಂಜು ಅವರು ವಿತರಣೆ ಮಾಡಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ 15ಮಂದಿ ನಿರುದ್ಯೋಗಿ ಯುವಕರಿಗೆ ತಲಾ 3ಲಕ್ಷ ರೂ ಸಬ್ಸಿಡಿ ರೂಪದಲ್ಲಿ ನೀಡಲಾಗುವ ಸಾರಥಿ ಯೋಜನೆ ಅಡಿಯಲ್ಲಿ ಕಾರುಗಳನ್ನು ವಿತರಣೆ ಮಾಡಿದರು. ಅಲ್ಲದೇ 20ಕ್ಕೂ ಹೆಚ್ಚು ಮಂದಿ ಮಹಿಳೆಯರಿಗೆ ಸ್ವಯಂ ಉದ್ಯೋಗ ಯೋಜನೆ ಅಡಿಯಲ್ಲಿ ಉಚಿತವಾಗಿ ಹೊಲಿಗೆ ಯಂತ್ರಗಳನ್ನು ಶಾಸಕರು ವಿತರಣೆ ಮಾಡುವ ಮೂಲಕ ಫಲಾನುಭವಿಗಳು ಸ್ವಯಂ ಉದ್ಯೋಗ ಕೈಗೊಂಡು ಆರ್ಥಿಕ ಪ್ರಗತಿಯನ್ನು ಸಾಧಿಸಬೇಕು ಎಂದು ಸಲಹೆ ನೀಡಿದರು. ಈ ಸಂದರ್ಭದಲ್ಲಿ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಬೋರೇಗೌಡ, ಅಕ್ಕಿಹೆಬ್ಬಾಳು ಹೋಬಳಿ ಜೆಡಿಎಸ್ ಅಧ್ಯಕ್ಷ ಬಸವಲಿಂಗಪ್ಪ, ಡಿಸಿಸಿ ಬ್ಯಾಂಕ್ ಮಾಜಿ ಉಪಾಧ್ಯಕ್ಷ ಅಶೋಕ್, ತಾಲ್ಲೂಕು ಯುವ ಜೆಡಿಎಸ್ ಅಧ್ಯಕ್ಷ ಮಹಾದೇವ್, ಮುಖಂಡರಾದ ಗಣೇಶ್, ಚೌಡೇನಹಳ್ಳಿ ರವಿ, ಲಕ್ಷ?ಮಣ್, ಶಾಸಕರ ಆಪ್ತ ಸಹಾಯಕ ಅರಳಕುಪ್ಪೆ ಪ್ರತಾಪ್ ಉಪಸ್ಥಿತರಿದ್ದರು.

# ಹಾಪಕಾಮ್ಸ್ ಅಧ್ಯಕ್ಷರ ಮರು ಆಯ್ಕೆ



ಮೈಸೂರು: ಮೈಸೂರು ಜಿಲ್ಲಾ ಹಾಪ್ ಕಾಮ್ಸ್ ನ ನೂತನ ಅಧ್ಯಕ್ಷರಾಗಿ ಬಿ.ಪಿ.ಬೋರೇಗೌಡ ಮರು ಆಯ್ಕೆಯಾದರು.

2013–16ರಲ್ಲಿ ಅಧ್ಯಕ್ಷರಾಗಿ ಆಯ್ಕೆಗೊಂಡಿದ್ದ ಬೋರೇಗೌಡರು ಈ ಬಾರಿ ತಮ್ಮ ಹಳೆ ತಂಡದೊಂದಿಗೆ ಸ್ಪರ್ಧಿಸಿ ಗೆದ್ದಿದ್ದರು. ಈ ಹಿನ್ನೆಲೆಯಲ್ಲಿ ತಂಡದ ಎಲ್ಲರ ಸಹಕಾರದಿಂದ ಮತ್ತೆ ಅಧ್ಯಕ್ಷರಾಗಿ ಮರು ಆಯ್ಕೆಯಾದರು. ಈ ವೇಳೆ ಮಾತನಾಡಿದ ಅವರು, ಈ ಹಿಂದೆಯೂ ಅಧ್ಯಕ್ಷನಾಗಿ ಕೆಲಸ ಮಾಡಿದ್ದೇನೆ. 6ನೇ ವೇತನ ಕೊಡಿಸುವಲ್ಲಿ ಶ್ರಮಿಸಿದ್ದೇನೆ. ನನ್ನ ಅವಧಿಯಲ್ಲಿ ಹಾಪಕಾಮ್ಸ್ ಅನ್ನು ಉನ್ನತ ಮಟ್ಟಕ್ಕೆ ಕೊಂಡೊಯ್ದು ಲಾಭಾಂಶದಲ್ಲಿರುವಂತೆ ತಂದಿದ್ದೇವು. ಈಗ ಹಾಪ್ ಕಾಮ್ಸ್ ಹೊರಗಡೆಯೂ ಆಧುನೀಕರಣವಾಗಿ ವಿಸ್ತರಣೆಯಾಗಿ ಅಭಿವೃದ್ಧಿ ಆಗಬೇಕಿದೆ. ಈಗಿರುವ ಬಲ್ಲಾಳ ವೃತ್ತ, ವಿವೇಕಾನಂದ ವೃತ್ತ ಮೊದಲಾದವುಗಳ ಕಡೆಯಲ್ಲೂ ಈಗಿನ ಸೂಪರ್ ಮಾರ್ಕೆಟ್‌ಗೆ ಪೈಪೋಟಿ ನೀಡುವಂತೆ ಬದಲಾವಣೆ ತರಲು ಎಲ್ಲರ ಸಹಕಾರ ಮುಖ್ಯ.ಈ ದಿಸೆಯಲ್ಲಿ ಮುಂದಿನ ದಿನಗಳಲ್ಲಿ ಶ್ರಮಿಸುತ್ತೇನೆಂದರು. ಮಾಜಿ ಅಧ್ಯಕ್ಷರಾದ ವೈ.ಜೆ.ಮಹೇಂದ್ರ, ಹೊಸುಂಡಿ ರಘು, ಸೂರ್ಯ ಕುಮಾರ್, ನಿರ್ದೇಶಕರಾದ ಎಚ್.ಎಸ್.ಚಂದ್ರೇಗೌಡ, ಮಾಜಿ ಉಪಾಧ್ಯಕ್ಷರಾದ ಸರ್ವೇಶ್, ನಳಿನಿ, ನಿರ್ದೇಶಕರಾದ ಪ್ರಭುಸ್ವಾಮಿ, ಎ.ಮಹದೇವು, ಶಿವಣ್ಣ,ರಾಮೇಗೌಡ, ಪದ್ಮನಾಭ, ನೇತ್ರಾವತಿ, ಸಂಜಯ್ ಇನ್ನಿತರರು ಉಪಸ್ಥಿತರಿದ್ದರು. ಮೈಸೂರು ಜಿಲ್ಲಾ ಒಕ್ಕಲಿಗರ ಸಂಘದ ಪ್ರಧಾನ ಕಾರ್ಯದರ್ಶಿ ಚೇತನ್ ಸೇರಿ ಅನೇಕರು ನೂತನ ಅಧ್ಯಕ್ಷರ ಅಭಿನಂದಿಸಿದರು.

## ಬಂಡೀಪುರ, ನಾಗರಹೊಳೆ ಸಫಾರಿ ಪುನರಾರಂಭ

# ರೈತರಿಂದ ಪ್ರತಿಭಟನೆ ಎಚ್ಚರಿಕೆ

**ಚಾಮರಾಜನಗರ:** ಹುಲಿ ದಾಳಿಯಿಂದ ಸರಣಿ ಸಾವು ಹಿನ್ನೆಲೆಯಲ್ಲಿ, ಬಂಡಿಪುರ ಹಾಗೂ ನಾಗರಹೊಳೆ ಹುಲಿ ಸುರಕ್ಷಿತ ಪ್ರದೇಶಗಳಲ್ಲಿ ನಿಷೇಧಿಸಲಾಗಿದ್ದ ಸಫಾರಿಯನ್ನು ಹಂತ – ಹಂತವಾಗಿ ಪುನಾರಂಭಿಸಲು ಸರ್ಕಾರ ನಿರ್ಧರಿಸಿದೆ ಈಗಾಗಲೇ ಜಾರಿಗೆ ಬರಲಿದ್ದು, ಮೂರು ತಿಂಗಳ ಬಳಿಕ ಮತ್ತೆ ಸಫಾರಿ ಆರಂಭವಾಗಲಿದೆ.

ಕಳೆದ ವರ್ಷ ಬಂಡಿಪುರ ಹಾಗೂ ನಾಗರಹೊಳೆಯ ಕಾಡಂಚಿನ ಪ್ರದೇಶಗಳಲ್ಲಿ ಹುಲಿಗಳ ದಾಳಿಯಿಂದಾಗಿ ಸರಣಿ ಸಾವುಗಳು ಸಂಭವಿಸಿದ್ದವು. ಮಾನವ ಹಾಗೂ ವನ್ಯಜೀವಿ ಸಂಘರ್ಷ ತಪ್ಪಿಸಲು ಕಳೆದ ವರ್ಷ ನ.7 ರಂದು ಸಫಾರಿ ಬಂದ್ ಮಾಡಲಾಗಿತ್ತು. ತಜ್ಞರು ಹಾಗೂ ಅಧಿಕಾರಿಗಳ ಒಳಗೊಂಡ ತಾಂತ್ರಿಕ ಸಮಿತಿ ರಚಿಸಲಾ ಗಿತ್ತು. ಈ ಕುರಿತು ಅಧ್ಯಯನ ನಡೆಸಿ ಮಧ್ಯಂತರ ವರದಿ ನೀಡಿದೆ. ವರದಿ ಕೂಲಂಕಷವಾಗಿ ಚರ್ಚಿಸಿ ಹಂತ–ಹಂತವಾಗಿ ಸಫಾರಿ ಆರಂಭಿಸಲು ನಿರ್ಧರಿಸಲಾಗಿದೆ ಎಂದು ಅರಣ್ಯ ಇಲಾಖೆ ಸಚಿವ ಈಶ್ವರ್ ಖಂಡ್ರೆ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ವರದಿ ಶಿಫಾರಸು ಹಾಗೂ ಸ್ಥಳೀಯರ ಬೇಡಿಕೆ ಹಾಗೂ ಪ್ರವಾಸೋದ್ಯಮ ನಿಟ್ಟಿನಲ್ಲಿ ಸಫಾರಿ ಮರು ಪ್ರಾರಂಭಿಸಲು ತೀರ್ಮಾನಿಸಲಾಗಿದೆ. ಸಫಾರಿಯನ್ನು ಬೆಳಗ್ಗೆ 8ರಿಂದ 5 ಗಂಟೆಗೆ ತಗ್ಗಿಸಲಾಗಿದೆ. ವಾಹನಗಳ ಸಂಖ್ಯೆ ಇಳಿಸಲಾಗಿದೆ. ಹೆಚ್ಚು ಸಫಾರಿಗಾಗಿ ಬಸ್‌ಗಳನ್ನು ಬಳಸುವಂತೆ ಷರತ್ತು ವಿಧಿಸಿ, ನಾಳೆಯಿಂದ ನಿಯಮಿತವಾಗಿ ಹುಲಿ ಸಫಾರಿ ಆರಂಭಿಸುವಂತೆ ಸೂಚಿಸಲಾಗಿದೆ ಎಂದರು.

ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಒಟ್ಟು ವಿಸ್ತೀರ್ಣ 1,036 ಚದರ ಕಿಲೋ ಮೀಟರ್ ಆಗಿದ್ದು, ಇದರಲ್ಲಿ ಪ್ರವಾಸೋದ್ಯಮ ವಲಯ ಕ್ಷೇತ್ರ ಶೇ.8 ಅಂದರೆ ಕೇವಲ 80 ಚದರ ಕಿ.ಮೀ ಆಗಿದೆ. ಅದೇ ರೀತಿ ನಾಗರಹೊಳೆಯ ಒಟ್ಟು ವಿಸ್ತೀರ್ಣ 844 ಚದರ ಕಿಲೋ ಮೀಟರ್ ಆಗಿದ್ದು, ಪರಿಸರ ಪ್ರವಾಸೋದ್ಯಮ ವಲಯ ಕೇವಲ 63 ಚದರ ಕಿಲೋ ಮೀಟರ್ ಅಂದರೆ ಶೇ.7.5 ಮಾತ್ರ. ಹೀಗಾಗಿ, ಹುಲಿಗಳು ಕಾಡಿನಿಂದ ನಾಡಿಗೆ ಬರುತ್ತಿರುವುದಕ್ಕೆ ಸಫಾರಿಯೇ ಕಾರಣ ಎಂದು ಹೇಳಲು ಯಾವುದೇ ವೈಜ್ಞಾನಿಕ ಆಧಾರವಿಲ್ಲ ಎಂದು ತಾಂತ್ರಿಕ ಸಮಿತಿ ಅಭಿಪ್ರಾಯಪಟ್ಟಿದೆ. ಸಫಾರಿ ನಿಷೇಧ ಬಳಿಕ ಮುಂಜಾಗ್ರತಾ ಕ್ರಮವಾಗಿ ಕೈಗೊಂಡಿರುವ ಕ್ರಮ ಆಧರಿಸಿ ಹಂತ–ಹಂತವಾಗಿ ಸಫಾರಿ ಆರಂಭಿಸಬಹುದು ಎಂದು ಇಲಾಖೆಯ ಹಿರಿಯ ಅಧಿಕಾರಿಗಳ ಹೇಳಿದ್ದರು. ಈ ಎಲ್ಲಾ ಅಂಶಗಳನ್ನ ಆಧರಿಸಿ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಸಚಿವರು ಸಮರ್ಥಿಸಿಕೊಂಡರು.




### ಸಫಾರಿ ವಾಹನಗಳಿಗೆ ಜಿಪಿಎಸ್, ಡ್ಯಾಷ್ ಕ್ಯಾಮೆರಾ ಅಳವಡಿಕೆ

ಪ್ರಸ್ತುತ ಪರಿಸರ ಪ್ರವಾಸೋದ್ಯಮ ಅಂದರೆ ಸಫಾರಿಯಿಂದ ಬರುವ ಒಟ್ಟು ಆದಾಯದ ಮೂರನೇ ಒಂದು ಭಾಗದಷ್ಟು ಹಣವನ್ನು ಅರಣ್ಯದಂಚಿನ ಗ್ರಾಮ ಗಳ ಸ್ಥಳೀಯ ಸಮುದಾಯದವರಿಗೆ ಕೌಶಲ್ಯ ಅಭಿವೃದ್ಧಿ ಗಾಗಿ, ಜಾನುವಾರುಗಳಿಗೆ ಮೇವು ಬೆಳೆಸಲು ಮತ್ತು ಪರಿಸರ ಅಭಿವೃದ್ಧಿ ಕಾಮಗಾರಿಗಳಿಗೆ ಬಳಸುವ ಷರತ್ತಿ ನೊಂದಿಗೆ ಆರಂಭಿಸಲು ಮತ್ತು ವನ್ಯಜೀವಿ–ಮಾನವ ಸಂಘರ್ಷ ತಡೆಯಲು ಸೂಕ್ತ ಸಿಬ್ಬಂದಿಯನ್ನು ಸೂಕ್ಷ್ಮ ಪ್ರದೇಶಗಳಲ್ಲಿ ನಿಯೋಜಿಸುವ ಷರತ್ತಿನೊಂದಿಗೆ ಆರಂಭಿ ಸಲು ಸಮ್ಮತಿಸಲಾಗಿದೆ ಎಂದೂ ಖಂಡ್ರೆ ತಿಳಿಸಿದರು. ಜೊತೆಗೆ, ಸಫಾರಿ ವಾಹನಗಳನ್ನು ಕತ್ತಲಾದ ಬಳಿಕ ಓಡಿಸುವುದು, ಹೆಚ್ಚುವರಿ ಅವಧಿಗೆ ಓಡಿಸುವುದೇ ಮೊದ ಲಾದ ದುರ್ಬಳಕೆ ತಡೆಗಟ್ಟಲು ಕಡ್ಡಾಯವಾಗಿ ಮುಂದಿನ 2 ತಿಂಗಳೊಳಗಾಗಿ ಎಲ್ಲ ಸಫಾರಿ ವಾಹನಗಳಿಗೆ ಎಂಜಿನ್ ಸಂಪರ್ಕಿತ ಜಿಪಿಎಸ್ ಮತ್ತು ಡ್ಯಾಷ್ ಕ್ಯಾಮೆರಾ ಅಳವಡಿ ಸಬೇಕು ಎಂದೂ ಸೂಚಿಸಲಾಗಿದೆ ಎಂದು ಹೇಳಿದರು. ಸಫಾರಿ ನಿಷೇಧದ ಅವಧಿಯಲ್ಲಿ ಕಾಡಂಚಿನಲ್ಲಿದ್ದ 28 ಹುಲಿಗಳನ್ನು ಸೆರೆಹಿಡಿದು ಅರಣ್ಯಕ್ಕೆ ಬಿಡಲಾಗಿದೆ. ಕಾಡಿನಾಚೆಗೆ ಬರದಂತೆ ಹಾಗೂ ರೈತರ ಜಮೀನುಗಳಿಗೆ ಬಂದರೆ ಸೂಕ್ತ ನಿಗಾವಹಿಸಲು ಬಂಡಿಪುರ ಹಾಗೂ ನಾಗರಹೊಳೆಯಲ್ಲಿ 9 ಡ್ರೋನ್ ಕ್ಯಾಮೆರಾಗಳ ನಿರಂತರ ಕಾರ್ಯಾಚರಣೆ ನಡೆಸಲಾಗುತ್ತಿದೆ. ಹೆಚ್ಚು ವನ್ಯಜೀವಿಗಳಿರುವ ಜಿಲ್ಲಾ ವ್ಯಾಪ್ತಿಯಲ್ಲಿ ಕಮಾಂಡ್ ಸೆಂಟರ್ ತೆರೆಯಲಾಗಿದೆ. ವನ್ಯಜೀವಿಗಳು ನಾಡಿಗೆ ಬಂದರೆ ಕೂಡಲೇ ಸಂಬಂಧಿಸಿದ ಅಧಿಕಾರಿ ಹಾಗೂ ಸಿಬ್ಬಂದಿಗೆ ಮಾಹಿತಿ ನೀಡಿ ಕ್ಷಿಪ್ರ ಕಾರ್ಯಾಚರಣೆ

### ರೈತ ಮುಖಂಡರಿಂದ ತೀವ್ರ ಅಸಮಾಧಾನ

ಬಂಡೀಪುರ ಸಫಾರಿ ಪುನಾರಂಭಕ್ಕೆ ರೈತ ಮುಖಂಡರು ತೀವ್ರ ಅಸಮಾಧಾನ ಹೊರ ಹಾಕಿದ್ದಾರೆ. ಸಾಮೂಹಿಕ ನಾಯಕತ್ವದ ರೈತ ಸಂಘದ ಜಿಲ್ಲಾಧ್ಯಕ್ಷ ಹೊನ್ನೂರು ಪ್ರಕಾಶ್ ಮಾತನಾಡಿ, ರೆಸಾರ್ಟ್‌ಗಳ ಒತ್ತಡಕ್ಕೆ ಮಣಿದು ಸಫಾರಿ ಪುನರಾರಂಭ ಮಾಡುತ್ತಿದ್ದಾರೆ. ರೈತರ ಜೀವ ಹಾನಿ, ವನ್ಯಜೀವಿಗಳಿಗೆ ತೊಂದರೆ ಉಂಟಾಗುವ ಸಫಾರಿಯನ್ನು ಮತ್ತೇ ಆರಂಭಿಸುತ್ತಿರುವುದು ಸರಿಯಲ್ಲ ಎಂದಿದ್ದಾರೆ. ಸಫಾರಿ ಪುನಾರಂಭಗೊಳ್ಳಲು ರೈತರು ಬಿಡುವುದಿಲ್ಲ. ಬಂಡೀಪುರ ಸಫಾರಿ ಕೇಂದ್ರಕ್ಕೆ ಗುರುವಾರದಂದೇ ಮುತ್ತಿಗೆ ಹಾಕುತ್ತೇವೆ. ಸಚಿವರು ಚಾಮರಾಜನಗರ ಹಾಗೂ ಮೈಸೂರಿಗೆ ಬಂದರೆ ಘೇರಾವ್ ಹಾಕುತ್ತೇವೆ ಎಂದು ಎಚ್ಚರಿಸಿದ್ದಾರೆ. ಇರುವ ಹುಲಿಗಳಿಗೇ ಅರಣ್ಯ ಪ್ರದೇಶ ಸಾಲುತ್ತಿಲ್ಲ ಈಗ ಸಫಾರಿಯಿಂದಲೂ ಕಾಡಿಗೆ ನೂರಾರು ಮಂದಿ ಹೋದರೇ ವನ್ಯಜೀವಿ–ಮಾನವ ಸಂಘರ್ಷ ಹೆಚ್ಚಾಗಲಿದೆ ಎಂದು ಕಿಡಿಕಾರಿದ್ದಾರೆ.

# ಚಿಲ್ಲರೆ ಅಂಗಡಿಯಲ್ಲಿ ಕಳ್ಳತನ

ಎಚ್.ಡಿ.ಕೋಟೆ: ಬೋಗೇಶ್ವರ ಕಾಲೋನಿ ಗ್ರಾಮದ ಮೂರ್ತಿ ಎಂಬುವರಿಗೆ ಸೇರಿದ ಚಿಲ್ಲರೆ ಅಂಗಡಿಗೆ ನುಗ್ಗಿರುವ ಕಳ್ಳರು ಅಂದಾಜು 20 ಸಾವಿರ ನಗದು ಸೇರಿದಂತೆ ಕೆಲ ಪದಾರ್ಥಗಳನ್ನು ದೋಚಿ ಪರಾರಿಯಾಗಿದ್ದಾರೆ.



ಆರೋಗ್ಯ ಸಮಸ್ಯೆಯಿಂದ ಬಳಲುತ್ತಿದ್ದ ಮೂರ್ತಿ ಜೀವನೋಪಾಯಕ್ಕಾಗಿ ಕೆಲ ವರ್ಷಗಳಿಂದ ಗ್ರಾಮದಲ್ಲಿ ಚಿಲ್ಲರಾ ಅಂಗಡಿ ತೆರೆದು ಬದುಕು ಸಾಗಿಸುತ್ತಿದ್ದರು. ಅಂಗಡಿಯಲ್ಲಿ 50–1 ಲಕ್ಷ ರೂ, ಪದಾರ್ಥಗಳನ್ನು ಇಡಲಾಗಿತ್ತು. ಗುರುವಾರ ಮುಂಜಾನೆ 4:30ರಲ್ಲಿ ಕಬ್ಬಿಣದ ಸಲಾಕೆಯಿಂದ ಅಂಗಡಿ ಬೀಗ ಒಡೆದ ಕಳ್ಳರು, ಡ್ರಾಯರ್ ತೆಗೆದು ಹಣ ಎಗರಿಸಿ, ಸಾಮಾಗ್ರಿಗಳನ್ನೆಲ್ಲ ಚೆಲ್ಲಾಪಿಲ್ಲಿಯಾಗಿ ಹರಡಿದ್ದಾರೆ. ಎಂದಿನಂತೆ ಬೆ.6ರಲ್ಲಿ ಅಂಗಡಿ ತೆರೆಯಲು ಮಾಲೀಕ ಮೂರ್ತಿ ಬಂದ ನಂತರ ಘಟನೆ ಬೆಳಕಿಗೆ ಬಂದಿದೆ. ವಿಷಯ ತಿಳಿಯುತ್ತಿದ್ದಂತೆ ಗ್ರಾಮಸ್ಥರೆಲ್ಲ ಆಗಮಿಸಿ ಪರಿಶೀಲಿಸಿದ ನಂತರ ಎಚ್.ಡಿ.ಕೋಟೆ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಸ್ಥಳಕ್ಕಾಗಮಿಸಿದ ಪೊಲೀಸರು ಸ್ಥಳ ಮಹಜರು ನಡೆಸಿದ್ದು, ತನಿಖೆ ಕೈಗೊಂಡಿದ್ದಾರೆ.

# ಬಿಸಲವಾಡಿ ರವಿಗೆ ಗ್ರಾಮಸ್ಥರಿಂದ ಅಭಿನಂದನೆ

ಚಾಮರಾಜನಗರ, ಚಾಮರಾಜನಗರ ಗ್ರಾಮಾಂತರ ಕಾಂಗ್ರೆಸ್ ಪ್ರಚಾರ ಸಮಿತಿಯ ಅಧ್ಯಕ್ಷರಾಗಿ ಆಯ್ಕೆಯಾದ ಪಿಎಲ್‌ಡಿ ನಿರ್ದೇಶಕ ಬಿಸಲವಾಡಿ ರವಿ ಅವರನ್ನು ಬಿಸಲವಾಡಿ ಗ್ರಾಮಸ್ಥರು ಸನ್ಮಾನಿಸಿದರು.

ಗ್ರಾಮದಲ್ಲಿ ನಡೆದ ಸರಳ ಕಾರ್ಯಕ್ರಮದಲ್ಲಿ ನೂತನ ಅಧ್ಯಕ್ಷ ಬಿಸಲವಾಡಿ ರವಿ ಅವರನ್ನು ಶಾಲು ಹೊದಿಸಿ, ಹಾರ ಹಾಕಿ ನೆನಪಿನ ಕಾಣ ಕೆ ನೀಡಿ ಅಭಿನಂದಿಸಿ ಮಾತನಾಡಿದ ಮುಖಂಡರು, ಯುವಕರಾದ ರವಿ ಅವರ ಸಂಘಟನೆ ಮತ್ತು ಕಾಂಗ್ರೆಸ್ ಪಕ್ಷದ ತತ್ವ ನಿಷ್ಠೆಯನ್ನು ಪರಿಗಣ ಸಿ, ಕ್ಷೇತ್ರದ ಶಾಸಕರಾದ ಸಿ.ಪುಟ್ಟರಂಗಶೆಟ್ಟರ ಸೂಚನೆ ಮೇರೆಗೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಸ್ಥಾನವನ್ನು ನೀಡಿದ್ದಾರೆ. ಇದು ಬಿಸಲವಾಡಿ ಗ್ರಾಮಸ್ಥರು ಹಾಗು ಮುಖಂಡರಿಗೆ ಹೆಚ್ಚಿನ ಸಂತಸ ಎಂದಿದೆ.

ಪಕ್ಷ ಹಾಗೂ ನಾಯಕರು ನೀಡಿರುವ ಜವಾಬ್ದಾರಿಯನ್ನು ಸಮರ್ಪಕವಾಗಿ ನಿರ್ವಹಣೆ ಮಾಡುವ ಜೊತೆಗೆ ನಾಯಕತ್ವ ಗುಣವನ್ನು ಬೆಳೆಸಿಕೊಂಡು ಗ್ರಾಮಕ್ಕೆ ಇನ್ನು ಹೆಚ್ಚಿನ ಕೀರ್ತಿಯನ್ನು ತರಬೇಕು ಎಂದು ಮುಖಂಡರು ಶುಭ ಕೋರಿದರು.

ಸನ್ಮಾಸ ಸ್ವೀಕರಿಸಿ ಮಾತನಾಡಿದ ಪ್ರಚಾರ ಸಮಿತಿಯ ಅಧ್ಯಕ್ಷ ಬಿಸಲವಾಡಿ ರವಿ, ಗ್ರಾಮಸ್ಥರು ನನ್ನ ಮೇಲೆ ಇಷ್ಟೊಂದು ಪ್ರೀತಿ ಅಭಿಮಾನವನ್ನಿಟ್ಟು ಸನ್ಮಾನಿಸಿರುವುದು ನನ್ನ ಜವಾಬ್ದಾರಿ ಇನ್ನು ಹೆಚ್ಚಿದೆ. ನಿಮ್ಮ ಪ್ರೀತಿ, ವಿಶ್ವಾಸ ಸದಾಕಾಲ ಇರಲಿ ಎಂದು ಅಶಿಸಿಸುತ್ತಾ, ಕಾಂಗ್ರೆಸ್ ಪಕ್ಷ ಹಾಗೂ ನಮ್ಮ ನಾಯಕರು ನೀಡಿರುವ ಜವಾಬ್ದಾರಿಯನ್ನು ಪ್ರಾಮಾಣ ಕವಾಗಿ ನಿರ್ವಹಿಸುವ ಮೂಲಕ ಪಕ್ಷವನ್ನು ಇನ್ನು ಹೆಚ್ಚಿನ ರೀತಿಯಲ್ಲಿ ಬಲಿಷ್ಠಗೊಳಿಸುವುದಾಗಿ ತಿಳಿಸಿದರು.



ಈ ಸಂದರ್ಭದಲ್ಲಿ, ಮುಖಂಡರಾದ ಗ್ರಾ.ಪಂ. ಮಾಜಿ ಅಧ್ಯಕ್ಷರಾದ ಸಿ. ಮಹದೇವಪ್ಪ, ಮಾಜಿ ಸದಸ್ಯ, ನಾರಾಯಣ ನಾಯಕ, ನಾಗರಾಜು, ಚನ್ನಬಸಪ್ಪ, ಪರಶಿವ, ಕೃಷಿ ಪತ್ತಿನ ಸಹಕಾರ ಸಂಘ ಅಧ್ಯಕ್ಷ ಶಿವಸ್ವಾಮಿ, ಮಾಜಿ ಅಧ್ಯಕ್ಷರಾದ ಮಂಜುನಾಥ್, ಸಿದ್ದನಾಯಕ, ಮಹದೇವಯ್ಯ, ನಿರ್ದೇಶಕರಾದ ಎಸ್. ಉಮೇಶ್, ಸಿದ್ದಶೆಟ್ಟಿ, ಬಸವನಾಯಕ, ಡೇರಿ ಮಾಜಿ ಅಧ್ಯಕ್ಷ ಬಿ.ಎಂ. ಬಸವರಾಜು, ಮುಖಂಡರಾದ ಉಡಿಗಾಲ ನಂಜಪ್ಪ, ಹೋಟೆಲ್ ನಟರಾಜು, ಮಲ್ಲಿಕಾರ್ಜುನಪ್ಪ, ಬಸವಣ್ಣ, ಯ. ಸಿದ್ದನಾಯಕ, ಮಹದೇವೇಗೌಡ, ರಾಜು, ರಂಗಶೆಟ್ಟಿ, ವೆಂಕಟಯ್ಯ, ಕಾಳಯ್ಯ, ಸಿದ್ದಯ್ಯ, ನಾಗನಾಯಕ, ಕುಮಾರ್, ಲೋಕೇಶ್ ಮೊದಲಾದವರು ಇದ್ದರು.

# ಆರ್ಥಿಕ ಸ್ವಾವಲಂಬನೆಗೆ ಕೋಳಿ ಸಾಕಾಣೆ ಮಾಡಿ

ರಾಮನಗರ: ರೈತರು ಕೃಷಿ ಮತ್ತು ಹೈನುಗಾರಿಕೆ ಜೊತೆಗೆ ಲಾಭದಾಯಕವಾಗಿರುವ ಕೋಳಿ ಸಾಕಾಣಿಕೆಯನ್ನು ಮಾಡಿ ಆರ್ಥಿಕವಾಗಿ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಿ ಎಂದು ಕರ್ನಾಟಕ ಪಶುವೈದ್ಯಕೀಯ ಪರಿಷತ್ತಿನ ಅಧ್ಯಕ್ಷರಾದ ಡಾ.ಇಂದ್ರೇಶ್ ಕರೆ ನೀಡಿದರು.

ತಾಲ್ಲೂಕಿನ ಕೈಲಂಚಾ ಹೋಬಳಿ ಮಂಚೇಗೌಡನಪಾಳ್ಯ ಗ್ರಾಮದಲ್ಲಿ ಕರ್ನಾಟಕ ಪಶು ವೈದ್ಯಕೀಯ ಪಶು ಮತ್ತು ಮೀನುಗಾರಿಕೆ ವಿಜ್ಞಾನಿಗಳ ವಿಶ್ವವಿದ್ಯಾಲಯ, ಬೀದರ್, ಅಖಿಲ ಭಾರತ ಸಂಯೋಜಿತ ಸಂಶೋಧನಾ ಯೋಜನೆ–ಕೋಳಿ ಮಾಂಸ ಕುಕ್ಕುಟ ವಿಭಾಗ ಹಾಗೂ ಪಶು ವೈದ್ಯಕೀಯ ಕಾಲೇಜು ಹೆಬ್ಬಾಳ ವತಿಯಿಂದ ನಡೆದ ಒಂದು ದಿನದ ಕೋಳಿ ಸಾಕಾಣಿಕೆ ತರಬೇತಿ ಮತ್ತು ಕೋಳಿ ವಿತರಣಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಕೋಳಿ ಸಾಕಾಣಿಕೆಯ ಪಶು ಸಂಗೋಪನೆಯ ಒಂದು ವಿಧಾನವಾಗಿದೆ. ಕೋಳಿ ಸಾಕಾಣಿಕೆ ಸಮಯದಲ್ಲಿ ಆಹಾರ ಪೂರೈಕೆ ಮತ್ತು ಆರೈಕೆ ವ್ಯವಸ್ಥೆ ಮಾಡಿ ಹೆಚ್ಚಿನ ಸ್ಥಳಾವಕಾಶ ಕಲ್ಪಿಸಬೇಕು. ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ಸಹ ನೀಡಿ ಪೋಷಣೆ ಮಾಡಬೇಕು. ಇದು ಮೊಟ್ಟೆ ಮತ್ತು ಮಾಂಸದ ಉತ್ಪಾದನೆಗಾಗಿ ನಡೆಸುವ ಲಾಭದಾಯಕ ವ್ಯವಹಾರವಾಗಿದೆ, ಮಾರುಕಟ್ಟೆಯ ಬೇಡಿಕೆಯನ್ನು ಅರ್ಥಮಾಡಿಕೊಂಡು ನಿರ್ವಹಣೆ ಮಾಡಿ ಎಂದು ಸಲಹೆ ನೀಡಿದರು.



ಎಎಸ್‌ಆರ್‌ಪಿಯ ವಿಜ್ಞಾನಿ ಡಾ.ನವೀನ್ ಮಾತನಾಡಿ ಪ್ರತಿವರ್ಷ ಎಸ್ಸಿಪಿ / ಟಿಎಸ್ಪಿ ಯೋಜನೆಯಡಿ ಕೋಳಿ ಮರಿಗಳನ್ನು ವಿತರಣೆ ಮಾಡುತ್ತಿದ್ದು, ರೈತರು ಸಣ್ಣ ಪ್ರಮಾಣದಿಂದ ಕೋಳಿ ಸಾಕಾಣಿಕೆ ಆರಂಭಿಸಿ ದೊಡ್ಡ ಮಟ್ಟದಲ್ಲಿ ಕುಕ್ಕುಟ ಉದ್ಯಮವನ್ನು ಮಾಡಿಕೊಳ್ಳಿ, ಇಂದು ಇದು ಲಾಭದಾಯಕ ವಾಗಿ ರೈತರ ಜೀವನ ಮಟ್ಟವನ್ನು ಆರ್ಥಿಕವಾಗಿ ಸುಧಾರಿಸಿ ವೃದ್ದಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ನೆರೆದಿದ್ದ ರೈತರಿಗೆ ಮಾಹಿತಿ ನೀಡಿದರು. ಈ ವೇಳೆ ಮಂಚೇಗೌಡನಪಾಳ್ಯ ವಿಎಸ್‌ಎಸ್‌ಎನ್ ಅಧ್ಯಕ್ಷ ವಿನೋದ್, ಎಂಪಿಸಿಎಸ್ ಕಾರ್ಯದರ್ಶಿ ರಾಮಕೃಷ್ಣ ಸೇರಿದಂತೆ ರೈತರು, ರೈತ ಮಹಿಳೆಯರು ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಅಪರ ಜಿಲ್ಲಾಧಿಕಾರಿ ಜವರೇಗೌಡ ಅಭಿಮತ

# ಸ್ವಾಭಿಮಾನಿ ರಾಷ್ಟ್ರಕ್ಕಾಗಿ ಹೋರಾಡಿದ ಛತ್ರಪತಿ

ಚಾಮರಾಜನಗರ ಫೆಬ್ರ. ಸ್ವಾಭಿಮಾನಿ ರಾಷ್ಟ್ರ ನಿರ್ಮಾಣಕ್ಕೆ ಹೋರಾಡಿದ ಛತ್ರಪತಿ ಶಿವಾಜಿ ಮಹಾರಾಜರು. ಕೊಂಕಣ ಭಾಗದಲ್ಲಿದ್ದ ಅನೇಕ ಕೋಟೆಗಳನ್ನು ಗೆದ್ದು ಪಶ್ಚಿಮ ಭಾರತವನ್ನು ತಮ್ಮ ಆಳ್ವಿಕೆಗೆ ತಂದರು. ಶಿವಾಜಿ ಅವರ ಶೌರ್ಯ, ಸಾಹಸ ರಾಷ್ಟ್ರಭಕ್ತ ಆಡಳಿತಗಾರರಿಗೆ ಎಂದಿಗೂ ಸ್ಫೂರ್ತಿಯಾಗಿದ್ದಾರೆ ಎಂದು ಹೇಳಿದರು.

ಚಾಮರಾಜನಗರ ಜಿಲ್ಲಾಢಳಿತ ಹಾಗೂಜಿಲ್ಲಾ ಪಂಚಾಯಿತ್, ಜಿಲ್ಲಾ ಕನ್ನಡ ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಡಾ.ರಾಜಕುಮಾರ್ ಜಿಲ್ಲಾ ರಂಗ ಮಂದಿರದಲ್ಲಿ ಛತ್ರಪತಿ ಶಿವಾಜಿ ಜಯಂತಿ ಆಚರಣೆಯ ಕಾರ್ಯಕ್ರಮದಲ್ಲಿ ಜೋತಿ ಬೆಳಗಿಸಿ, ಹಾಗೂ ಶಿವಾಜಿ ಭವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು.

ಶಿವಾಜಿ ಮಹಾರಾಜರು ತಾಯಿಯ ಮಾರ್ಗದರ್ಶನದಲ್ಲಿ ಬೆಳೆದವರು. ಶಿವಾಜಿ ಮಹಾರಾಜರ ಹೆಸರು ದೇಶದ ಮೂಲೆ ಮೂಲೆಗಳಲ್ಲಿ ಕೇಳಿಬರುತ್ತದೆ ಅವರ ಮಾರ್ಗದರ್ಶದಲ್ಲಿ ಪ್ರತಿಯೊಬ್ಬು ನಡೆದರೆ ಉತ್ತಮ ವ್ಯಕ್ತಿಯಾಗಲು ಸಾಧ್ಯ ಎಂದು ಹೇಳಿದರು.

ನಗರರಾಭಿವೃದ್ಧಿ ಪ್ರಧಾಕಾರದ ಅಧ್ಯಕ್ಷ ಮಹಮ್ಮದ್ ಅಸ್ಗರ್ಮುನ್ನ ಅವರು ಮಾತನಾಡಿ ಶಿವಾಜಿಯು ಬಾಲ್ಯದಿಂದಲೇ ಧೈರ್ಯ ಶಾಲಿಯಾಗಿದ್ದರು. ಅವರು ಬ್ರಿಟಿಷರ ಜೊತೆ ಹೊರಾಡಿದವರು ಎಂದು ಹೇಳಿದರು.



ಮರಾಠ ಸಮಾಜದ ಜಿಲ್ಲಾಧ್ಯಕ್ಷ ವೆಂಕಟರಾವ್ ಸಾಠೆ ಅವರು ಮಾತನಾಡಿ ಪ್ರತಿಯೊಬ್ಬರಿಗೂ ಶಿವಾಜಿ ಮಹಾರಾಜರು ಮಾದರಿಯಾಗಿದ್ದಾರೆ. ಛತ್ರಪತಿ ಶಿವಾಜಿ ಜಯಂತಿಯನ್ನು ದೇಶದ ಎಲ್ಲಾ ಕಡೆಯಲ್ಲು ಆಚರಿಸುತ್ತಾರೆ. ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಶಿಕ್ಷಣದಲ್ಲಿ ಶಿವಾಜಿ ಮಹಾರಾಜರ ಚರಿತ್ರೆಯನ್ನು ತಿಳಿಸುವಂತಾಗಬೇಕು ಎಂದರು. ಕನ್ನಡ ಸಂಸ್ಕೃತಿಇಲಾಖೆ ಸಹಾಯಕ ನಿರ್ದೇಶಕರಾದ ಬಿ.ಎಸ್ ರಾಜು, ಚಾಮರಾಜನಗರ ಪೋಲೀಸ್ ವೃತ್ತ ನಿರಿಕ್ಷಕರಾದ ಜಗದೀಶ್, ಮರಾಠ ಸಮಾಜದ ಮುಖಂಡರಾದ ಚಂದ್ರರಾವ್, ಶ್ರೀನಿವಾಸ್, ಮಮತಾಬಾಯಿ, ಲೋಕೇಶ್‌ರಾವ್, ಬಾಬುರಾವ್, ಅಭಿರಾವ್, ಶಿವಕುಮಾರ್, ಅನಿತಾಬಾಯಿ, ಎಲ್. ಸುರೇಶ್ ಹಾಗೂ ಇನ್ನು ಮುಂತಾದವರು ಇದ್ದರು.

## ಸಂಕ್ಷಿಪ್ತ ಸುದ್ದಿ

### ಕೊಲೆ ಆರೋಪಿತರಿಗೆ ಜೀವಾವಧಿ ಶಿಕ್ಷೆ



**ಮೈಸೂರು:** ಮೈಸೂರು ನಗರದ ಇಲವಾಲ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬರುವ ಆನಂದೂರು ಗ್ರಾಮದ ಪುನೀತ ಚಿತ್ರ (23) ಬಿನ್ ಪುಟ್ಟಾಚಾರಿ ಮತ್ತು ಪವನ್ ನಾರಾಯಣ (24) ಬಿನ್ ರಾಮೇಗೌಡ ಎಂಬ ಇಬ್ಬರು ವ್ಯಕ್ತಿಗಳು ಅದೇ ಊರಿನ ಮಂಜು ಮಂಜುನಾಥ ಬಿನ್ ಲೇಟ್ ಮರಿಗೌಡ ಎಂಬ ವ್ಯಕ್ತಿಯ ಮೇಲೆ ಮಾರಣಾಂತಿಕವಾಗಿ ಹಲ್ಲೆ ಮಾಡಿದ್ದು, ಪ್ರಕರಣ ದಾಖಲಾಗಿ ತನಿಖೆ ಪೂರೈಸಿ ತನಿಖಾಧಿಕಾರಿಯಾದ ಅಬ್ದುಲ್ ಕರೀಂ ರಾವ್ತರ್, ವೃತ್ತ ನಿರೀಕ್ಷಕರು ದೋಷಾರೋಪಣಾ ಪತ್ರ ಸಲ್ಲಿಸಿದ್ದರು. ನ್ಯಾಯಾಲಯದ ಪೊಲೀಸ್ ಪೇದೆ ರಮೇಶ್ ಅವರು ಸಾಕ್ಷಿಗಳನ್ನು ಹಾಜರುಪಡಿಸುವಲ್ಲಿ ಸಹಕರಿಸಿರುತ್ತಾರೆ.
ಪುನೀತ ಚಿತ್ರ ಮತ್ತು ಪವನ್ ನಾರಾಯಣ ಇವರು ಮಂಜು ಮಂಜುನಾಥನ ಮೇಲಿನ ಹಳೇ ದ್ವೇಷದಿಂದ ದಿ.07–07–2017 ರಂದು ಆನಂದೂರು ಗ್ರಾಮದ ಬೆಟ್ಟೇಗೌಡ ಎಂಬುವವರ ಅಂಗಡಿ ಮುಂಭಾಗ ಅವಾಚ್ಯ ಶಬ್ದಗಳಿಂದ ಬೈದು, ಮಚ್ಚಿನಿಂದ ಮಾರಣಾಂತಿಕವಾಗಿ ಹಲ್ಲೆ ಮಾಡಿದ್ದು, ದಿ.13–07–2017 ರಂದು ಬೃಂದಾವನ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿರುತ್ತಾರೆ.
ಈ ಪ್ರಕರಣದಲ್ಲಿ ಮೈಸೂರಿನ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ ವಿಚಾರಣೆಗೊಳಪಟ್ಟು ನ್ಯಾಯಾಧೀಶರಾದ ಉಷಾರಾಣಿ ರವರು ಅಭಿಯೋಜನೆ ಪರ ಹಾಜರುಪಡಿಸಿದ ಸಾಕ್ಷ್ಯಾಧಾರಗಳನ್ನು ಪರಿಗಣಿಸಿ ಆರೋಪಿತರ ಮೇಲಿನ ಆರೋಪ ರುಜುವಾತಾಗಿದೆ ಎಂದು ಅಭಿಪ್ರಾಯ ಪಟ್ಟು ಆರೋಪಿತರಿಗೆ ಕಲಂ 302 ಐಪಿಸಿ ಅಡಿಯ ಅಪರಾಧಕ್ಕೆ ಜೀವಾವಧಿ ಶಿಕ್ಷೆ ಮತ್ತು ತಲಾ 1 ಲಕ್ಷ ರೂಪಾಯಿ ದಂಡ ವಿಧಿಸಿ ತೀರ್ಪು ನೀಡಿರುತ್ತದೆ. ದಂಡ ಪಾವತಿಸಲು ತಪ್ಪಿದಲ್ಲಿ ಮತ್ತೆ ಒಂದು ವರ್ಷ ಸಾದಾ ಶಿಕ್ಷೆ ವಿಧಿಸಿರುತ್ತದೆ. ಕಲಂ 504 ಐಪಿಸಿ ಅಡಿಯಲ್ಲಿನ ಅಪರಾಧಕ್ಕೆ ಒಂದು ವರ್ಷ ಶಿಕ್ಷೆ ವಿಧಿಸಿ ತೀರ್ಪು ನೀಡಿರುತ್ತದೆ.
ಸದರಿ ಪ್ರಕರಣದಲ್ಲಿ ಸರ್ಕಾರಿ ಅಭಿಯೋಜಕರಾದ ಎಂ.ಎನ್.ರಂಜನಾರಾವ್ ಅವರು ಸರ್ಕಾರದ ಪರ ವಾದ ಮಂಡಿಸಿರುತ್ತಾರೆ.

### ಜಲ ಸಾಹಸ, ಭೂ ಸಾಹಸ ಕ್ರೀಡಾ ತರಬೇತಿ

**ಮೈಸೂರು:** ಇಂಡಿಯನ್ ಮೌಂಟನೇರಿಂಗ್ ಫೌಂಡೇಷನ್ ಮತ್ತು ಕರ್ನಾಟಕ ರಾಫ್ಟಿಂಗ್ ಅಸೋಸಿಯೇಷನ್ ಇವರುಗಳ ಸಹಯೋಗದೊಂದಿಗೆ ಮೈಸೂರು ಜಿಲ್ಲೆಯ 18 ರಿಂದ 29 ವರ್ಷದೊಳಗಿನ ಯುವಕ, ಯುವತಿಯರಿಗೆ ಭೂ ಸಾಹಸ ಮತ್ತು ಜಲ ಸಾಹಸ ಕ್ರೀಡಾ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಜಲ ಸಾಹಸ ಕ್ರೀಡೆಯನ್ನು ವರುಣ ಕೆರೆ ಮತ್ತು ಭೂ ಸಾಹಸ ಕ್ರೀಡೆಯನ್ನು ಪಾಂಡವಪುರದ ಕುಂತಿಬೆಟ್ಟದಲ್ಲಿ ಫೆಬ್ರವರಿ ಕೊನೆಯ ವಾರದಲ್ಲಿ ನಡೆಸಲಾಗುತ್ತದ್ದು, ಮೈಸೂರು ಜಿಲ್ಲೆಯ ಅಭ್ಯರ್ಥಿಗಳು ಸ್ವವಿವರದೊಂದಿಗೆ ಫೆಬ್ರವರಿ 24 ರೊಳಗೆ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರ ದೂ. 0821–2564179 ಮತ್ತು ವಿಶ್ವ.ಎಂ. ಅವರ ದೂ.9481075364 ನ್ನು ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಭಾಸ್ಕರ್ ನಾಯಕ್ ತಿಳಿಸಿದ್ದಾರೆ.

### ಸಹಾಯಧನ ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ಮೈಸೂರು:** ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ, ಕರ್ನಾಟಕ ಮಡಿವಾಳ ಮಾಚೀದೇವ ಅಭಿವೃದ್ಧಿ, ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ, ಕರ್ನಾಟಕ ರಾಜ್ಯ ಕಾಡುಗೊಲ್ಲ ಅಭಿವೃದ್ಧಿ, ಕರ್ನಾಟಕ ಉಪ್ಪಾರ ಅಭಿವೃದ್ಧಿ, ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮಗಳ ಸಮುದಾಯದವರಿಗೆ 2025–26 ನೇ ಸಾಲಿನಲ್ಲಿ ಆಹಾರ ವಾಹಿನಿ (ಆಹಾರ ಕಿಯೋಸ್ಕ್) ಯೋಜನೆಯ ಸಹಾಯಧನ ಸೌಲಭ್ಯ ಒದಗಿಸಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯನ್ನು ಮಾರ್ಚ್ 06 ರೊಳಗೆ ಸೇವಾ ಸಿಂಧು ಪೋರ್ಟಲ್ ಲಿಂಕ್ ಮೂಲಕ ಗ್ರಾಮ ಒನ್, ಕರ್ನಾಟಕ ಒನ್, ಬೆಂಗಳೂರು ಒನ್ ಸೇವಾ ಕೇಂದ್ರಗಳಲ್ಲಿ ಸಲ್ಲಿಸಬಹುದಾಗಿರುತ್ತದೆ.

ಆಹಾರವಾಹಿನಿ (ಆಹಾರ ಕಿಯೋಸ್ಕ್) ಯೋಜನೆಯಡಿ ಸ್ಥಳಾಂತರಿಸಬಹುದಾದ ತಿಂಡಿ ಮಳಿಗೆಗಳನ್ನು ನಾಲ್ಕು ಚಕ್ರಗಳ ಇಗಿ –ಗೂಡ್ಸ್ ವಾಹನಗಳನ್ನು ಅಗತ್ಯಕ್ಕೆ ತಕ್ಕಂತೆ ನವೀಕರಿಸಿ ಫಲಾನುಭವಿಗಳಿಗೆ ವಿತರಿಸುವ ಯೋಜನೆಯಾಗಿದೆ. ನಿಗಮದಿಂದ ವಾಹನ ಖರೀದಿಗೆ ರೂ.3 ಲಕ್ಷಗಳ ಸಹಾಯಧನ ಬಿಡುಗಡೆ ಮಾಡಲಾಗುವುದು, ಉಳಿಕೆ ಮೊತ್ತವನ್ನು ಬ್ಯಾಂಕುಗಳು / ಹಣಕಾಸು ಸಂಸ್ಥೆಗಳಿಂದ ಸಾಲ ಪಡೆಯಬಹುದಾಗಿರುತ್ತದೆ.

ಕುಟುಂಬದ ವಾರ್ಷಿಕ ವರಮಾನ ರೂ.3 ಲಕ್ಷಗಳ ಒಳಗಿರಬೇಕು ಹಾಗೂ ಅರ್ಜಿದಾರರ ವಯಸ್ಸು 21 ರಿಂದ 45 ವರ್ಷಗಳ ಮಿತಿಯಲ್ಲಿರಬೇಕು. ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಆಧಾರ್ ಕಾರ್ಡ್ ನಲ್ಲಿರುವಂತೆ ಅರ್ಜಿದಾರರ ಹೆಸರು ಇತರೆ ದಾಖಲಾತಿಗಳಾದ ಆದಾಯ ಪ್ರಮಾಣ ಪತ್ರ 2500 ಪಾಸ್ ಪುಸ್ತಕದಲ್ಲಯೂ ಇದ್ದು ಹೊಂದಾಣಿಕೆಯಾಗಬೇಕು. ಒಂದು ಕುಟುಂಬದ ಒಬ್ಬ ಸದಸ್ಯರು ಮಾತ್ರ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆಯಾ ನಿಗಮಗಳ ವೆಬ್‌ಸೈಟ್ ಗಳನ್ನು ಅಥವಾ ಮೈಸೂರು ಜಿಲ್ಲಾ ಕಚೇರಿ ದೂ.0821–2341194 ನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ವ್ಯವಸ್ಥಾಪಕಿ ಹೆಚ್.ಎ.ಶೋಭ ತಿಳಿಸಿದ್ದಾರೆ.

## ಭಾರತದ ಕಲೆ, ಸಾಹಿತ್ಯ ಸಂಸ್ಕೃತಿಯನ್ನುಎತ್ತಿ ಹಿಡಿದ ವೀರ ಶಿವಾಜಿ ಮಹಾರಾಜರು

# ಬದುಕಿನಲ್ಲಿ ನಿಷ್ಠೆ, ಪ್ರಾಮಾಣಿಕತೆ ಮತ್ತುಕಾರ್ಯ ತಂತ್ರಗಳನ್ನು ಅಳವಡಿಸಿಕೊಂಡು ಯಶಸ್ಸುಕಾಣಬಹುದು: ಬಿ.ಸಿ ಶಿವಾನಂದ ಮೂರ್ತಿ

**ಮಂಡ್ಯ:** ಭಾರತದ ಕಲೆ ಸಾಹಿತ್ಯ ಸಂಸ್ಕೃತಿ ಪರಂಪರೆ ಪರಕಿಯರ ದಾಳಿಗೆ ತುತ್ತಾದ ಸಂದರ್ಭದಲ್ಲಿ ಜನಿಸಿ ಭಾರತದ ಕಲೆ ಸಾಹಿತ್ಯ ಸಂಸ್ಕೃತಿಯನ್ನುಎತ್ತಿ ಹಿಡಿದ ವೀರ ಶಿವಾಜಿ ಮಹಾರಾಜರುಎಂದುಅಪರಜಿಲ್ಲಾಧಿಕಾರಿ ಬಿ.ಸಿ ಶಿವಾನಂದ ಮೂರ್ತಿಅವರು ಹೇಳಿದರು.

ಜಿಲ್ಲಾಡಳಿತ ಕನ್ನಡ ಮತ್ತು ಸಂಸ್ಕೃತಿಇಲಾಖೆಯ ಸಹಯೋಗದೊಂದಿಗೆ ನಗರದ ನಾಲ್ವಡಿ ಶ್ರೀ ಕೃಷ್ಣರಾಜಒಡೆಯರ್‌ಕಲಾಮಂದಿರದಗ್ರಂಥಾಲಯ ಸಭಾಂಗಣದಲ್ಲಿ ನಡೆದಛತ್ರಪತಿ ಶಿವಾಜಿ ಜಯಂತಿಕಾರ್ಯಕ್ರಮದಲ್ಲಿ ದೀಪ ಬೆಳಗಿಸುವುದರ ಮೂಲಕ ಉದ್ಘಾಟಿಸಿ ಮಾತನಾಡಿದರು.

ಛತ್ರಪತಿಶಿವಾಜಿಮಹಾರಾಜರು1630ರಲ್ಲಿಮಹಾರಾಷ್ಟದಲ್ಲಿ ಜನಿಸಿದರು. ದಾದಾಜಿಕೊಂಡದೇವಅವರುಛತ್ರಪತಿ ಶಿವಾಜಿಯವರಿಗೆ ಯುದ್ಧಕೌಶಲ್ಯದ ತರಬೇತಿ ಯನ್ನು ನೀಡಿದರು. ಅವರತಾಯಿ ಪ್ರತಿನಿತ್ಯವೂರಾಮಾಯಣ ಮಹಾಭಾರತದ ಕಥೆಗಳನ್ನು ಹೇಳಿ ಶಿವಾಜಿ ಮಹಾರಾಜರಲ್ಲಿಧರ್ಮ, ನ್ಯಾಯದಚಿಂತನೆಯನ್ನು ಬಿತ್ತಿದರುಎಂದು ಹೇಳಿದರು.

ಶಿವಾಜಿ ಮಹಾರಾಜರಿಂದ ನಾವು ನಿಷ್ಠೆ, ಪ್ರಾಮಾಣಿಕತೆ



ಮತ್ತುಕಾರ್ಯ ತಂತ್ರಗಳನ್ನು ಅಳವಡಿಸಿಕೊಂಡು ಯಶಸ್ಸು ಕಾಣಬಹುದು ಎಂಬುದನ್ನು ಕಲಿಯಬೇಕು.ಇನ್ನೂ ಹೆಚ್ಚಿನ ಜನರು ಶಿವಾಜಿ ಕುರಿತಾಗಿ ವಿಚಾರ, ಚಿಂತನೆಗಳನ್ನು ತಿಳಿಯಬೇಕು ಎಂದು ಹೇಳಿದರು.

ಶಿವಾಜಿ ಮಹಾರಾಜರುಒಬ್ಬ ಸಾಮಾನ್ಯರಾಜ್ಯ ಪುತ್ರನಾಗಿ ಜನಿಸಿ ಭಾರತದ ಸಾಂಸ್ಕೃತಿಕ ವೈಭವವನ್ನು ಹೆಚ್ಚಿಸಿ ಒಂದು ಸಾಮ್ರಾಜ್ಯವನ್ನೆ ನಿರ್ಮಿಸಿದರು.ಇವತ್ತಿಗೂ ಮರಾಠರುಛತ್ರಪತಿ ಶಿವಾಜಿ ಮಹಾರಾಜರಜಯಂತಿಯನ್ನುಎಲ್ಲರೂಒಗ್ಗಟ್ಟಾಗಿ ಹಬ್ಬದಂತೆಆಚರಿಸುತ್ತಾರೆಎಂದು ಹೇಳಿದರು.

ಭಾರತ ಪರಕಿಯರ ದಾಳಿಯನ್ನು ಉಗ್ರ ಖಂಡಿಸಿ ಗೆರಿಲ್ಲಾ ಮಾದರಿಯುದ್ಧತಂತ್ರದಿಂದ ಭಾರತವನ್ನು ಪರಕಿಯರನ್ನು ಸೋಲಿಸಿ ಶತ್ರುವಿನ ಎದೆಯಲ್ಲಿ ಭೀತಿ ಹುಟ್ಟಿಸಿದರು. ಹಿಂದೂಧರ್ಮದರಕ್ಷಣೆಗಾಗಿದೆಹಲಿ ಸುಲ್ತಾನರನ್ನು ಎದುರಿಸಿದರು.ಶಿವಾಜಿ ಮನೆತನ 250 ವರ್ಷಗಳಿಗಿಂತ ಹೆಚ್ಚು ಕಾಲ ಸುದೀರ್ಘ ಆಡಳಿತ ನಡೆಸಿದ ಸಾಮ್ರಾಜ್ಯವನ್ನು ಸ್ಥಾಪಿಸಿದರು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದಅಧ್ಯಕ್ಷ ಬಿ.ಪಿ ಪ್ರಕಾಶ್, ಜಿಲ್ಲಾಕುಷ್ಟರೋಗ ನಿರ್ಮೂಲನಾಧಿಕಾರಿಡಾ. ಸೋಮಶೇಖರ್, ಜಿಲ್ಲಾ ಮರಾಠ ಸಮಾಜದಅಧ್ಯಕ್ಷ ಸುರೇಶ್, ಜಿಲ್ಲಾ ಮರಾಠ ಸಮಾಜದಉಪಾಧ್ಯಕ್ಷಅಂಬೋಜಿ, ಖಜಾಂಚಿರಾಜೇಶ್, ಕಿತ್ತೂರುರಾಣಿಚೆನ್ನಮ್ಮ ಪ್ರಶಸ್ತಿ ಪುರಸ್ಕೃತೆ ಅನುಪಮಾ ಸೇರಿದಂತೆಇನ್ನಿತರರು ಉಪಸ್ಥಿತರಿದ್ದರು

## ಸಾಯಿ ಸಂಗೀತೋತ್ಸವ ಕಾರ್ಯಕ್ರಮ




**ಮಂಡ್ಯ:** ಪ್ರಶಾಂತಿ ಸೇವಾ ಟ್ರಸ್ಟ್ ಮತ್ತು ಮಧುರ ಮಂಡ್ಯ ರಂಗಕಲಾ ಟ್ರಸ್ಟ್ ಸಹಯೋಗದೊಂದಿಗೆ ಸಾಯಿ ಸಂಗೀತೋತ್ಸವ ಕಾರ್ಯಕ್ರಮವನ್ನು ಫೆ.21ರಂದು ಸಂಜೆ.4.30ಕ್ಕೆ ನಗರದ ಕಲಾಮಂದಿರದಲ್ಲಿ ಆಯೋಜಿಸಲಾಗಿದೆ ಎಂದುಟ್ರಸ್ಟ್‌ನಅಧ್ಯಕ್ಷಡಾ.ಎ.ವಿ.ಉಮೇಶ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶ್ರೀಸತ್ಯ ಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯ ಮತ್ತು ಶ್ರೀಸತ್ಯ ಸಾಯಿ ಲೋಕ ಸೇವಾ ಗುರುಕುಲಂನ ವಿದ್ಯಾರ್ಥಿ–ವಿದ್ಯಾರ್ಥಿನಿಯರಿಂದ ಸಂಗೀತ ಮತ್ತು ಸ್ವರಮೇಳ ನಡೆಯಲಿದೆ ಎಂದರು.

ಕಾರ್ಯಕ್ರಮವನ್ನು ರಾಜೀವ್ ಗಾಂಧಿ ವೈದ್ಯಕೀಯ ವಿಶ್ವವಿದ್ಯಾಲಯದ ಉಪ ಕುಲಪತಿ ಡಾ.ಬಿ.ಸಿ.ಭಗವಾನ್ ಉದ್ಘಾಟಿಸುವರು. ಅಧ್ಯಕ್ಷತೆಯನ್ನು ಮಧುರ ಮಂಡ್ಯ ರಂಗಕಲಾ ಟ್ರಸ್ಟ್‌ನ ಅಧ್ಯಕ್ಷ ಡಾ.ಎ.ವಿ.ಉಮೇಶ್ ವಹಿಸುವರು. ಮಂಡ್ಯ ವೈದ್ಯಕೀಯ ವಿಜ್ಞಾನಗಳ ನಿರ್ದೇಶಕ ಡಾ.ನರಸಿಂಹಸ್ವಾಮಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದು, ಸತ್ಯಸಾಯಿ ಲೋಕ ಸೇವಾ ಗುರುಕುಲಂನ ಹಿರಿಯ ವಿದ್ಯಾರ್ಥಿ, ತಾರಾ ಡಯಗ್ನೋಸ್ಟಿಕ್ ಸೆಂಟರ್‌ನ ರೋಗಶಾಸ್ತ್ರ ತಜ್ಞ ಡಾ.ಕೆ.ಚಂದ್ರಶೇಖರ್ ಪ್ರಾಸ್ತವಿಕ ನುಡಿಗಳನ್ನಾಡುವರು. ಗುರುಕುಲಂನ ಹಿರಿಯ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವರು ಎಂದು ವಿವರಿಸಿದರು. ಗೋಷ್ಠಿಯಲ್ಲಿ ಮಧುರ ಮಂಡ್ಯ ಕಲಾಟ್ರಸ್ಟ್‌ನ ಕಾರ್ಯದರ್ಶಿ ಚಿಕ್ಕ ಸಿದ್ದಯ್ಯ, ಖಜಾಂಚಿ ರಾಮಲಿಂಗೇಗೌಡ, ವೈದ್ಯ ಡಾ.ಕೆ.ಚಂದ್ರಶೇಖರ್, ಸರಕಾರಿ ನೌಕರರ ಸಂಘದ ರಘು ಇದ್ದರು.

## ಛತ್ರಪತಿ ಶಿವಾಜಿ ಹೆಸರೇ ಒಂದು ಮಹಾನ್ ಶಕ್ತಿ

**ಚಿಕ್ಕಬಳ್ಳಾಪುರ:** ಛತ್ರಪತಿ ಶಿವಾಜಿ ಮಹಾರಾಜರ ಹೆಸರೇ ಒಂದು ಮಹಾನ್ ಶಕ್ತಿಯಾಗಿದ್ದು, ನಮ್ಮ ದೇಶದ ಅತ್ಯಂತ ಧೈರ್ಯಶಾಲಿ ರಾಜ ಮಾತ್ರವಲ್ಲ, ಹಿಂದೂ ಧರ್ಮವನ್ನು ರಕ್ಷಿಸಲು ತಮ್ಮ ಪ್ರಾಣವನ್ನೇ ತ್ಯಾಗ ಮಾಡಿರುವಂತಹ ರಾಜರಲ್ಲಿ ಶಿವಾಜಿ ಪ್ರಮುಖರು ಎಂದು ಜಿಲ್ಲಾಡಳಿತ ಭವನದ ಕಚೇರಿಯ ಸಹಾಯಕ ಅಧಿಕಾರಿ ಅರುಂಧತಿ ಬಣ್ಣಿಸಿದರು.

ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಶ್ರೀಛತ್ರಪತಿ ಶಿವಾಜಿ ಜಯಂತಿ ಕಾರ್ಯಕ್ರಮದಲ್ಲಿ ಶಿವಾಜಿ ಮಹಾರಾಜರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು.

ಶಿವಾಜಿಯ ಶೌರ್ಯ, ಸಾಹಸ ರಾಷ್ಟ್ರಭಕ್ತಿ ಎಂದೆಂದಿಗೂ ಪ್ರೇರಣಾದಾಯಕ, ಅವರ ತತ್ವ ಸಿದ್ಧಾಂತಗಳನ್ನು ನಮ್ಮೆಲ್ಲರ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಸಮಾಜ ಸೇವಕರು ಹಾಗೂ ಸಮುದಾಯದ ಮುಖಂಡ ಅನಿಲ್ ಕುಮಾರ್ ಮಾತನಾಡಿ ಶಿವಾಜಿ ಮಹಾರಾಜರು 14ನೇ ವಯಸಿನಲ್ಲಿ ಕರ್ನಾಟಕದ ಹಂಪಿಗೆ ಭೇಟಿ ನೀಡಿದಾಗ ಅಲ್ಲಿ ಇರುವಂತಹ ಸಮ್ರಾಜ್ಯವನ್ನು ಕಂಡು ಪ್ರೇರಣೆಗೊಂಡು ತಾನು ಕೂಡ ಮರಾಠ ಸಾಮ್ರಾಜ್ಯವನ್ನು ಸ್ಥಾಪಿಸಿ ವಿಸ್ತರಿಸಿದರು. ಅವರು ತಮ್ಮ ಜೀವಿತಾವಧಿಯಲ್ಲಿ ತನ್ನ ಸಾಮ್ರಾಜ್ಯವನ್ನು ಮೊಘಲರಿಂದ ಕಾಪಾಡಿಕೊಳ್ಳಲು ಅನೇಕ ವರ್ಷಗಳ ಕಾಲ ಹೋರಾಡಿದರು.



ಸ್ವಾಭಿಮಾನಿ ರಾಷ್ಟ್ರನಿರ್ಮಾಣಕ್ಕೆ ಹೋರಾಡಿ ಹಿಂದೂಸ್ಥಾನವನ್ನು ಒಗ್ಗೂಡಿಸಲು ಬಹಳ ಶ್ರಮಿಸಿದರು. ಕೊಂಕಣ ಭಾಗದಲ್ಲಿದ್ದ ಅನೇಕ ಕೋಟೆಗಳನ್ನು ಗೆದ್ದು ಕ್ರಮೇಣ ಭಾರತದ ಬಹು ಭಾಗವನ್ನು ತಮ್ಮ ಆಳ್ವಿಕೆಗೆ ಒಳಪಡಿಸಿದರು.

ಛತ್ರಪತಿ ಶಿವಾಜಿ ಮಹಾರಾಜರು 1630ರ ಫೆಬ್ರುವರಿ 19 ರಂದು ಮಹಾರಾಷ್ಟ್ರದ ಪುಣೆ ಜಿಲ್ಲೆಯಲ್ಲಿನ ಶಿವನೇರಿ ಎನ್ನುವ ಕೋಟೆಯಲ್ಲಿ ಜನಿಸಿದರು. ಬಾಲ್ಯದಲ್ಲೇ ನಾಯಕತ್ವದ ಗುಣಗಳನ್ನು ಹೊಂದಿದ್ದು,ತನ್ನ ತಾಯಿಯ ಆರೈಕೆಯಲ್ಲಿ ಮುದ್ದು ಮಗನಾಗಿ ಬೆಳೆದರು. ಶಿವಾಜಿ ಮಹಾರಾಜರಿಗೆ ಕೇವಲ 14 ವರ್ಷ ವಯಸ್ಸಿನಲ್ಲೇ ಅತ್ಯಂತ ಧೈರ್ಯಶಾಲಿ, ನಿರ್ಭೀತ, ನ್ಯಾಯಸಮ್ಮತವಾಗಿದ್ದ ನಿರ್ಧಾರ ತೆಗೆದುಕೊಳ್ಳುತ್ತಿದ್ದ ವಿಶೇಷ ಶಕ್ತಿ ಹೊಂದಿದ್ದರು. ಮಹಿಳೆಯರ ಬಗ್ಗೆ ವಿಶೇಷ ಗೌರವ ತೋರುತ್ತಿದ್ದರು. ಭಾರತದಲ್ಲಿ ಮೊದಲ ಬಾರಿಗೆ ಗೆರಿಲ್ಲಾ ಯುದ್ಧ ಪ್ರಾರಂಭಿಸಿದರು. 16ನೇ ವಯಸಿನಲ್ಲೆ ಶಿವನೇರಿ ದುರ್ಗದ ಮೇಲೆ ಯುದ್ಧ ಮಾಡಿ ಕೋಟೆ ವಶಪಡಿಸಿಕೊಂಡ ನಂತರ ಕೊಂಕಣ ಭಾಗದಲ್ಲಿದ್ದ ಅನೇಕ ಕೋಟೆಗಳನ್ನು ಗೆದ್ದು ಕ್ರಮೇಣ ಇಡೀ ಪಶ್ಚಿಮ ಭಾರತವನ್ನು ತಮ್ಮ ಆಳ್ವಿಕೆಗೆ ತಂದರು, ತನ್ನ ಸಾಮ್ರಾಜ್ಯವನ್ನು ತಮಿಳುನಾಡು ವರೆಗೂ ವಿಸ್ತರಿಸಿದರು ಎಂದರು.

ಶಿವಾಜಿಯು ಕೊಂಕಣ ಕರಾವಳಿಯಲ್ಲಿ ನೌಕಾಪಡೆಯನ್ನು ಸ್ಥಾಪಿಸಿ 160 ಹಡಗುಗಳನ್ನು ಹೊಂದಿದ್ದರು. ಅವರ ಏಳಿಗೆ ಕಂಡಂತಹ ಮೊಘಲರು, ಬಹುಮನಿ ಸುಲ್ತಾನರು ಬೇಸರಗೊಂಡು ಅವರ ಸಾಮ್ರಾಜ್ಯ ಅಂತ್ಯ ಮಾಡಲು ಸಾಕಷ್ಟು ಪ್ರಯತ್ನಗಳು ಮಾಡಿದರು ಸಹ ಮೊಘಲರ ಯಾವುದೇ ದಾಳಿಗೆ ಎದೆಗುಂದದೆ ಸಾಮ್ರಾಜ್ಯ ವಿಸ್ತರಿಸಿದರು. ದಕ್ಷಿಣ ಭಾರತದಲ್ಲಿ ಇಂದಿಗೂ ಕೂಡ ಪ್ರಾಚೀನ ಹಿಂದೂ ದೇವಾಲಯಗಳು ಅಳಿಯದೇ ಉಳಿದಿದೆಯೆಂದರೆ ಅದಕ್ಕೆ ಮುಖ್ಯ ಕಾರಣ ಛತ್ರಪತಿ ಆಡಳಿತವಾಗಿದೆ. ಕಾರ್ಯಕ್ರಮದಲ್ಲಿ ಸಮುದಾಯದ ಮುಖಂಡರಿಗೆ ಸನ್ಮಾನ ಮಾಡಲಾಯಿತು.

## ಕ್ಯಾನ್ಸರ್ ನಿಂದ ಬಳಲುತ್ತಿದ್ದ ರೋಗಿಗೆ ಟ್ರಸ್ಟ್ ವೆಲ್ ಯಶಸ್ವಿ ಚಿಕಿತ್ಸೆ

**ಮೈಸೂರು:** ಬಹು ಮೈಲೋಮಾ ರಕ್ತ ಕ್ಯಾನ್ಸರ್ ಸಮಸ್ಯೆಯಿಂದ ಬಳಲುತ್ತಿದ್ದ ಕೆ.ಆರ್. ಪೇಟೆ ಮೂಲದ ಸುಮಾರು 44 ವರ್ಷ ವಯಸ್ಸಿನ ವ್ಯಕ್ತಿಯೊಬ್ಬರಿಗೆ ತಮ್ಮ ಟ್ರಸ್ಟ್ ವೆಲ್ ಆಸ್ಪತ್ರೆಯಲ್ಲಿ ಕಡಿಮೆ ಖರ್ಚಿನಲ್ಲಿ ಯಶಸ್ವಿಯಾಗಿ ಅಸ್ತಿಮಜ್ಜೆ ಶಸ್ತ್ರ ಚಿಕಿತ್ಸೆ ನೆರವೇರಿಸಲಾಗಿದೆ ಎಂದು ಆಸ್ಪತ್ರೆಯ ತಜ್ಞ ವೈದ್ಯರಾದ ಡಾ. ಸಚಿನ್ ಜಾಧವ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ರೋಗಿ ರೈತರಾಗಿದ್ದು, ಕುಟುಂಬದ ಏಕೈಕ ಆಧಾರ ಸ್ತಂಭವಾಗಿದ್ದಾರೆ. ಆದರೆ ಇವರಲ್ಲಿ ರಕ್ತ ಕ್ಯಾನ್ಸರ್ ಕಾಣಿಸಿಕೊಂಡ ಬಳಿಕ ಬಹು ವಿಧದ ಅನಾರೋಗ್ಯ ಸಮಸ್ಯೆ ಕಾಡತೊಡಗಿದ್ದವು. ಈ ವೇಳೆ ಅನೇಕ ಆಸ್ಪತ್ರೆಗಳಿಗೆ ಭೇಟಿ ನೀಡಿ ಕೊನೆಗೆ ತಮ್ಮ ಆಸ್ಪತ್ರೆಗೆ ಬಂದರು. ಸಾಮಾನ್ಯವಾಗಿ ಇತರೆ ಆಸ್ಪತ್ರೆಗಳಲ್ಲಿ ಇವರ ಸಮಸ್ಯೆಗೆ ಚಿಕಿತ್ಸೆ ನೀಡಲು ಸುಮಾರು 15 ಲಕ್ಷ ವೆಚ್ಚ ತಗುಲುತ್ತದೆ. ಆದರೆ ಸೇವೆಯೇ ಪರಮ ಗುರಿಯಾದ ತಮ್ಮ ಆಸ್ಪತ್ರೆಯಲ್ಲಿ ಕೇವಲ ಸುಮಾರು 5 ಲಕ್ಷ ರೂ.,ಗಳಲ್ಲಿ ಯಶಸ್ವಿಯಾಗಿ ಶಸ್ತ್ರ ಚಿಕಿತ್ಸೆ ನೆರವೇರಿಸಲಾಗಿದೆ ಎಂದರು.

ರಕ್ತದ ಕ್ಯಾನ್ಸರ್ ವೇಳೆ ಅಸ್ಥಿಮಜ್ಜೆ ಶಸ್ತ್ರಚಿಕಿತ್ಸೆ ಅಗತ್ಯ. ಈ ವೇಳೆ ಸಾಮಾನ್ಯವಾಗಿ ದಾನಿಗಳ ಅಸ್ಥಿಮಜ್ಜೆ ಪಡೆದು ಅಳವಡಿಸಲಾಗುತ್ತದೆ. ಇವರ ಪ್ರಕರಣದಲ್ಲಿ ಇವರದೇ ದೇಹದಲ್ಲಿನ ಆರೋಗ್ಯಕರ ಅಸ್ಥಿಮಜ್ಜೆಗಳನ್ನು ತೆಗೆದು ಕಿಮೋಥೆರಪಿ ನಂತರ ಅಳವಡಿಸಲಾಗಿದೆ. ಈಗ ಆರೋಗ್ಯದಿಂದಿದ್ದು, ಸಾಮಾನ್ಯ ಕೆಲಸ ಕಾರ್ಯಗಳಲ್ಲಿ ತೊಡಗಿದ್ದಾರೆಂದು ಮಾಹಿತಿ ನೀಡಿದರು. ಆಸ್ಪತ್ರೆಯ ಮಾರುಕಟ್ಟೆ ವಿಭಾಗದ ಗುರುಪ್ರಸಾದ್ ಇದ್ದರು.




## ಫೆ.21ಕ್ಕೆ ಎನ್‌ಐಇನಲ್ಲಿ ತಂತ್ರಜ್ಞಾನ ಕಾರ್ಯಕ್ರಮ




**ಮೈಸೂರು:** ಎನ್‌ಐಇ ಕಾಲೇಜು ಮತ್ತು ಎಲ್ ಅಂಡ್ ಟಿ ಸಂಯುಕ್ತಾಶ್ರಯದಲ್ಲಿ ಫೆ. 21 ರಂದು ಬೆಳಗ್ಗೆ 9.30ಕ್ಕೆ ನಗರದ ಮುಕ್ತ ವಿವಿ ಘಟಿಕೋತ್ಸವ ಭವನದಲ್ಲಿ ಇಲ್ಯುಮಿನೇಟ್ ಶೀರ್ಷಿಕೆಯ ಈಚಿನ ತಂತ್ರಜ್ಞಾನ ಬೆಳವಣಿಗೆಯ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಎನ್‌ಐಇ ಶಿಕ್ಷಣ ಸಂಸ್ಥೆಯ ಹರ್ಷಿತ್ ದಿವಾಕರ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಇದರಲ್ಲಿ ವೈಜ್ಞಾನಿಕ ಹಾಗೂ ತಂತ್ರಜ್ಞಾನ ಕ್ಷೇತ್ರದ ದಿಗ್ಗಜರಾದ ಪ್ರೊ. ನವಕಾಂತ ಭಟ್ ಹಾಗೂ ವೈ. ದಿಲೀಪ್ ಪಾಲ್ಗೊಂಡು ಇಂಟಲಿಜೆಂಟ್ ಮೊಬಿಲಿಟಿ, ಆರೋಗ್ಯ, ರಕ್ಷಣಾ ತಂತ್ರಜ್ಞಾನ, ಡಿಜಿಟಲ್ ಮೂಲ ಸೌಕರ್ಯಗಳಲ್ಲಿ ಅನ್ವಯಿಕ ಪರಿಹಾರ, ಭಾರತವನ್ನು ಎಐ ಚಾಲಿತ ಎಂಜಿನಿಯರಿಂಗ್ ಪರಿಹಾರಗಲ ಜಾಗತಿಕ ಕೇಂದ್ರವನ್ನಾಗಿ ರೂಪಿಸುವ ಕ್ರಮ ಕುರಿತು ಬೆಳಕು ಚೆಲ್ಲಲಿದ್ದಾರೆ ಎಂಧರು.

ಎಲ್ ಅಂಡ್ ಟಿ ನ ಟೆಕ್ನಾಲಜಿ ಸರ್ವಿಸ್ ಸಿಟಿಓ ಆಶಿಶ್ ಖುಷು ನೇತೃತ್ವ ವಹಿಸಲಿದ್ದಾರೆ. ಅಲ್ಲದೆ, ನ್ಯಾನೋ ವಿಜ್ಞಾನದಿಂದ ಸುಧಾರಿತ ವೈಮಾನಿಕ ಶಾಸ್ತ್ರದವರೆಗೆ ಮುಂಚೂಣಿಯಲ್ಲಿರುವ ತಂತ್ರಜ್ಞಾನ ಕುರಿತ ಉದ್ಯಮ– ಶೈಕ್ಷಣಿಕ ಸಂವಾದವೂ ಇಲ್ಲಿರಲಿದೆ. ಸಾರ್ವಜನಿಕರಿಗೆ ಮುಕ್ತ ಪ್ರವೇಶವಿದೆ. ಉದ್ಯಮ ಮತ್ತು ಶಿಕ್ಷಣ ನಡುವಿನ ಕಂದಕ ಹೋಗಲಾಡಿಸುವ ನಿಟ್ಟಿನ ಕಾರ್ಯಕ್ರಮ ಇದಾಗಿದೆ ಎಂದು ಮಾಹಿತಿ ನೀಡಿದರು.

ಎಸ್.ಆರ್. ಗಾಯಕ್ವಾಡ್, ಗೌತಮಿ, ಚಂದ್ರಶೇಖರ್, ಋಷಿಕೇಶ್ ರಾವ್ ಇದ್ದರು.

## ಶ್ರೀ ಆತ್ಮಲಿಂಗೇಶ್ವರ ದೇವಾಲಯದಲ್ಲಿ ಶಿವರಾತ್ರಿ ಅಂಗವಾಗಿ ಅದ್ದೂರಿ ತೆಪ್ಪೋತ್ಸವ



**ಕೆ.ಎಂ ದೊಡ್ಡಿ:** ಸಮೀಪದ ಹನುಮಂತನಗರದ ಶ್ರೀ ಆತ್ಮಲಿಂಗೇಶ್ವರ ದೇವಾಲಯದಲ್ಲಿ ಶಿವರಾತ್ರಿ ಅಂಗವಾಗಿ ಅದ್ದೂರಿ ತೆಪ್ಪೋತ್ಸವ ಜರುಗಿತು.

ಕಳೆದ ಐದು ದಿನಗಳಿಂದ ಶಿವರಾತ್ರಿ ಹಿನ್ನಲೆಯಲ್ಲಿ ದೇವಾಲಯದಲ್ಲಿ ವಿವಿಧ ಧಾರ್ಮಿಕ ಪೂಜಾ ಕಾರ್ಯಕ್ರಮಗಳು ಸಾಂಗವಾಗಿ ಜರುಗಿದ್ದವು. ಈ ವೇಳೆ ದೇವಾಲಯ ಅಭಿವೃದ್ಧಿ ಸಮಿತಿ ವತಿಯಿಂದ ಪಾವನ ಗಂಗೆಯ ಕಲ್ಯಾಣಿಯಲ್ಲಿ ತೆಪ್ಪೋತ್ಸವ ವೈಭವದಿಂದ ನೇರವೇರಿತು.

ದೇವಾಲಯದಲ್ಲಿ ಶಿವ–ಪಾರ್ವತಿಯ ಉತ್ಸವ ಮೂರ್ತಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಉತ್ಸವ ಮೂತಿಯನ್ನು ಮಂಗಳ ವಾದ್ಯದೊಂದಿಗೆ ಪಾವನ ಗಂಗೆಯ ಕಲ್ಯಾಣಿ ಬಳಿ ತರಲಾಯಿತು.

ಈ ವೇಳೆ ಶ್ರೀ ಆತ್ಮಲಿಂಗೇಶ್ವರ ಧರ್ಮದರ್ಶಿ ಮಂಡಳಿಯ ಅಧ್ಯಕ್ಷ, ವಿಧಾನ ಪರಿಷತ್ ಸದಸ್ಯ ಮಧು ಜಿ.ಮಾದೇಗೌಡ ಉತ್ಸವ ಮೂರ್ತಿಗೆ ವಿಶೇಷ ಪೂಜೆ ಸಲ್ಲಿಸಿದರು. ತೆಪ್ಪೋತ್ಸವದ ರೂವಾರಿ ಶ್ರೀ ಆತ್ಮಲಿಂಗೇಶ್ವರ ಧರ್ಮದರ್ಶಿ ಮಂಡಳಿಯ ಸದಸ್ಯ, ಭಾರತೀ ಎಜುಕೇಷನ್ ಟ್ರಸ್ಟ್‌ನ ಸಿಇಒ ಆಶಯ್ ಮಧು ದೀಪ ಬೆಳಗುವ ಮೂಲಕ ತೆಪ್ಪೋತ್ಸವಕ್ಕೆ ಚಾಲನೆ ನೀಡಿದರು.

ಪಾವನಗಂಗೆಯ ಕಲ್ಯಾಣಿಯಲ್ಲಿ ತೆಪ್ಪೋತ್ಸವ ಹಿನ್ನಲೆಯಲ್ಲಿ ವಿದ್ಯುತ್ ದೀಪಗಳಿಂದ ವಿಶೇಷ ಅಲಂಕಾರ ಮಾಡಲಾಗಿತ್ತು. ತೆಪ್ಪದ ಅಲಂಕಾರ ಭಕ್ತರನ್ನು ವಿಶೇಷವಾಗಿ ಗಮನ ಸೆಳೆಯಿತು. ತೆಪ್ಪವನ್ನು ಕಲ್ಯಾಣಿಯಲ್ಲಿ ಮೂರು ಸುತ್ತು ಪ್ರದಕ್ಷಣೆ ಹಾಕಿದ ನಂತರ ಕಲ್ಯಾಣಿಯ ಮಧ್ಯ ಭಾಗದಲ್ಲಿ ಭಾರತೀನಗರದ ಶ್ರೀ ಚಾಮುಂಡೇಶ್ವರಿ ದೇವಾಲಯದ ಪ್ರಧಾನ ಅರ್ಚಕ ಕಾರ್ತಿಕ್ ಆರಾಧ್ಯ ಗಂಗಾರತಿ ಬೆಳಗಿದರು. ಈವೇಳೆ ಭಕ್ತರ ಹರ್ಷೋದ್ಗಾರ ಮುಗಿಲು ಮುಟ್ಟಿತು ದೇವಾಲಯ ಅಭಿವೃದ್ಧಿ ಸಮಿತಿಯ ವತಿಯಿಂದ ಪಟಾಕಿ ಸಿಡಿಸಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಮಧು ಜಿ.ಮಾದೇಗೌಡ ಮಾತನಾಡಿ, ಕಳೆದ ಮೂವತೆರಡು ವರ್ಷಗಳ ಹಿಂದೆ ನನ್ನ ತಂದೆ ಮಾಜಿ ಸಂಸದ ದಿವಂಗತ ಜಿ.ಮಾದೇಗೌಡ ಅವರು ಹನುಂತನಗರವನ್ನು ಒಂದು ಆಧ್ಯಾತ್ಮೀಕ ಕ್ಷೇತ್ರವನ್ನು ನಿರ್ಮಾಣ ಮಾಡಲು ಪಣತೊಟ್ಟಿದ್ದು ಅವರ ಕನಸು ಈಡೇರಿದೆ ಎಂದರು.

> ಹನುಂತನಗರದ ಶ್ರೀ ಆತ್ಮಲಿಂಗೇಶ್ವರ ದೇವಾಲಯದಲ್ಲಿ ಪಾವನಗಂಗಾ ಕಲ್ಯಾಣಿಯಲ್ಲಿಯಲ್ಲಿ ತೆಪ್ಪೋತ್ಸವ ಕಾರ್ಯಕ್ರಮ ಆಯೋಜಿಸುವ ಮೂಲಕ ಮತ್ತೊಂದು ದೇವತಾ ಕಾರ್ಯಕ್ಕೆ ಚಾಲನೆ ನೀಡಿದ್ದು ಮುಂದಿನ ವರ್ಷ ಇನ್ನಷ್ಟು ವೈಭವದಿಂದ ತೆಪ್ಪೋತ್ಸವ ಕಾರ್ಯಜರುಗಲಿದ್ದು ನನ್ನ ತಾತ ದಿವಂಗತ ಜಿ.ಮಾದೇಗೌಡ ಅವರ ದೈವಿಕ ಕನಸುಗಳನ್ನು ಈಡೇರಿಸಲು ನನ್ನ ಪ್ರಯತ್ನ ಸಾಗುತ್ತಿದೆ.
>
> **ಆಶಯ್ ಮಧು, ಸದಸ್ಯ, ಶ್ರೀ ಆತ್ಮಲಿಂಗೇಶ್ವರ ಧರ್ಮದರ್ಶಿ ಮಂಡಳಿ.**

ದೇವಾಲಯಕ್ಕೆ ಹೆಚ್ಚು ಭಕ್ತರು ಆಗಮಿಸಿ ದೇವರ ಕೃಪೆಗೆ ಪಾತರರಾಗಲಿ ಎಂಬ ದೃಷ್ಠಿಯಿಂದ ನನ್ನ ಪುತ್ರ ಆಶಯ್‌ಮಧು ತೆಪ್ಪೋತ್ಸವದ ಸಂಪೂರ್ಣ ಜವ್ಬಾದಾರಿ ವಹಿಸಿ ಕೊಂಡು ಯಶಸ್ವಿಯಾಗಿ ನಡೆಯಲು ಕಾರಣರಾಗಿದ್ದು ಮುಂದಿನ ವರ್ಷ ಇನ್ನು ಅದ್ದೂರಿಯಾಗಿ ದೇವಾಲಯದಲ್ಲಿ ವಿವಿಧ ಕಾರ್ಯಕ್ರಮಗಳು ಜರುಗಲಿವೆ ಎಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಭಾರತೀ ಎಜುಕೇಷನ್ ಟ್ರಸ್ಟ್ ಮುಖ್ಯ ಕಾರ್ಯನಿರ್ವಾಣಾಧಿಕಾರಿ ಆಶಯ್ ಮಧು, ಕಾರ್ಯಧ್ಯಕ್ಷ ಬಿ.ಬಸವರಾಜು, ಕಾರ್ಯದರ್ಶಿಗಳಾದ ಬಿ.ಎಂ.ನಂಜೇಗೌಡ, ಗುರುದೇವರಹಳ್ಳಿ ಸಿದ್ದೇಗೌಡ, ಭಾರತೀ ಹೆಲ್ತ್ ಸೈನ್ಸ್ ನಿರ್ದೇಶಕ ಡಾ.ತಮಿಜ್‌ಮಣಿ, ಪ್ರಾಂಶುಪಾಲರಾದ ಡಾ. ಎಂ.ಎಸ್. ಮಹದೇವಸ್ವಾಮಿ, ಡಾ. ಬಾಲಸುಬ್ರಮಣ್ಯಂ, ಡಾ.ಎಸ್.ಎಲ್. ಸುರೇಶ್, ಡಾ. ಶಾಂತಕುಮಾರ್, ಜಗದೀಶ್, ಸಿ.ವಿ.ಮಲ್ಲಿಕಾರ್ಜುನ, ಪುಟ್ಟಸ್ವಾಮಿ ಮುಖಂಡರಾದ ಕೆ.ಎಸ್.ಗೌಡ, ಆರ್. ಸಿದ್ದಪ್ಪ, ಸೇರಿದಂತೆ ಹಲವರಿದ್ದರು.


ಸಿನಿಮಾ ವರದಿ: ಬಿ.ಜಿ.ರವಿಕುಮಾರ್



# ರಾಕ್ಷಸ ವೆಬ್ ಸಿರೀಸ್ ಸ್ಟ್ರೀಮಿಂಗ್



ಪ್ರತಿಷ್ಠಿತ ಒಟಿಟಿಗಳಲ್ಲಿ ಒಂದಾದ zee5 ಕನ್ನಡದಲ್ಲಿ ವೆಬ್ ಸಿರೀಸ್ ನಿರ್ಮಾಣಕ್ಕಿಳಿದಿರುವುದು ಗೊತ್ತೇ ಇದೆ. ಈಗಾಗಲೇ ಅಯ್ಯನ ಮನೆ, ಮಾರಿಗಲ್ಲು ಸೇರಿದಂತೆ ಹಲವು ವೆಬ್ ಸರಣಿಗಳನ್ನು ಪ್ರೇಕ್ಷಕರ ಮಡಿಲಿಗೆ ಹಾಕಿದೆ. ಇದೀಗ ಇದೇ ತಿಂಗಳ 20ರಿಂದ ದಜಜ5ನಲ್ಲಿ ರಾಕ್ಷಸ ವೆಬ್ ಸಿರೀಸ್ ಪ್ರಸಾರವಾಗಲಿದೆ.

ನಟ ವಿಜಯ್ ರಾಘವೇಂದ್ರ ಅವರ ಚೊಚ್ಚಲ ವೆಬ್ ಸರಣಿ ಇದಾಗಿದೆ. ಮಲಪ್ರಭಾ ನದಿ ತೀರದ ನಿಗೂಢ ಮೊಸಳೆ ದಾಳಿಗಳ ಸುತ್ತ ಈ ಕಥೆಯನ್ನು ಹೆಣೆಯಲಾಗಿದೆ. ರಾಕ್ಷಸ ಪ್ರೀಮಿಯರ್ ಶೋ ಹಾಗೂ ಪತ್ರಿಕಾಗೋಷ್ಠಿ ಹಮ್ಮಿಕೊಳ್ಳಲಾಗಿತ್ತು. ಈ ವೇಳೆ

ಚಜಜ5 ಬ್ಯುಸಿನೆಸ್ ಹೆಡ್ ದೀಪಕ್ ತಿಮ್ಮಯ್ಯ ಮಾತನಾಡಿ, ದಜಜ5 ವೆಬ್ ಸಿರೀಸ್ ಜರ್ನಿ ಶುರು ಮಾಡಿದಾಗ, ಶೃತಿ ನಾಯ್ಡು ಪ್ರೊಡಕ್ಷನ್, ಪಿಆರ್ ಕೆ, ಕೆಆರ್ ಜಿ ಈಗ ತರುಣ್ ಸುಧೀರ್ ಅವರು ಸಾಥ್ ಕೊಟ್ಟಿದ್ದಾರೆ. ನಾವು ಕೇಳಿದಾಗ ಸಿರೀಸ್ ಮಾಡಲು ಮುಂದೆ ಬಂದರು. ಈ ಒಂದು ವರ್ಷ ನಾವು ಸಾಕಷ್ಟು ಕಲಿತಿದ್ದೇವೆ. ಈ ಕಲಿಯುವಿಕೆ ಇಷ್ಟು ಕೊಂಡು ಮುಂದಿನ ವರ್ಷ ಸಾಕಷ್ಟು ಜಾನರ್ ನೊಂದಿಗೆ ಬರುತ್ತಿದ್ದೇವೆ. ಸಿರೀಸ್ ಜೊತೆಗೆ ನಾನ್ ಫಿಕ್ಷನ್, ಟಿವಿ ಪ್ಲಸ್ ಪ್ಲಸ್ ಸೇರಿದಂತೆ ಹಲವು ಫಾರ್ಮೆಟ್ ಜಾರಿಗೆ ತರುತ್ತೇವೆ. ರಾಕ್ಷಸ ಉತ್ತರ ಕರ್ನಾಟಕ ಭಾಗದ ಕಥೆ. ಕಲಾವಿದರು ಹಾಗೂ ನಿರ್ಮಾಪಕರು ಕೂಡ ಉತ್ತರ ಕರ್ನಾಟಕದವರೇ ಆಗಿದ್ದಾರೆ. 22ರಿಂದ 25 ನಿಮಿಷದ ಏಳು ಎಪಿಸೋಡ್ ಆಗಿ ಪ್ರಸಾರ ಆಗಲಿದೆ. ನಿಮ್ಮ ಸಪೋರ್ಟ್ ಹೀಗೆ ಇರಲಿ. ಏಪ್ರಿಲ್ ನಿಂದ ಬೇರೆ ಬೇರೆ ಪ್ರಾಜೆಕ್ಟ್ ಜೊತೆ ಬರುತ್ತೇವೆ ಎಂದರು.

ನಿರ್ಮಾಪಕ ತರುಣ್ ಸುಧೀರ್ ಮಾತನಾಡಿ, ಈ ಪ್ರಾಜೆಕ್ಟ್ ಮಾಡಿರುವುದು ಬಹಳ ಖುಷಿ ಇದೆ. ಚಜಜ5 ಇಡೀ ಟೀಂಗೆ ಧನ್ಯವಾದಗಳು. ಸಿನಿಮಾ ಅಂತಾ ಬಂದಾಗ ಥಿಯೇಟರ್ ಗೆ ಹೋಗುತ್ತೇ. ಕಲೆಕ್ಷನ್ ಆಗುತ್ತದೆ. ಅಲ್ಲಿ ಯಾವುದೇ ಚೌಕಟ್ಟು ಇರುವುದಿಲ್ಲ.ಆದರೆ ವೆಬ್ ಸಿರೀಸ್ ಮಾಡಿದಾಗ ಫ್ಲಾಟ್ ಫಾರ್ಮ್ ಸಪೋರ್ಟ್ ಬೇಕು. ಅದನ್ನು ರೆಡಿ ಮಾಡಿ ಎಲ್ಲಿ ಪ್ರೆಸೆಂಟ್ ಮಾಡುತ್ತೀರಾ? ಒಂದು ಫ್ಲಾಟ್ ಫಾರ್ಮ್ ಸಪೋರ್ಟ್ ಮಾಡಿದಾಗ ಇಂಡಸ್ಟ್ರಿ ಬೆಳೆಯಲು ಆಗುವುದು. ಬೇರೆ ಇಂಡಸ್ಟ್ರಿಯಲ್ಲಿ ಫ್ಲಾಟ್ ಫಾರ್ಮ್ ಸಪೋರ್ಟ್ ಮಾಡಿದ್ದಕ್ಕೆ ಅಲ್ಲಿ ವೆಬ್ ಸಿರೀಸ್ ಸಂಪ್ರದಾಯ ಶುರುವಾಗಿದೆ. ಇಲ್ಲಿ ಈಗ ಅದನ್ನು ದಜಜ5 ಮಾಡುತ್ತಿದೆ. ಸುಹಾಸ್ ಹೇಳಿದ ಲೈನ್ ಇಷ್ಟವಾಯ್ತು. ನನಗೆ ಉತ್ತರ ಕರ್ನಾಟಕದ ಎಲಿಮೆಂಟ್ ನನ್ನ ಸಿನಿಮಾದಲ್ಲಿ ಇರಬೇಕು. ಅದನ್ನು ನನ್ನ ಸಿನಿಮಾದಲ್ಲಿ ಅಳವಡಿಸಿದ್ದೇನೆ. ಉತ್ತರ ಕರ್ನಾಟಕ ನಮ್ಮ ಕುಟುಂಬಕ್ಕೆ ಇರುವ ಕೊಡುಗೆ. ಪ್ರೀತಿ. ಅದನ್ನು ಈ ರೀತಿ ವಾಪಸ್ ನೀಡುತ್ತಿದ್ದೇನೆ. ಒಂದೊಳ್ಳೆ ತಂಡ ಈ ಸಿರೀಸ್ ನಲ್ಲಿ ಕೆಲಸ ಮಾಡಿದೆ. 89 ಪಾತ್ರಗಳು ಈ ಸಿರೀಸ್ ನಲ್ಲಿ ಇದ್ದಾರೆ. ಅವರೆಲ್ಲರೂ ಉತ್ತರ ಕರ್ನಾಟಕ ಭಾಗದವರು. ವೆಬ್ ಸಿರೀಸ್ ಗೆ ಒಂದು ಪ್ರೆಸ್ ಮೀಟ್ ಮಾಡುತ್ತಿದ್ದೇವೆ ಅಂದರೆ ಇದು ಗ್ರೇಟ್ ಮೂವ್. ಇದೆಲ್ಲಾ zee5ನಿಂದ ಆಗಿದೆ ಎಂದರು.

ರಾಕ್ಷಸ, ಉತ್ತರ ಕರ್ನಾಟಕದ ಗ್ರಾಮೀಣ ಭಾಗದ ಮೊದಲ ವೆಬ್ ಸಿರೀಸ್. ಸೈಕಲಾಜಿಕಲ್ ಕ್ರೈಂ ಥ್ರಿಲ್ಲರ್ ಜಾನರ್ ಒಳಗೊಂಡಿರುವ ಸರಣಿಯಲ್ಲಿ ವಿಜಯ ರಾಘವೇಂದ್ರ,ಮಯೂರಿ, ಅವಿನಾಶ್, ಮಾಳವಿಕ, ಅಪ್ಪಣ್ಣ ಮತ್ತು ಅಭಿಜಿತ್ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ.

ರಾಕ್ಷಸ ವೆಬ್ ಸೀರಿಸ್‌ಗೆ ಸುಹಾನ್ ಪ್ರಸಾದ್ ಮತ್ತು ಅಪೂರ್ವ ಕಥೆ ಒದಗಿಸಿದ್ದಾರೆ. ಹಾಗೇ ಸುಹಾನ್ ಪ್ರಸಾದ್ ನಿರ್ದೇಶನ ಮಾಡಿದ್ದಾರೆ. ಈ ವೆಬ್ ಸೀರಿಸ್ ಅನ್ನು ತರುಣ್ ಸುಧೀರ್ ಪ್ರೊಡಕ್ಷನ್ಸ್‌ನಲ್ಲಿ ಜನಪ್ರಿಯ ನಿರ್ದೇಶಕ ತರುಣ್ ಸುಧೀರ್ ನಿರ್ಮಿಸಿದ್ದಾರೆ.

# 'ನಾಗಬಂಧಂ' ಟೀಸರ್ ಬಿಡುಗಡೆ ಮಾಡಿದ ಸೂಪರ್‌ಸ್ಟಾರ್ ಮಹೇಶ್ ಬಾಬು

ಚಿತ್ರರಂಗದಲ್ಲಿ ಭಾರೀ ಕುತೂಹಲ ಮೂಡಿಸಿರುವ 'ನಾಗಬಂಧಂ' ಚಿತ್ರದ ಭವ್ಯ ಟೀಸರ್ ಅನ್ನು ಟಾಲಿವುಡ್ ಸೂಪರ್‌ಸ್ಟಾರ್ ಮಹೇಶ್ ಬಾಬು ಅವರು ಅನಾವರಣಗೊಳಿಸಿದ್ದಾರೆ. ಮಹಾ ಶಿವರಾತ್ರಿಯ ಪವಿತ್ರ ಸಂದರ್ಭದಲ್ಲಿ ಬಿಡುಗಡೆಯಾಗಿರುವ ಈ ಟೀಸರ್, ಭಾರತೀಯ ಚಿತ್ರರಂಗದಲ್ಲಿ ಹೊಸ ಸಂಚಲನ ಮೂಡಿಸಿದ್ದು, ಪ್ರೇಕ್ಷಕರನ್ನು ಒಂದು ಅದ್ಭುತ ಲೋಕಕ್ಕೆ ಕರೆದೊಯ್ಯುವ ಭರವಸೆ ನೀಡಿದೆ.

ನಿರ್ದೇಶಕ ಅಭಿಷೇಕ್ ನಾಮಾ ಅವರ ಮಹತ್ವಾಕಾಂಕ್ಷೆಯ ಈ ಚಿತ್ರವನ್ನು ನಿರ್ಮಾಪಕರುಗಳಾದ ಕಿಶೋರ್ ಅನ್ನಪುರೆಡ್ಡಿ ಮತ್ತು ನಿಶಿತಾ ನಾಗಿರೆಡ್ಡಿ ದೊಡ್ಡ ಮಟ್ಟದಲ್ಲಿ ನಿರ್ಮಿಸಿದ್ದಾರೆ. ವಿಶ್ವದರ್ಜೆಯ ತಾಂತ್ರಿಕ ಮೌಲ್ಯಗಳು ಮತ್ತು ಅದ್ದೂರಿ ನಿರ್ಮಾಣದೊಂದಿಗೆ 'ನಾಗಬಂಧಂ' ಮೂಡಿಬಂದಿದೆ. ಆಧ್ಯಾತ್ಮಿಕ ಆಳ ಮತ್ತು ದೃಶ್ಯ ವೈಭವದ ಸಂಗಮವಾಗಿ ಪ್ರತಿ ಫ್ರೇಮ್ ಕೂಡ ಪ್ರೇಕ್ಷಕರ ಕಣ್ಮನ ಸೆಳೆಯುತ್ತಿದೆ.

ಹಿಮಾಲಯದ ನಿಗೂಢ ಲೋಕ

ಹಿಮಾಲಯದ ಹಿಮಚ್ಛಾದಿತ ಪರ್ವತಗಳ ಹಿನ್ನೆಲೆಯಲ್ಲಿ ಟೀಸರ್ ಆರಂಭವಾಗುತ್ತದೆ. ಕಾಲಕ್ಕಿಂತಲೂ ಹಳೆಯದಾದ ಮತ್ತು ಗುಪ್ತವಾಗಿರುವ ರಹಸ್ಯವೊಂದರ ಕಾವಲುಗಾರನಾಗಿ ಕಥೆ ಸಾಗುತ್ತದೆ. ಅಬ್ದಾಲಿ ನೇತೃತ್ವದ ಐತಿಹಾಸಿಕ ಅಫ್ಘಾನ್ ಆಕ್ರಮಣದಿಂದ ಪ್ರೇರಿತವಾದ ಈ ಕಥೆಯು ಪುರಾಣ, ಇತಿಹಾಸ ಮತ್ತು ಆಧ್ಯಾತ್ಮಿಕ ಯುದ್ಧವನ್ನು ಸಮರ್ಥವಾಗಿ ಮಿಳಿತಗೊಳಿಸಿದೆ.

ಕಥೆಯ ಕೇಂದ್ರಬಿಂದು 'ನಾಗಬಂಧಂ ದೇವಾಲಯ'. ದೈವಿಕ ಶಕ್ತಿಗಳಿಂದ ರಕ್ಷಿಸಲ್ಪಟ್ಟಿರುವ ಈ ಗುಪ್ತ ದೇವಾಲಯವು ಬ್ರಹ್ಮಾಂಡದ ಪ್ರಚಂಡ ಶಕ್ತಿಯನ್ನು ತನ್ನ ಒಡಲಲ್ಲಿಟ್ಟು ಕೊಂಡಿದೆ. ಈ ಶಕ್ತಿಯು ತಪ್ಪು ಕೈ ಸೇರಿದರೆ ಸಂಭವಿಸ ಬಹುದಾದ ವಿನಾಶವನ್ನು ತಡೆಯಲು ವಿಧಿಯು ಒಬ್ಬ ಯೋಧನನ್ನು ಹೇಗೆ ಆಯ್ಕೆ ಮಾಡುತ್ತದೆ ಎಂಬುದು ಚಿತ್ರದ ಸಾರಾಂಶ.

**ಪೌರಾಣಿಕ ಸಾಹಸ ಗಾಥೆಯ ದೃಶ್ಯ ವೈಭವ!**



ಬ್ರಹ್ಮನ ಸೃಷ್ಟಿ, ವಿಷ್ಣುವಿನ ಧರ್ಮ, ಮಹಾದೇವನ ಕ್ರೋಧ ಟೀಸರ್‌ನಲ್ಲಿ ಬರುವ ಈ ಸಾಲುಗಳು ಚಿತ್ರದ ಆತ್ಮವನ್ನು ಬಿಂಬಿಸುತ್ತವೆ. ಭಕ್ತಿ ಮತ್ತು ಯುದ್ಧ, ಧರ್ಮ ಮತ್ತು ವಿನಾಶದ ನಡುವಿನ ಹೋರಾಟವನ್ನು ಇದು ಧ್ವನಿಸುತ್ತದೆ. ನಿರ್ದೇಶಕ ಅಭಿಷೇಕ್ ನಾಮಾ ಅವರು ಕೇವಲ ದೃಶ್ಯಗಳ ಮೂಲಕವೇ ಕಥೆಯನ್ನು ಹೇಳುವಲ್ಲಿ ಯಶಸ್ವಿಯಾಗಿದ್ದಾರೆ. ಚಿತ್ರದಲ್ಲಿ ಒಂದೇ ಒಂದು ಸಂಭಾಷಣೆ ಇಲ್ಲದಿದ್ದರೂ, ಟೀಸರ್ ಪ್ರೇಕ್ಷಕರನ್ನು ಮಂತ್ರಮುಗ್ಧರನ್ನಾಗಿಸುತ್ತದೆ.

ಚಿತ್ರದ ನಾಯಕ ವಿರಾಟ್ ಕರ್ಣ ಅವರು ಈ ಪಾತ್ರಕ್ಕಾಗಿ ಮಾಡಿಕೊಂಡಿರುವ ಶಾರೀರಿಕ ಬದಲಾವಣೆ ಬೆರಗುಗೊಳಿಸುವಂತಿದೆ. ವಿಶೇಷವಾಗಿ ಮೊಸಳೆಯ ಜೊತೆಗಿನ ಹೋರಾಟ ಮತ್ತು ಭಗವಾನ್ ಶಿವನ ಅವತಾರದಲ್ಲಿ ಅವರ ಪ್ರದರ್ಶನ ಟೀಸರ್‌ನ ಹೈಲೈಟ್. ಶಿವನ ತೀವ್ರತೆ ಮತ್ತು ಭಾವನಾತ್ಮಕ ಆಳವನ್ನು ಅವರು ಅದ್ಭುತವಾಗಿ ತೆರೆಯ ಮೇಲೆ ತಂದಿದ್ದಾರೆ. ತಾರಾಗಣ ಮತ್ತು ತಾಂತ್ರಿಕ ಶ್ರೀಮಂತಿಕೆ

ಸೌಂದರ್ ರಾಜನ್ ಎಸ್ ಅವರ ಸಿನಿಮಾಟೋಗ್ರಫಿ ಪ್ರತಿಯೊಂದು ದೃಶ್ಯವನ್ನು ಜೀವಂತವಾಗಿಸಿದೆ. ಜುನೈದ್ ಕುಮಾರ್ ಅವರ ಹಿನ್ನೆಲೆ ಸಂಗೀತವು ರೋಮಾಂಚನವನ್ನುಂಟು ಮಾಡುತ್ತದೆ. ಅಶೋಕ್ ಕುಮಾರ್ ಅವರ ಕಲಾ ನಿರ್ದೇಶನ ಮತ್ತು ಅತ್ಯುನ್ನತ ಮಟ್ಟದ ವಿಎಫ್‌ಎಕ್ಸ್ ಚಿತ್ರದ ಗಾಂಭೀರ್ಯವನ್ನು ಹೆಚ್ಚಿಸಿವೆ.

ಕಥೆ, ಚಿತ್ರಕಥೆ ಮತ್ತು ನಿರ್ದೇಶನದ ಜವಾಬ್ದಾರಿ ಅಭಿಷೇಕ್ ನಾಮಾ ಅವರದ್ದು. ಅಬೆ ಮತ್ತು ಜುನೈದ್ ಕುಮಾರ್ ಅವರ ಸಂಗೀತ, ಆರ್‌ಸಿ ಪ್ರಣವ್ ಅವರ ಸಂಕಲನ ಚಿತ್ರಕ್ಕಿದೆ.

ನಭಾ ನಟೇಶ್ ಮತ್ತು ಐಶ್ವರ್ಯ ಮೆನನ್ ನಾಯಕಿಯರಾಗಿ ಮಿಂಚಿದ್ದರೆ, ಮಹೇಶ್ ಮಂಜ್ರೇಕರ್, ಜಗಪತಿ ಬಾಬು, ರಿಷಬ್ ಸಾಹ್ನಿ, ಗರುಡ ರಾಮ್, ಮುರಳಿ ಶರ್ಮ ಮತ್ತು ಅನಸೂಯ ಭಾರದ್ವಾಜ್ ಅವರಂತಹ ಅನುಭವಿ ಕಲಾವಿದರು ಈ ಚಿತ್ರಕ್ಕೆ ಬಲ ತುಂಬಿದ್ದಾರೆ. ಈ ಬೇಸಿಗೆಯಲ್ಲಿ 'ನಾಗಬಂಧಂ' ಪ್ಯಾನ್ ಇಂಡಿಯಾ ಮಟ್ಟದಲ್ಲಿ ಬಿಡುಗಡೆ ಆಗಲು ಸಜ್ಜಾಗಿದೆ.

# ಶಿವರಾತ್ರಿಗೆ "ಸರ್ವಾಂತರ್ಯಾಮಿ ಚಿತ್ರದ ಶಿವತಾಂಡವದ ಹಾಡು ಬಿಡುಗಡೆ



ರಂಗಭೂಮಿ ಹಿನ್ನೆಲೆ ಇರುವ ರಂಗಸ್ವಾಮಿ ಕಪಿನಿಪಾಳ್ಯ ನಿರ್ದೇಶನದ, ಹಿತ ಆರ್ ಗೌಡ ನಿರ್ಮಾಣದ ?ಸರ್ವಾಂತರ್ಯಾಮಿ? ಎಲ್ಲರ ಕೈಯಲ್ಲೂ ನಾನೇ ಸ್ವಾಮಿ? ಚಿತ್ರದ ಚಿತ್ರೀಕರಣ ಸದ್ದಿಲ್ಲದೆ ಪೂರ್ಣಗೊಂಡಿದೆ. ಚಿತ್ರಕ್ಕೆ ನಿರ್ದೇಶಕ ಹಾಗು ಗೀತರಚನೆಕಾರ ಕೆ.ರಾಮ್ ನಾರಾಯಣ್ ಬೆನ್ನೆಲುಬಾಗಿ ನಿಂತಿದ್ದಾರೆ

ಶಿವನ ಬಗ್ಗೆ ನಿರ್ದೇಶಕ ರಂಗಸ್ವಾಮಿ ಅವರೆ ಬರೆದಿರುವ ಶಿವನ ಕುರಿತಾದ ಹಾಡನ್ನು ಬಿಡುಗಡೆ ಮಾಡುವ ಮೂಲಕ ಚಿತ್ರತಂಡ ಪ್ರಚಾರ ಕಾರ್ಯ ಆರಂಭಿಸಿದೆ. ಶಿವ ತಾಂಡವದ ಈ ಗೀತೆಗೆ ರಮೇಶ್ ಕೃಷ್ಣ ಸಂಗೀತ ನೀಡಿದ್ದು, ರಂಗಸ್ವಾಮಿ ಕಪನಿಪಾಳ್ಯ ಹಾಗೂ ಸಂಜನಾ ಅಭಿನಯಿಸಿದ್ದಾರೆ. ವೇದಸ್ಯ ಆಡಿಯೋ ಮೂಲಕ ಈ ಹಾಡು ಬಿಡುಗಡೆಯಾಗಿದೆ. ಹಾಡಿಗೆ ಮೆಚ್ಚುಗೆ ವ್ಯಕ್ತವಾಗಿದ್ದು, ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುತ್ತಿದೆ. ಹಾಡು ಬಿಡುಗಡೆ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು.

ನಿರ್ದೇಶಕ ಹಾಗೂ ನಟ ರಂಗಸ್ವಾಮಿ ಕಪನಿಪಾಳ್ಯ ಕಪನಿಪಾಳ್ಯ ಮಾತನಾಡಿ, ಕಳೆದ 35 ವರ್ಷಗಳ ಹಿಂದೆ ಚಿತ್ರರಂಗದಲ್ಲಿದ್ದೆ, ಅಂದಿನಿಂದ ಚಿತ್ರರಂಗದಲ್ಲಿ ಗುರುತಿಸಿಕೊಳ್ಳುವ ಆಸೆ ಇತ್ತು. ಹೀಗಾಗಿ ಈ ಚಿತ್ರ ಮಾಡಿದ್ದೇನೆ. ನಿರ್ದೇಶನದ ಜೊತೆಗೆ ಶಿಕ್ಷಕನ ಪಾತ್ರದಲ್ಲೂ ಆಭಿನಯಿಸಿದ್ದೇನೆ. ರಾಮ್‌ನಾರಾಯಣ್ ಬೆನ್ನೆಲುಬಾಗಿ ನಿಂತಿದ್ದಾರೆ. ಚಿತ್ರತಂಡದ ಸಹಕಾರದಿಂದ ಚಿತ್ರ ಚೆನ್ನಾಗಿ ಬಂದಿದೆ. ಚಿತ್ರದಲ್ಲಿ ನಾನೇ ಬರೆದಿರುವ ನಾಲ್ಕು ಹಾಡುಗಳಿದೆ. ಶಿವರಾತ್ರಿ ಸಂದರ್ಭದಲ್ಲಿ ಮೊದಲ ಹಾಡನ್ನು ಬಿಡುಗಡೆ ಮಾಡುತ್ತಿದ್ದೇವೆ.

"ಸರ್ವಾಂತರ್ಯಾಮಿ" ಅಂದರೆ ಮೊಬೈಲ್. ಅದರಿಂದ ಆಗುವ ಅನುಕೂಲ, ಅನಾನುಕೂಲಗಳನ್ನು ಚಿತ್ರದ ಮೂಲಕ ಹೇಳುವ ಪ್ರಯತ್ನ ಮಾಡಲಾಗಿದೆ. ಇದೊಂದು ಮಕ್ಕಳ ಚಿತ್ರ. ಮಕ್ಕಳಿಗಾಗಿ ಮಾಡಿದ್ದೇನೆ. ಚಿತ್ರೀಕರಣ ಮುಗಿದಿದ್ದು ಡಬ್ಬಿಂಗ್ ಸಹ ಪೂರ್ಣಗೊಂಡಿದೆ. ಸದ್ಯದಲ್ಲಿಯೇ ಚಿತ್ರವನ್ನು ಬಿಡುಗಡೆ ಮಾಡಲಾಗುವುದು ಎಂದು ಮಾಹಿತಿ ನೀಡಿದರು.

ನಿರ್ಮಾಪಕಿ ಹಿತಾ ಆರ್ ಗೌಡ ಮಾತನಾಡಿ ರಂಗಭೂಮಿ ಒಲವು ಅಪ್ಪನ ಮೇಲೆ ಇತ್ತು, ಅಪ್ಪ ಪಾತ್ರವನ್ನು ಜೀವಿಸಿದ್ದಾರೆ. ಚಿತ್ರ ಚೆನ್ನಾಗಿ ಮೂಡಿಬಂದಿದೆ ಎಂದರು

ಚಿತ್ರಕ್ಕೆ ಬೆನ್ನೆಲುಬಾಗಿ ನಿಂತಿರುವ ಕೆ ರಾಮ್ ನಾರಾಯಣ್ ಮಾತನಾಡಿ ನಿರ್ದೇಶಕ ರಂಗಸ್ವಾಮಿ ಅವರು ನನಗೆ ಹದಿನೈದು ವರ್ಷಗಳ ಪರಿಚಯ. ಅವರ ಸಿನಿಮಾ ಮಾಡುವ ಕನಸು ಈಗ ನನಸಾಗಿದೆ. ಒಳ್ಳೆಯ ತಂಡ ಕಟ್ಟಿಕೊಂಡು ಸಿನಿಮಾ ಮಾಡಿದ್ದಾರೆ ತಂಡಕ್ಕೆ ಹಾಗೂ ಚಿತ್ರಕ್ಕೆ ಒಳ್ಳೆಯದಾಗಲಿ ಎಂದರು

ಮೊದಲ ಬಾರಿಗೆ ನಟಿಸಿದ್ದೇನೆ. ಆರಂಭದ ಚಿತ್ರದಲ್ಲಿ ಪಾರ್ವತಿ ದೇವಿಯ ಪಾತ್ರದ ಮೂಲಕ ಚಿತ್ರರಂಗಕ್ಕೆ ಪ್ರವೇಶ ಮಾಡಿರುವುದು ಖುಷಿ ಕೊಟ್ಟಿದೆ ಎಂದು ನಟಿ ಸಂಜನಾ ಹೇಳಿದರು.

ಕಲಾವಿದ ಸೂರ್ಯ ಪ್ರವೀಣ್ ಮಾತನಾಡಿ ಹಾಡು ಚೆನ್ನಾಗಿ ಬಂದಿದೆ. ಇದರಲ್ಲಿ ನನ್ನದು ವಿಭಿನ್ನ ಪಾತ್ರ ಎಂದರು.ಕಲಾವಿದ ನಾಗರಾಜ್ ಮಾತನಾಡಿ ಮೊದಲ ಬಾರಿಗೆ ಪೋಸ್ಟರ್ ನಲ್ಲಿ ಕಾಣಿಸಿಕೊಳ್ಳುವಂತಹ ಮುಖ್ಯ ಪಾತ್ರ ಮಾಡಿದ್ದೇನೆ. ಚಿತ್ರ ಚೆನ್ನಾಗಿ ಮೂಡಿಬಂದಿದೆ. ಮಗಳಿಗಾಗಿ ಅಪ್ಪ ಏನೆಲ್ಲಾ ಮಾಡುತ್ತಾನೆ ಅನ್ನುವುದು ಚಿತ್ರದ ತಿರುಳು ಎಂದರು.



**ಕನ್ನಡದಲ್ಲಿ ನಾಲ್ಕು ಚಿತ್ರದಲ್ಲಿ ನಾಯಕಿಯಾಗಿ ಮಿಂಚಿರುವ ಬೆಳಗಾವಿಯ ರಂಗಭೂಮಿ ಪ್ರತಿಭೆ ಸೌಮ್ಯಾ ಸುಭಾಷ್ ಇದೀಗ ಇನ್ನೆರಡು ಚಿತ್ರದಲ್ಲಿ ಅಭಿನಯಕ್ಕೆ ಸಿದ್ಧತೆ ನಡೆಸಿದ್ದಾರೆ.**

# ಈ ವಾರ ತೆರೆಗೆ `ಆಲ್ಫಾ'



ಆಲ್ಫಾ " ಚಿತ್ರ ಈ ವಾರ ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ. ಐ ೦ ಪ್ರೊಡಕ್ಷನ್ಸ್ ಲಾಂಛನದಲ್ಲಿ ಆನಂದಕುಮಾರ್ ನಿರ್ಮಿಸಿರುವ ಈ ಚಿತ್ರವನ್ನು ವಿಜಯ್ ನಿರ್ದೇಶಿಸಿದ್ದಾರೆ.

ಹೇಮಂತ್ ಕುಮಾರ್ ಈ ಚಿತ್ರದ ನಾಯಕನಾಗಿ ಅಭಿನಯಿಸುವ ಮೂಲಕ ಕನ್ನಡ ಚಿತ್ರರಂಗಕ್ಕೆ ನವನಾಯಕನಟನಾಗಿ ಹೆಜ್ಜೆ ಇಡುತ್ತಿದ್ದಾರೆ.

ನಾಯಕಿಯಾಗಿ ಗೋಪಿಕಾ ಸುರೇಶ್ ಹಾಗೂ ಅಯನಾ ನಟಿಸಿದ್ದಾರೆ. " ಬಿಗ್ ಬಾಸ್" ಖ್ಯಾತಿಯ ಕಾರ್ತಿಕ್ ಮಹೇಶ್ ವಿಶೇಷಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಅವಿನಾಶ್, ಅಚ್ಯುತ್ ಕುಮಾರ್, ರಮೇಶ್ ಇಂದಿರಾ, ಬಾಲು ನಾಗೇಂದ್ರ, ಮಾನಸಿ ಸುಧೀರ್, ಗಿರಿರಾಜ್, ರಾಘು ಶಿವಮೊಗ್ಗ ಹೀಗೆ ಅನುಭವಿ ಕಲಾವಿದರ ದೊಡ್ಡ ತಾರಾಬಳಗವೇ ಈ ಚಿತ್ರದಲ್ಲಿದೆ.

ನಾಗಾರ್ಜುನ ಶರ್ಮ ಅವರು ಬರೆದಿರುವ ಐದು ಹಾಡುಗಳು ಚಿತ್ರದಲ್ಲಿದ್ದು, ಹೆಸರಾಂತ ಸಂಗೀತ ನಿರ್ದೇಶಕ ಜೆ.ಅನೂಪ್ ಸೀಳಿನ್ ಸಂಗೀತ ಸಂಯೋಜಿಸಿದ್ದಾರೆ. ಕಾರ್ತಿಕ್ ಎಸ್ ಛಾಯಾಗ್ರಹಣ, ದೀಪು ಎಸ್ ಕುಮಾರ್ ಸಂಕಲನ, ಚಂಪಕಧಾಮ ಬಾಬು ನಿರ್ಮಾಣ ನಿರ್ವಹಣೆ, ಅಮರ್ ಕಲಾ ನಿರ್ದೇಶನ ಹಾಗೂ ಭೂಷಣ್ ನೃತ್ಯ ನಿರ್ದೇಶನವಿರುವ ಈ ಚಿತ್ರಕ್ಕೆ ಜನಪ್ರಿಯ ಸಂಭಾಷಣೆಗಾರ ಮಾಸ್ತಿ ಸಂಭಾಷಣೆ ಬರೆದಿದ್ದಾರೆ. ಮೈನವಿರೇಳಿಸುವ ಸಾಹಸ ಸನ್ನಿವೇಶಗಳು ಚಿತ್ರದಲ್ಲಿದ್ದು, ವಿಜಯ್, ವಿನೋದ್, ಅರ್ಜುನ್ ರಾಜ್ ಹಾಗೂ ಯೋಗಾನಂದ ಸಾಹಸ ನಿರ್ದೇಶನ ಮಾಡಿದ್ದಾರೆ.

# ಪ್ರಜ್ವಲ್ ದೇವರಾಜ್ ಅಭಿನಯದ `ಚೀತಾ' ಚಿತ್ರದ ಚಿತ್ರೀಕರಣ ಪೂರ್ಣ

ಆರಂಭದಿಂದಲೂ ಕುತೂಹಲ ಮೂಡಿಸಿದೆ ನೃತ್ಯ ನಿರ್ದೇಶಕ ರಾಜಾ ಕಲ್ಯೆ ಕುಮಾರ್ ನಿರ್ದೇಶನದ ಮೊದಲ ಚಿತ್ರ .

ರಾಜಲಕ್ಷ್ಮಿ ಎಂಟರ್ಟೈನ್ಮೆಂಟ್ ಲಾಂಛನದಲ್ಲಿ ಶ್ರೀಮತಿ ಪ್ರತಿಭಾ ನಿರ್ಮಿಸುತ್ತಿರುವ, ನೃತ್ಯ ನಿರ್ದೇಶಕ ರಾಜಾ ಕಲ್ಯೆ ಕುಮಾರ್ ಪ್ರಥಮ ನಿರ್ದೇಶನದ ಹಾಗೂ ಪ್ರಜ್ವಲ್ ದೇವರಾಜ್ – ಮೇಘ ಶೆಟ್ಟಿ ನಾಯಕ – ನಾಯಕಿಯಾಗಿ ನಟಿಸಿರುವ "ಚೀತಾ" ಚಿತ್ರದ ಚಿತ್ರೀಕರಣ ಮುಕ್ತಾಯವಾಗಿದೆ. ರಾಕ್ಲೈನ್ ಸ್ಟುಡಿಯೋದಲ್ಲಿ ನಿರ್ಮಿಸಲಾಗಿದ್ದ ಅದ್ದೂರಿ ಸೆಟ್ ನಲ್ಲಿ ಪ್ರಜ್ವಲ್ ದೇವರಾಜ್ ಹಾಗೂ ಮೇಘ ಶೆಟ್ಟಿ ಅಭಿನಯದಲ್ಲಿ ಮೂಡಿಬಂದ ಯುಗಳಗೀತೆಯೊಂದರ ಚಿತ್ರೀಕರಣದೊಂದಿಗೆ ಈ ಚಿತ್ರದ ಚಿತ್ರೀಕರಣ ಪೂರ್ಣಗೊಂಡಿದೆ.

ಅಂತಿಮ ದಿನದ ಚಿತ್ರೀಕರಣದ ದಿನ ಮಾಧ್ಯಮದವರನ್ನು ಚಿತ್ರೀಕರಣದ ಸ್ಥಳಕ್ಕೆ ಆಹ್ವಾನಿಸಿದ್ದ ಚಿತ್ರತಂಡ ಅದೇ ಸ್ಥಳದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಚಿತ್ರದ ಕುರಿತು ಮಾಹಿತಿ ನೀಡಿದರು.

ನಾನು ಚಿತ್ರರಂಗಕ್ಕೆ ಬಂದು 25 ವರ್ಷಗಳಾಯಿತು. ನೃತ್ಯ ಕಲಾವಿದನಾಗಿ, ನೃತ್ಯ ನಿರ್ದೇಶಕನಾಗಿ ಕಾರ್ಯ ನಿರ್ವಹಿಸಿದ್ದೇನೆ ಎಂದು ಮಾತನಾಡಿದ ನಿರ್ದೇಶಕ ರಾಜಾ ಕಲ್ಯೆ ಕುಮಾರ್, ಇದು ನನ್ನ ನಿರ್ದೇಶನದ ಮೊದಲ ಚಿತ್ರ. "ಚೀತಾ", ಮಾರ್ಕೆಟ್ ನಲ್ಲೇ ನಡೆಯುವ ಕಥೆ. ಮಾರುಕಟ್ಟೆಯಲ್ಲೇ ಹುಟ್ಟಿಬೆಳೆದ ಹುಡುಗನೊಬ್ಬನ ಕಥೆ ಕೂಡ. ಆ ಹುಡುಗನ ಪಾತ್ರದಲ್ಲಿ ಪ್ರಜ್ವಲ್ ಅವರು ಅಭಿನಯಿಸಿದ್ದಾರೆ. ಮಾರುಕಟ್ಟೆಯಲ್ಲಿ ನಡೆಯುವ ಅವ್ಯವಹಾರಗಳ ವಿರುದ್ಧ ಹೋರಾಟ ಮಾಡುವ ಹೋರಾಟಗಾರನ ಪಾತ್ರ ಅವರದು. ನಮ್ಮ ಚಿತ್ರದಲ್ಲಿ ಪ್ರೀತಿ , ಸೆಂಟಿಮೆಂಟ್ ಹೀಗೆ ಜನರಿಗೆ ಬೇಕಾಗುವ ಎಲ್ಲಾ ರೀತಿಯ ಅಂಶಗಳು ಇದೆ. ಇದು ಮಾರ್ಕೇಟ್ ನಲ್ಲೇ ನಡೆಯುವ ಕಥೆಯಾಗಿರುವುದರಿಂದ ಕಲಾ ನಿರ್ದೇಶಕ ಶಿವಕುಮಾರ್ ಅವರ ನೇತೃತ್ವದಲ್ಲಿ ಹೆಚ್ ಎಂ ಟಿ ಆವರಣದಲ್ಲಿ ಬೃಹತ್ ಸೆಟ್ ಹಾಕಿ ಅಲ್ಲೇ ಹೆಚ್ಚಿನ ಚಿತ್ರೀಕರಣ ನಡೆದಿದೆ. ರಾಮನಗರ, ಕೋಲಾರದಲ್ಲೂ ಚಿತ್ರೀಕರಣವಾಗಿದೆ. ಚಿತ್ರದಲ್ಲಿ ಐದು ಹಾಡುಗಳು ಹಾಗೂ ಆರು ಸಾಹಸ ಸನ್ನಿವೇಶಗಳಿದೆ. ಸುಮಾರು 150 ರಿಂದ 200 ಜನ ಸಹ ಕಲಾವಿದರು ಪ್ರತಿದಿನ ಚಿತ್ರೀಕರಣದಲ್ಲಿ ಪಾಲ್ಗೊಂಡಿದ್ದರು. ಪ್ರಜ್ವಲ್ ದೇವರಾಜ್, ಮೇಘ ಶೆಟ್ಟಿ, ರಂಗಾಯಣ ರಘು, ಶೃತಿ ಹರಿಹರನ್, ಚಿನ್ನಿಪ್ರಕಾಶ್(ನೃತ್ಯ ನಿರ್ದೇಶಕ), ಗುರು ಜಗ್ಗೇಶ್, ಶಿವರಾಜ ಕೆ.ಆರ್ ಪೇಟೆ, ಸುನೀಲ್(ತೆಲುಗು), ಶ್ರೀಧರ್, ಬಲ ರಾಜ್ ವಾಡಿ, ಟೆನ್ನಿಸ್ ಕೃಷ್ಣ ಮುಂತಾದವರು ಈ ಚಿತ್ರದ ತಾರಾಬಳಗದಲ್ಲಿದ್ದಾರೆ. ನಿರ್ಮಾಪಕಿ ಪ್ರತಿಭಾ ಅವರು ಯಾವುದೇ ಕೊರತೆ ಬಾರದ ಹಾಗೆ ಈ ಸಿನಿಮಾವನ್ನು ಅದ್ದೂರಿಯಾಗಿ ನಿರ್ಮಾಣ ಮಾಡಿದ್ದಾರೆ. ಇಂದು ರಾಕ್ಲೈನ್ ಸ್ಟುಡಿಯೋದಲ್ಲಿ ಮೂರು ವಿಭಿನ್ನ ಸೆಟ್ ಗಳನ್ನು ಹಾಕಿ ಯುಗಳಗೀತೆಯೊಂದನ್ನು ಚಿತ್ರಿಸಿಕೊಳ್ಳುವುದರೊಂದಿಗೆ "ಚೀತಾ" ಚಿತ್ರದ ಚಿತ್ರೀಕರಣ ಪೂರ್ಣಗೊಳಿಸಲಾಗಿದೆ. ಚಿತ್ರತಂಡದ ಸಹಕಾರದಿಂದ "ಚೀತಾ" ಚೆನ್ನಾಗಿ ಮೂಡಿಬರುತ್ತಿದೆ. ಇದನ್ನು ಕಂಡು ಖುಷಿಯಾಗಿರುವ ನಿರ್ಮಾಪಕರು ಸದ್ಯದಲ್ಲೇ ಇದೇ ತಂಡದೊಂದಿಗೆ ಮತ್ತೊಂದು ಚಿತ್ರ ಮಾಡಲು ಮುಂದಾಗಿದ್ದಾರೆ ಎಂದರು.



ನಿರ್ದೇಶಕರು ಹೇಳಿದ ಹಾಗೆ ನನ್ನದು ಈ ಚಿತ್ರದಲ್ಲಿ ಮಾರ್ಕೆಟ್ ನಲ್ಲೇ ಬೆಳೆಯುವ ಅನಾಥ ಹುಡುಗನ ಪಾತ್ರ. ಅಲ್ಲಿರುವ ಪ್ರತಿಯೊಬ್ಬರು ಜಾತಿಮತ ಭೇದವಿಲ್ಲದೆ ನನ್ನನ್ನು ಪ್ರೀತಿಸುತ್ತಿರುತ್ತಾರೆ. ನನಗೂ ಅವರನ್ನು ಕಂಡರೆ ಅಷ್ಟೇ ಪ್ರೀತಿ. ಅಲ್ಲಿ ನಡೆಯುವ ಕೆಮಿಕಲ್ ಮಾಫಿಯಾ ಸೇರಿದಂತೆ ಅನೇಕ ಅವ್ಯವಹಾರಗಳ ವಿರುದ್ಧ ಹೋರಾಡುತ್ತೇನೆ. ಮಾರ್ಕೆಟ್ ನಲ್ಲಿ "ಚೀತಾ" ಅಬ್ಬರ ಜೋರಾಗಿರುತ್ತದೆ. ಮುಂದೆ ಟೀಸರ್ ಹಾಗೂ ಟ್ರೇಲರ್ ನಲ್ಲಿ ಅದರ ಪರಿಚಯವಾಗುತ್ತದೆ. ಇಂದು ಚಿತ್ರೀಕರಣದ ಕೊನೆಯ ದಿನ. ಒಂದೊಳ್ಳೆ ಚಿತ್ರದಲ್ಲಿ ಅಭಿನಯಿಸಿರುವ ತೃಪ್ತಿಯಿದೆ. ಕಲ್ಯೆ ಮಾಸ್ಟರ್ ಅವರ ನಿರ್ದೇಶನ, ಸಹ ಕಲಾವಿದರ ಅಭಿನಯ ಹಾಗೂ ತಂತ್ರಜ್ಞರ ಕಾರ್ಯ ವೈಖರಿ ಎಲ್ಲವೂ ಚೆನ್ನಾಗಿದೆ. "ಚೀತಾ" ಎಲ್ಲರಿಗೂ ಇಷ್ಟವಾಗುವ ಚಿತ್ರವಾಗಲಿದೆ ಎಂದು ನಾಯಕ ಪ್ರಜ್ವಲ್ ದೇವರಾಜ್ ತಿಳಿಸಿದರು.

ನಾನು ಈವರೆಗೂ ಮಾಡಿರದ ಪಾತ್ರದಲ್ಲಿ ಕಾಣಿಸಿಕೊಂಡಿದ್ದೀನಿ ಎಂದು ಮಾತನಾಡಿದ ನಾಯಕಿ ಮೇಘ ಶೆಟ್ಟಿ, ಚಿತ್ರದಲ್ಲಿ ನಟಿಸಲು ಅವಕಾಶ ಮಾಡಿಕೊಟ್ಟ ನಿರ್ದೇಶಕ ರಾಜಾ ಕಲ್ಯೆಕುಮಾರ್ ಹಾಗೂ ನಿರ್ಮಪಕಿ ಪ್ರತಿಭಾ ಅವರಿಗೆ ಧನ್ಯವಾದ ಹೇಳಿದರು.

ನಿರ್ದೇಶಕರು ಹೇಳಿದ ಹಾಗೆ "ಚೀತಾ" ಚಿತ್ರದ ಚಿತ್ರೀಕರಣ ಮುಗಿಸಿ ಕೊಟ್ಟಿದ್ದಾರೆ. ಪ್ರಜ್ವಲ್ ದೇವರಾಜ್ ಅವರು ಸೇರಿದಂತೆ ಎಲ್ಲಾ ಕಲಾವಿದರು ಚೆನ್ನಾಗಿ ನಟಿಸಿದ್ದಾರೆ. ತಂತ್ರಜ್ಞರು ಉತ್ತಮವಾಗಿ ಕಾರ್ಯ ನಿರ್ವಹಿಸಿದ್ದಾರೆ. ಈ ಸಂದರ್ಭದಲ್ಲಿ ನಾನು ಇಡೀ ಚಿತ್ರತಂಡಕ್ಕೆ ಧನ್ಯವಾದ ತಿಳಿಸುತ್ತೇನೆ ಎಂದರು ನಿರ್ಮಾಪಕಿ ಪ್ರತಿಭಾ. ಛಾಯಾಗ್ರಾಹಕ ಗುರುಪ್ರಸಾದ್ ನಾರ್ನಾಡ್ ಸಹ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from Mihir Akash K.R, #78, Daya Marga Near Geetha School, Siddartha Nagar Mysore-570011, Editor K.N Ravi,